

ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 178, ಪುಟಗಳು: 8, ಶನಿವಾರ, 6 ಏಪ್ರಿಲ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ


ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಶನಿವಾರ 6, ಏಪ್ರಿಲ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ ,ಶಿಶಿರ ಋತು,
- ಫಾಲ್ಗುಣ ಮಾಸ, ಕೃಷ್ಣ ಪಕ್ಷ,
- ದ್ವಾದಶಿ, ಶನಿವಾರ, ಶತಭಿಷ ನಕ್ಷತ್ರ
- ರಾಹುಕಾಲ: 09:22 ರಿಂದ 10:54
- ಗುಳಿಕಕಾಲ: 06:17 ರಿಂದ 07:50
- ಯಮಗಂಡಕಾಲ: 01:58 ರಿಂದ 03:30

## ಸಂಕ್ಷಿಪ್ತ ಸುದ್ದಿ

### ಏಳೆಂಟು ದಿನದಲ್ಲಿ ಬಿಜೆಪಿ ಪ್ರಣಾಳಿಕೆ ಬಿಡುಗಡೆ



**ನವದೆಹಲಿ:** ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯನ್ನು ದೇಶದ ಜನರ ಮುಂದೆ ಇಟ್ಟಿದ್ದು ಭರಪೂರ ಕೊಡುಗೆಗಳನ್ನು ಘೋಷಣೆ ಮಾಡಿದೆ. ಈ ನಡುವೆ ಬಿಜೆಪಿಯ ಪ್ರಣಾಳಿಕೆ ಬಿಡುಗಡೆ ಯಾವಾಗ ಎಂಬ ಕುತೂಹಲ ಹೆಚ್ಚಿದ್ದು ಅದಕ್ಕೆ ಪ್ರಣಾಳಿಕೆ ಸಮಿತಿ ಅಧ್ಯಕ್ಷ ರಾಜನಾಥ್ ಸಿಂಗ್ ಉತ್ತರವನ್ನು ಕೊಟ್ಟಿದ್ದಾರೆ. ಸುದ್ದಿ ವಾಹಿನಿವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ರಾಜನಾಥ್ ಸಿಂಗ್ ಇನ್ನು ಏಳೆಂಟು ದಿನದಲ್ಲಿ ಪ್ರಣಾಳಿಕೆ ಬಿಡುಗಡೆಯಾಗಲಿದೆ. ಈಗಾಗಲೇ ಬಹುತೇಕ ಕೆಲಸ ಮುಗಿದಿದ್ದು ಅಂತಿಮ ಹಂತದ ಪರಿಶೀಲನೆ ನಡೆಯುತ್ತಿದೆ ಎಂದು ಹೇಳಿದ್ದಾರೆ.

ಪುಟ 2

### ಚುನಾವಣಾ ಚೆಕ್ ಪೋಸ್ಟ್‌ಗೆ ಲಾರಿ ಡಿಕ್ಕಿ ಸಿಬ್ಬಂದಿ ಪಾರು



**ರಾಮನಗರ:** ಚುನಾವಣಾ ಚೆಕ್ ಪೋಸ್ಟ್‌ಗೆ ಡಿಕ್ಕಿ ಹೊಡೆದು ಲಾರಿ ಪಲ್ಟಿಯಾದ ಘಟನೆ ಚನ್ನಪಟ್ಟಣ ತಾಲೂಕಿನ ಕೋಲೂರು ಗ್ರಾಮದ ಬಳಿ ತಡರಾತ್ರಿ ನಡೆದಿದೆ. ಮರದ ಹೊಟ್ಟು ತುಂಬಿಕೊಂಡು ಮಂಡ್ಯದಿಂದ ಬೆಂಗಳೂರು ಕಡೆಗೆ ಹೋಗುತ್ತಿದ್ದ ಲಾರಿ ಚೆಕ್ ಪೋಸ್ಟ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಅದೃಷ್ಟವಶಾತ್ ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಕರ್ತವ್ಯ ನಿರತರಾಗಿದ್ದ ಸಿಬ್ಬಂದಿ ಪಾರಾಗಿದ್ದಾರೆ. ಚಾಲಕ ಮದ್ಯಪಾನ ಮಾಡಿ ಲಾರಿ ಚಲಾಯಿಸಿದ್ದರಿಂದ ಈ ಅಪಘಾತ ಸಂಭವಿಸಿದೆ. ಚನ್ನಪಟ್ಟಣ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಲಾರಿ ಚಾಲಕನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

# ರಾಮೇಶ್ವರಂ ಕೆಫೆ ಸ್ಫೋಟಕ್ಕೆ ಟ್ವಿಸ್ಟ್: ಎ1 ಆರೋಪಿ ಅರೆಸ್ಟ್!

**ಬೆಂಗಳೂರು:** ರಾಮೇಶ್ವರಂ ಕೆಫೆ ಪ್ರಕರಣಕ್ಕೆ ಸ್ಫೋಟಕ ಟ್ವಿಸ್ಟ್ ಸಿಕ್ಕಿದ್ದು, ಕೇಸ್‌ನಲ್ಲಿ ಈಗಾಗಲೇ ಇಬ್ಬರ ಬಂಧನ ಮಾಡಲಾಗಿದೆ. ಆಶ್ಚರ್ಯವಾದರೂ ಇದು ನಿಜವಾದ ಸಂಗತಿ.

ಶಿವಮೊಗ್ಗದಲ್ಲಿ ಟ್ರಯಲ್ ಬಾಂಬ್ ಸ್ಫೋಟ ಪ್ರಕರಣದಲ್ಲಿ ಈಗಾಗಲೇ ಜೈಲು ಸೇರಿದ ಮಾಝ್ ಮುನೀರ್‌ನನ್ನೇ ಈ ಪ್ರಕರಣದಲ್ಲಿ ರಾಷ್ಟ್ರೀಯ ತನಿಖಾ ದಳ ಮೊದಲ ಆರೋಪಿಯನ್ನಾಗಿ ಮಾಡಿದೆ. ಜೈಲು ಸೇರುವ ಮೊದಲೇ ಕೆಲವೊಂದು ಕಡೆ ಸ್ಫೋಟಕ್ಕೆ ಪ್ಲ್ಯಾನ್ ಮಾಡಿದ ಹಿನ್ನೆಲೆಯಲ್ಲಿ ಆತನನ್ನೇ ಎ1 ಆರೋಪಿಯನ್ನಾಗಿ ಮಾಡಿದೆ ಎಂದು ಮೂಲಗಳು ತಿಳಿಸಿವೆ.

ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದ ಮಾಝ್ ಮುನೀರ್‌ನನ್ನು ಎನ್‌ಐಎ ಅಧಿಕಾರಿಗಳು 7 ದಿನಗಳ ಕಾಲ ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದರು. ಜೈಲಿನಲ್ಲಿ ರೇಡ್ ಮಾಡಿದ ಬಳಿಕ




ಮಾಝ್ ಬ್ಯಾರಕ್‌ನಲ್ಲಿ ಕೆಲವೊಂದು ಪತ್ರಗಳು ಸಿಕ್ಕಿದ್ದವು. ಅವುಗಳು ಪ್ರಕರಣಕ್ಕೆ ಮಹತ್ವದ ತಿರುವು ನೀಡಿದ ಹಿನ್ನೆಲೆಯಲ್ಲಿ ಮೊದಲ ಆರೋಪಿಯನ್ನಾಗಿ ಮಾಡಲಾಗಿದೆ.

ಎರಡು ಮತ್ತು ಮೂರನೇ ಆರೋಪಿಗಳನ್ನಾಗಿ ಮತೀನ್ ಮತ್ತು ಮುಸಾವೀರ್ ಹೆಸರನ್ನು ಉಲ್ಲೇಖಿಸಲಾಗಿದ್ದು, ಈಗ ಬಂಧನ ಆಗಿರೋ ಮುಜಾಮಿಲ್ ಷರೀಫ್ ನಾಲ್ಕನೇ ಆರೋಪಿಯನ್ನಾಗಿ ಮಾಡಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

**ಏನಿದು ಶಿವಮೊಗ್ಗ ಸ್ಫೋಟ ಕೇಸ್?:** ಬಂಧನಕ್ಕೆ ಒಳಗಾಗಿರುವ ಸೈಯದ್ ಯಾಸಿನ್, ಮಾಜ್ ಮುನೀರ್, ಶಾರೀಕ್ ಅಹ್ಮದ್ ಶಿವೊಗ್ಗದ ಅಕ್ಷರ ಕಾಲೇಜಿನಲ್ಲಿ ಒಟ್ಟಿಗೆ ದ್ವಿತೀಯ ಪಿಯುಸಿ ಅಭ್ಯಾಸ ಮಾಡಿದ್ದರು. ಬಳಿಕ ಯಾಸಿನ್ ಶಿವಮೊಗ್ಗದಲ್ಲಿ ಎಂಜಿನಿಯರಿಂಗ್ ಓದಿದ್ದರೆ ಮುನೀರ್ ಮಂಗಳೂರಿನ ಮುಡಿಪು ಸಮಿಪದ ಕಾಲೇಜಿನಲ್ಲಿ ಅಂತಿಮ ವರ್ಷದ ಎಂಟೆಕ್ ಓದುತ್ತಿದ್ದ. ತೀರ್ಥಹಳ್ಳಿ ಮೂಲದ ಶಾರೀಕ್ ಮಹ್ಮದ್ ಬಟ್ಟೆ ಅಂಗಡಿಯೊಂದರಲ್ಲಿ ಸೇಲ್ಸ್ ಮ್ಯಾನ್ ಆಗಿ ಕೆಲಸ ಮಾಡಿಕೊಂಡಿದ್ದ.

ಸೈಯದ್ ಯಾಸಿನ್ ನಿವಾಸದಿಂದ 3-4 ದೂರದಲ್ಲಿರುವ ಪುರಲೆ ಸಮೀಪದ ತುಂಗಾ ನದಿ ತೀರದಲ್ಲಿ ಇವರೆಲ್ಲ ಟ್ರಯಲ್ ಬಾಂಬ್ ಸ್ಫೋಟ ಮಾಡುತ್ತಿದ್ದರು. ಈ ಮೂವರು ಶಿವಮೊಗ್ಗವನ್ನು ಕೇಂದ್ರ ಸ್ಥಳವನ್ನಾಗಿಸಿಕೊಂಡು ಮಂಗಳೂರು ಸೇರಿದಂತೆ ವಿವಿಧೆಡೆ ಉಗ್ರ ಚಟುವಟಿಕೆ ನಡೆಸಲು ಸಂಚು ರೂಪಿಸಿದ್ದರು. ಮೂವರೂ ಬಾಂಬ್ ತಯಾರಿಸುವ ಬಗ್ಗೆ ತರಬೇತಿ ಪಡೆದಿದ್ದರು.

**ಈ ಆರೋಪಿಗಳು ಅರೆಸ್ಟ್ ಆಗಿದ್ದು ಹೇಗೆ?:** 2022ರ ಆಗಸ್ಟ್ 15ರಂದು ಸಾವರ್ಕರ್ ಫ್ಲೆಕ್ಸ್ ಹಾಕುವ ವಿಚಾರದಲ್ಲಿ ಶಿವಮೊಗ್ಗದಲ್ಲಿರುವ ಅಮೀರ್ ಅಹಮದ್ ವೃತ್ತದಲ್ಲಿ ಘರ್ಷಣೆ ನಡೆಯುತ್ತದೆ. ಈ ಸಂದರ್ಭದಲ್ಲಿ ಬಟ್ಟೆ ಅಂಗಡಿ ನೌಕರ ಪ್ರೇಮ್ ಸಿಂಗ್‌ಗೆ ಚಾಕು ಇರಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಜಬೀಯುಲ್ಲಾ ಎಂಬಾತನ ಬಂಧನವಾಗುತ್ತದೆ. ಆತನ ವಿಚಾರಣೆ ಮತ್ತು ಮೊಬೈಲ್ ದಾಖಲೆ ಪರಿಶೀಲನೆಯ ವೇಳೆ ಆತ

ಪುಟ 2

## 17 ರಾಜ್ಯಗಳಲ್ಲಿ ಸರ್ಕಾರ, 303 ಸಂಸದರು, 44 ವರ್ಷಗಳ ಪಯಣ

# ಬಿಜೆಪಿ ಹಿನ್ನೋಟ

**ನವದೆಹಲಿ:** ಭಾರತೀಯ ಜನತಾ ಪಕ್ಷ ಇಂದು, ಅಂದರೆ ಏಪ್ರಿಲ್ 6 ರಂದು ಸಂಸ್ಥಾಪನಾ ದಿನ ಆಚರಿಸುತ್ತಿದೆ. ಪಕ್ಷದ ಅಧ್ಯಕ್ಷ ಜೆಪಿ ನಡ್ಡಾ ಇಂದು ಬಿಜೆಪಿ ಕೇಂದ್ರ ಕಚೇರಿಯಲ್ಲಿ ಪಕ್ಷದ ಧ್ವಜಾರೋಹಣ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ನಡ್ಡಾ ಜನಸಂಘದ ಮುಖಂಡರಾದ ದೀನದಯಾಳ್ ಉಪಾಧ್ಯಾಯ ಮತ್ತು ಶ್ಯಾಮ ಪ್ರಸಾದ್ ಮುಖರ್ಜಿ ಅವರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಲಿದ್ದಾರೆ. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಮತ್ತು ಹಿರಿಯ ನಾಯಕ ಲಾಲ್ ಕೃಷ್ಣ ಅಡ್ವಾಣಿ 1980 ರ ಏಪ್ರಿಲ್ 6 ರಂದು ಬಿಜೆಪಿಯನ್ನು ಸ್ಥಾಪಿಸಿದರು. ಲೋಕಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಬಿಜೆಪಿಯು ಸಂಸ್ಥಾಪನಾ ದಿನದಂದು ದೇಶಾದ್ಯಂತ 10 ಲಕ್ಷಕ್ಕೂ ಹೆಚ್ಚು ಬೂತ್‌ಗಳಲ್ಲಿ 'ಮತ್ತೊಮ್ಮೆ ಮೋದಿ ಸರ್ಕಾರ' ಎಂಬ ಘೋಷಣೆಯೊಂದಿಗೆ ವಿಶೇಷ ಕಾರ್ಯಕ್ರಮ ಆಯೋಜಿಸುತ್ತಿದೆ.

ಭಾರತೀಯ ಜನತಾ ಪಕ್ಷದ ಆರಂಭದಿಂದ ಇಂದಿನವರೆಗೆ 44 ವರ್ಷಗಳ ಪಯಣ ಹೇಗಿತ್ತು ಎಂಬ ಸಂಕ್ಷಿಪ್ತ ನೋಟ ಇಲ್ಲಿದೆ. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಮತ್ತು ಲಾಲ್ ಕೃಷ್ಣ ಅಡ್ವಾಣಿ 1980 ರ ಏಪ್ರಿಲ್ 6 ರಂದು ಒಟ್ಟಿಗೆ ಬಿಜೆಪಿಗೆ ಅಡಿಪಾಯವನ್ನು ಹಾಕಿದರು. ಅಟಲ್ ಬಿಹಾರಿ ವಾಜಪೇಯಿ ಸ್ಥಾಪಕ ಅಧ್ಯಕ್ಷರಾಗಿದ್ದರು. 1984ರ ಚುನಾವಣೆಯಲ್ಲಿ ಕೇವಲ 2 ಮಂದಿ ಬಿಜೆಪಿ



ಅಭ್ಯರ್ಥಿಗಳು ಗೆದ್ದಿದ್ದರು. ಇದಾದ ಬಳಿಕವೂ ಪಕ್ಷ ಬಲವರ್ಧನೆಗಾಗಿ ಹೋರಾಟ ಮುಂದುವರಿಸಿತ್ತು. 1989ರ ಚುನಾವಣೆ ಬಿಜೆಪಿ ಪಾಲಿಗೆ ಸ್ಮರಣೀಯ. ಈ ಚುನಾವಣೆಯಲ್ಲಿ ಅದು 85 ಸ್ಥಾನಗಳನ್ನು ಗೆದ್ದಿತ್ತು.

ಪ್ರಧಾನಿಯಾದ ಅಟಲ್ ಬಿಹಾರಿ ವಾಜಪೇಯಿ

1991 ರಲ್ಲಿ ಬಿಜೆಪಿ 120 ಸ್ಥಾನಗಳನ್ನು ಗೆದ್ದಿತ್ತು, ನಂತರ 1996 ಬಿಜೆಪಿಗೆ ಐತಿಹಾಸಿಕ ವರ್ಷವಾಗಿತ್ತು. ಬಿಜೆಪಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿತು ಮತ್ತು ಅಟಲ್ ಬಿಹಾರಿ ವಾಜಪೇಯಿ ದೇಶದ ಪ್ರಧಾನಿಯಾದರು. ನಂತರ 1998ರ ಚುನಾವಣೆಯಲ್ಲಿ ಬಿಜೆಪಿಯ 182 ಅಭ್ಯರ್ಥಿಗಳು ಆಯ್ಕೆಯಾದರು. ಅದರ ನಂತರ, 1999 ರಲ್ಲಿ, ಬಿಜೆಪಿ ಮತ್ತೊಮ್ಮೆ ಗೆಲುವು ಸಾಧಿಸಿತು ಮತ್ತು ವಾಜಪೇಯಿ ಮೂರನೇ ಬಾರಿಗೆ ಪ್ರಧಾನಿಯಾದರು. ಇದಾದ ನಂತರ 2004ರವರೆಗೆ ವಾಜಪೇಯಿ ನೇತೃತ್ವದಲ್ಲಿ ಎನ್‌ಡಿಎ ಸರ್ಕಾರ ಅಸ್ತಿತ್ವದಲ್ಲಿತ್ತು.

**2014ರಲ್ಲಿ ಮೋದಿ ಮ್ಯಾಜಿಕ್:** ಭಾರತೀಯ ಜನತಾ ಪಕ್ಷವು 2004 ರ ನಂತರ ಸತತ 10 ವರ್ಷಗಳ ಕಾಲ ಅಧಿಕಾರವನ್ನು ಮರಳಿ ಪಡೆಯಲು ಹೆಣಗಾಡಿತು. ಆದರೆ 2014 ರಲ್ಲಿ ಅದು ಬಂಪರ್ ಗೆಲುವು ಸಾಧಿಸಿತು. 2019 ರ ಚುನಾವಣೆಯಲ್ಲಿ ಕಾರ್ಯಕ್ಷಮತೆಯನ್ನು ಮತ್ತಷ್ಟು ಸುಧಾರಿಸಿತು. ಮೋದಿ ಮ್ಯಾಜಿಕ್‌ನಿಂದಾಗಿ ಬಿಜೆಪಿ 2014, 2019ರಲ್ಲಿ ಭರ್ಜರಿ ಗೆಲುವು ಸಾಧಿಸಿತು.

**2019ರಲ್ಲೂ ಭಾರಿ ಬಹುಮತ:** 2014ರ ನಂತರ 2019 ರಲ್ಲಿಯೂ ಮನೆ ಮನೆಗಳಲ್ಲೂ ಮೋದಿ, ಮೋದಿ ಅಲೆ ಕೇಳಿ ಬರಲಾರಂಭಿಸಿತ್ತು. ಇದರಿಂದಾಗಿ 2019ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿತು, ಪಕ್ಷವು ಭಾರಿ ಬಹುಮತವನ್ನು ಪಡೆದುಕೊಂಡಿತು. 303 ಸ್ಥಾನಗಳನ್ನು ಗೆದ್ದು, ಮತ್ತೊಮ್ಮೆ ಪ್ರಧಾನಿ ಮೋದಿ ನೇತೃತ್ವದಲ್ಲಿ ದೇಶದಲ್ಲಿ ಬಿಜೆಪಿ ಸರ್ಕಾರವನ್ನು ರಚಿಸಿತು.

**ಈ ರಾಜ್ಯಗಳಲ್ಲಿದೆ ಬಿಜೆಪಿ ಸರ್ಕಾರ:** ಪ್ರಸ್ತುತ ಬಿಜೆಪಿಯು 12 ರಾಜ್ಯಗಳಲ್ಲಿ ಅಂದರೆ ಉತ್ತರ ಪ್ರದೇಶ, ಉತ್ತರಾಖಂಡ, ಹರಿಯಾಣ, ಗುಜರಾತ್, ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್‌ಗಢ, ಗೋವಾ, ಅಸ್ಸಾಂ, ತ್ರಿಪುರಾ, ಮಣಿಪುರ, ಅರುಣಾಚಲ ಪ್ರದೇಶಗಳಲ್ಲಿ ರಾಜ್ಯ ಸರ್ಕಾರವನ್ನು ಹೊಂದಿದೆ. ಅಲ್ಲದೆ, ಇನ್ನು 5 ರಾಜ್ಯಗಳಲ್ಲಿ ಎನ್‌ಡಿಎ ಮಿತ್ರಪಕ್ಷಗಳ ಸರ್ಕಾರವಿದೆ. ಇದರಲ್ಲಿ ಮಹಾರಾಷ್ಟ್ರ, ಬಿಹಾರ, ಮೇಘಾಲಯ, ನಾಗಾಲ್ಯಾಂಡ್, ಸಿಕ್ಕಿಂ ಸೇರಿವೆ.

## ಕರ್ನಾಟಕದ ಬೂತ್ ಮಟ್ಟದ ಕಾರ್ಯಕರ್ತರ ಜೊತೆ ನರೇಂದ್ರ ಮೋದಿ ಸಂವಾದ

# ಪ್ರಧಾನಿ ಟಿಪ್ಸ್

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ಇಂದು ಶುಕ್ರವಾರ ಕರ್ನಾಟಕದ ಬೂತ್ ಮಟ್ಟದ ಬಿಜೆಪಿ ಕಾರ್ಯಕರ್ತರ ಜೊತೆ ಸಂವಾದ ನಡೆಸಿದರು. ನಮೋ ಆ ಯಪ್ ಪ್ಲಾಟ್ ಫಾರ್ಮ್ ನಲ್ಲಿ ಲೈವ್ ಆಗಿ ನಡೆದ ಈ ಕಾರ್ಯಕ್ರಮದಲ್ಲಿ ಬಿಜೆಪಿ ಬೂತ್ ಅಧ್ಯಕ್ಷರು ಮೋದಿ ಅವರ ಜೊತೆ ಮಾತನಾಡಿದರು. ಈ ವೇಳೆ ನರೇಂದ್ರ ಮೋದಿ ಅವರು ಕಾರ್ಯಕರ್ತರಿಗೆ ಪಕ್ಷದ ಪ್ರಚಾರ ತಂತ್ರಗಳನ್ನು ತಿಳಿಸಿಕೊಟ್ಟರು. ಹಾಗೆಯೇ, ಬೂತ್ ಮಟ್ಟದಲ್ಲಿ ಚುನಾವಣಾ ಪ್ರಚಾರ ಯಾವ ರೀತಿಯಲ್ಲಿ ಸಾಗುತ್ತಿದೆ ಎಂಬುದನ್ನು ವಿಚಾರಿಸಿದರು.

ಕೇಂದ್ರ ಸರ್ಕಾರದ ಸಾಧನೆಗಳನ್ನು



ಜನತೆಗೆ ಮುಂದಿಡುತ್ತಿದ್ದೀರಾ ಬೂತ್ ನಲ್ಲಿ ಎಲ್ಲಾ ಚುನಾವಣಾ ಸಾಮಗ್ರಿಗಳು ತಲುಪಿವೆಯಾ ಪೇಜ್ ಲೀಡರ್ ಗಳಿಗೆ ಹೇಗೆ ಕೆಲಸ ಹಂಚಲಾಗಿದೆ

ಪುಟ 2

# ಮೂವರ ನಾಮಪತ್ರ ತಿರಸ್ಕೃತ

**ಚಾಮರಾಜನಗರ:** ಚಾಮರಾಜನಗರ ಎಸ್‌ಸಿ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಗಳು ಸಲ್ಲಿಸಿದ್ದ ನಾಮಪತ್ರಗಳ ಪರಿಶೀಲನೆ ಮಾಡಲಾಗಿದ್ದು, ಮೂವರ ನಾಮಪತ್ರ ತಿರಸ್ಕೃತಗೊಂಡಿವೆ. ಇನ್ನು 22 ಅಭ್ಯರ್ಥಿಗಳದ್ದು ಕ್ರಮಬದ್ಧವಾಗಿವೆ ಎಂದು ಚಾಮರಾಜನಗರ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪನಾಗ್ ಮಾಹಿತಿ ನೀಡಿದ್ದಾರೆ. ಇನ್ನು ಮುಖ್ಯವಾಗಿ ಕಾಂಗ್ರೆಸ್ ಅಭ್ಯರ್ಥಿ ಮಹದೇವಪ್ಪ ಪುತ್ರ ಸುನೀಲ್ ಬೋಸ್ ಅವರನಾಮಪತ್ರವೂಸಹಕ್ರಮಬದ್ಧವಾಗಿದೆ. ಸುನೀಲ್ ಬೋಸ್ ಅವರು ತಮ್ಮ ನಾಮಪತ್ರದಲ್ಲಿ ಸರಿಯಾದ ಮಾಹಿತಿ ನೀಡಿಲ್ಲ. ಹೀಗಾಗಿ ಅವರ ಉಮೇದುವಾರಿಕೆ ತಿರಸ್ಕೃತಗೊಳಿಸಬೇಕೆಂದು ಬಿಜೆಪಿ ದೂರು ನೀಡಿತ್ತು. ಆದ್ರೆ, ಚುನಾವಣಾಧಿಕಾರಿ ಎಲ್ಲಾ ಪರಿಶೀಲನೆ ನಡೆಸಿದ್ದು, ಎಲ್ಲವೂ ಸರಿಯಾಗಿದೆ ಎಂದು ಸುನೀಲ್ ಬೋಸ್ ಅವರ ನಾಮಪತ್ರವನ್ನು ಅಂಗೀಕರಿಸಿದ್ದಾರೆ.

ಪುಟ 2



## ಯಾದಗಿರಿಯಲ್ಲೂ ನಿಲ್ಲುತ್ತೆ

# ವಂದೇ ಭಾರತ್ ರೈಲು

**ಯಾದಗಿರಿ:** ಬೆಂಗಳೂರು-ಕಲಬುರಗಿ ನಡುವಿನ ನೂತನ ವಂದೇ ಭಾರತ್ ರೈಲಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಇತ್ತೀಚೆಗೆ ಗುಜರಾತ್ ನ ಅಹಮದಾಬಾದ್ ನಿಂದಲೇ ವರ್ಚುವಲ್ ಮೂಲಕ ಚಾಲನೆ ನೀಡಿದ್ದರು. ಈ ಬೆಂಗಳೂರು-ಕಲಬುರಗಿ ನಡುವಿನ ನೂತನ ವಂದೇ ಭಾರತ್ ರೈಲು ಯಾದಗಿರಿಯಲ್ಲಿ ನಿಲ್ಲುವುದಿಲ್ಲ ಎಂಬುದಕ್ಕೆ ಜಿಲ್ಲೆಯ ಜನರು ಬೇಸರಗೊಂಡಿದ್ದರು. ಆದರೆ ಇನ್ಮುಂದೆ ಯಾದಗಿರಿ ರೈಲ್ವೆ ನಿಲ್ದಾಣಕ್ಕೂ ವಂದೇ ಭಾರತ್ ರೈಲು ಸ್ಟಾಪ್ ಆಗಲಿದೆ.

ಕಲಬುರ್ಗಿಯಿಂದ ಬೆಂಗಳೂರಿಗೆ ಹೊರಡಲಿರುವ ನೂತನ ವಂದೇ ಭಾರತ್ ರೈಲು ಕಳೆದ ತಿಂಗಳಷ್ಟೇ ಆರಂಭವಾಗಿತ್ತು. ವಂದೇ



ಭಾರತ್ ರೈಲು ನಿಲ್ಲುಗಡೆಗೆ ಆಗ್ರಹಿಸಿ ಕನ್ನಡ ಪರ ಸಂಘಟನೆಗಳಿಂದ ಪ್ರತಿಭಟನೆ ನಡೆಸಲಾಗಿತ್ತು.

ಪ್ರತಿಭಟನೆಗೆ ಮಣಿದ ರೈಲ್ವೆ ಇಲಾಖೆ ಕೊನೆಗೂ ರೈಲು ನಿಲ್ಲುಗಡೆ ಮಾಡುವುದಾಗಿ ಆದೇಶಿಸಿದ್ದು, ಯಾದಗಿರಿ ರೈಲ್ವೆ ನಿಲ್ದಾಣಕ್ಕೆ ಕಲಬುರ್ಗಿಯಿಂದ ಬೆಳಗ್ಗೆ 5:54 ಕ್ಕೆ ರೈಲು ಬರಲಿದೆ.

ಪುಟ 2

## ಯುಗಾದಿ ಹಬ್ಬಕ್ಕೆ ಊರಿಗೆ ಹೋಗಲು ಸಜ್ಜಾದವರಿಗೆ ಶಾಕ್

# ಖಾಸಗಿ ಬಸ್ ದರ ಏರಿಕೆ

**ಬೆಂಗಳೂರು:** ಯುಗಾದಿ ಹಬ್ಬಕ್ಕೆ ಸಾಲು ಸಾಲು ರಜೆಯಿದೆ ಅಂತ ಮನೆ ಕಡೆ ಹೊಗಲು ಸಜ್ಜಾದವರಿಗೆ ಖಾಸಗಿ ಬಸ್ ದರ ಏರಿಕೆ ಶಾಕ್ ಎದುರಾಗಿದೆ. ಯುಗಾದಿ ರಜೆ ಬೆಲ್ಲವಾದರೆ ಖಾಸಗಿ ಬಸ್ ಗಳ ಪ್ರಯಾಣದ ದರ ಏರಿಕೆ ಪ್ರಯಾಣಿಕರಿಗೆ ಬೇವು ಆಗಿದೆ.

ಏಪ್ರಿಲ್ 7 ರಂದು ಭಾನುವಾರ, 9 ರಂದು ಮಂಗಳವಾರ ಯುಗಾದಿ ಬರುತ್ತೆ. ಹೀಗಾಗಿ ಸೋಮವಾರ ರಜೆ ಹಾಕಿ ನಾಳೆಯೇ ಊರಿಗೆ ತೆರಳಲು ಜನರ ಪ್ಲಾನ್ ಮಾಡಿದ್ದಾರೆ. ಇನ್ನೂ ಕೆಲವರು ಇಂದು (ಏ.06) ಆಫೀಸ್ ಗೆ ರಜೆ ಹಾಕಿ ಬೆಂಗಳೂರಿನಿಂದ ಹೊರಟಿದ್ದಾರೆ. ಅಲ್ಲದೆ ಯುಗಾದಿ ರಜೆ ಒಂದು ದಿನ ಬಿಟ್ಟು ಗುರುವಾರ ರಂಜಾನ್ ರಜೆ ಬರುತ್ತೆ. ಅಲ್ಲದೆ 13 ರಂದು ಎರಡನೇ ಶನಿವಾರ ರಜೆ ಹಾಗೂ 14 ರಂದು ಭಾನುವಾರ ರಜೆ ಇದೆ. ಏಪ್ರಿಲ್ 7 ರಿಂದ ಏಪ್ರಿಲ್ 14ರ ವರೆಗೆ ಬರೊಬ್ಬರಿ 5 ರಜೆಗಳು ಇವೆ. ಹೀಗಾಗಿ ಕೆಲವರು ನಾಳೆಯಿಂದ ವಾರಪೂರ್ತಿ ಆಫೀಸ್ ಗೆ ರಜೆ ಹಾಕಲು ಪ್ಲಾನ್ ಮಾಡಿಕೊಂಡು ಬೆಂಗಳೂರು ಬಿಟ್ಟು ಊರಿಗೆ ಹೊರಡುತ್ತಿದ್ದಾರೆ.




ಅಲ್ಲದೆ ವಿದ್ಯಾರ್ಥಿಗಳಿಗೆ ಬೇಸಿಗೆ ರಜೆ ಶುರುವಾದ ಕಾರಣ ಮಕ್ಕಳ ಜೊತೆ ಪ್ರವಾಸಕ್ಕೆ ಅಥವಾ ತಮ್ಮ ತಮ್ಮ ಊರಿಗೆ ತೆರಳಲು ಪೋಷಕರು ಯೋಚಿಸಿ, ಬಸ್ ಟಿಕೆಟ್ ಬುಕ್ ಮಾಡಲು ಮುಂದಾದರೆ ದರ ಏರಿಕೆಯ ಶಾಕ್ ನೀಡಿದೆ. ಖಾಸಗಿ ಬಸ್ ಮಾಲೀಕರು 2-3 ಪಟ್ಟು ದರ ಏರಿಕೆ ಮಾಡಿದ್ದಾರೆ.

ಮನಸಿಗೆ ಬಂದಂತೆ ದರ ಏರಿಕೆ ಮಾಡಿದ್ರು ಸಾರಿಗೆ ಇಲಾಖೆಯಿಂದ ಪದೇ ಪದೇ ನಿರ್ಲಕ್ಷ್ಯ ಮಾಡುತ್ತಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ. ಆದರೆ ಟಿಕೆಟ್ ದರ ದುಪ್ಪಟ್ಟಾದರೂ ಖಾಸಗಿ ಬಸ್ ಗಳು ಮಾತ್ರ ಬಹುತೇಕ ಭರ್ತಿಯಾಗಿವೆ.

ಇನ್ನು ಈ ದರ ಏರಿಕೆಯ ಬಗ್ಗೆ ಖಾಸಗಿ ಬಸ್ ಮಾಲೀಕರ ಸಂಘದ ಅಧ್ಯಕ್ಷ ಮಾತನಾಡಿ, ಕೆಎಸ್‌ಆರ್ ಟಿಸಿ ಬಸ್ ಗಳಲ್ಲಿ ಪ್ರತಿ ಶನಿವಾರ ಭಾನುವಾರ ಸೇರಿದಂತೆ ಎಲ್ಲ ಹಬ್ಬಗಳಲ್ಲೂ ದರ ಏರಿಕೆ ಮಾಡುತ್ತಾರೆ.

## ಹೆಚ್ಚಿದ ಏತಾಪಮಾನ ಜನರಲ್ಲಿ ಆತಂಕ ಮೂಡಿಸಿದ ಸನ್‌ಸ್ಟ್ರೋಕ್ , ಕಾಲರ

# ಇಲಾಖೆ ಅಲರ್ಟ್

**ಬೆಂಗಳೂರು:** ಈ ಬಾರಿಯ ಬೇಸಿಗೆಯಲ್ಲಿ ತಾಪಮಾನ ದಿನದಿಂದ ದಿನಕ್ಕೆ ಏರಿಕೆ ಯಾಗುತ್ತಿದೆ. ಬೆಳಗಿನ ಹೊತ್ತಲ್ಲೇ ಮಟಮಟ ಮಧ್ಯಾಹ್ನದ ಬಿಸಿಲಿನ ಅನುಭವ ಆಗುತ್ತಿದೆ. ಶುಕ್ರವಾರ ಬೆಂಗಳೂರಿನಲ್ಲಿ ಬರೋಬ್ಬರಿ 37 ಡಿಗ್ರಿ ಸೆಲ್ಸಿಯಸ್ ತಾಮಮಾನ ದಾಖಲಾಗಿತ್ತು. ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 37.6 ಡಿಗ್ರಿ ದಾಖಲಾಗಿತ್ತು. ಕಲಬುರಗಿಯಲ್ಲಿ ಬರೋಬ್ಬರಿ 42 ಡಿಗ್ರಿ ಉಷ್ಣಾಂಶ ದಾಖಲಾಗಿತ್ತು. ಬೆಂಗಳೂರಿನಲ್ಲಿ ಕನಿಷ್ಠ ಉಷ್ಣಾಂಶ 24 ಡಿಗ್ರಿ ಸೆಲ್ಸಿಯಸ್ ಇದೆ. ಕಳೆದ 15 ವರ್ಷಗಳಲ್ಲೇ ಇದು ಅತ್ಯಂತ ಹೆಚ್ಚಿನ ತಾಪಮಾನವಾಗಿದೆ.

ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ರಣಬಿಸಿಲಿನ ತಾಪಕ್ಕೆ ಜನ ತತ್ತರಿಸುತ್ತಿದ್ದಾರೆ. ಬಿಸಿಲಿನ ತಾಪದಿಂದ ಏಕಾಏಕಿ ಶಂಕಿತ ಕಾಲರ, ಬಿಸಿಗಾಳಿ ಹೆಚ್ಚಾಗುತ್ತಿದೆ. ಹೀಗಾಗಿ ಆರೋಗ್ಯ ಇಲಾಖೆ ಸುದ್ದಿಗೋಷ್ಠಿ ನಡೆಸಿ, ಬಿಸಿಲಿನಿಂದಾಗಿ ಕಲಬುರಗಿ,




ಬಾಗಲಕೋಟೆ ಜಿಲ್ಲೆಯಲ್ಲಿ ತಲಾ ಇಬ್ಬರು ಮೃತಪಟ್ಟಿದ್ದನ್ನು ತಳ್ಳಿಹಾಕಿದ್ದಾರೆ. ಅಲ್ಲದೆ ಬೆಂಗಳೂರಿನ ಮಲ್ಲೇಶ್ವರಂ ನಿವಾಸಿಯಲ್ಲಿ ಕಾಲರ ರೋಗ ಕಂಡು ಬಂದಿಲ್ಲ. ಇನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಾ 42 ವಿದ್ಯಾರ್ಥಿನಿಯರಲ್ಲಿ 32 ಜನರಲ್ಲಿ ಕಾಲರ ರೋಗ ಕಾಣಿಸಿಲ್ಲ ಎಂದು ತಿಳಿಸಿದ್ದಾರೆ. ಮಾರ್ಚ್ ತಿಂಗಳಲ್ಲಿ ಬೆಂಗಳೂರು ನಗರದಲ್ಲಿ ಇಬ್ಬರು ಹಾಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ ಒಟ್ಟು ಮೂವರಿಗೆ ಕಾಲರ ಕಾಣಿಸಿಕೊಂಡ ಮಾಹಿತಿ ಲಭ್ಯವಾಗಿದೆ.

ಪುಟ 2

## ಬೆಂಗಳೂರಲಿ ಭರ್ಜರಿ ಭೇಟೆ 2.86 ಕೋಟಿಯ

# ಡ್ರಗ್ಸ್ ಜಪ್ತಿ

**ಬೆಂಗಳೂರು:** ರಾಜಧಾನಿಯ ಡ್ರಗ್ಸ್ ದಂಧೆ ಮೇಲೆ ಭರ್ಜರಿ ಕಾರ್ಯಾಚರಣೆ ನಡೆಸಿರುವ ಸಿಸಿಬಿ ಹಾಗೂ ಸ್ಥಳೀಯ ಪೊಲೀಸರು, ಇಬ್ಬರು ವಿದೇಶಿ ಪ್ರಜೆಗಳು ಸೇರಿದಂತೆ ನಾಲ್ವರನ್ನು ಸೆರೆ ಹಿಡಿದು 2.86 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದ್ದಾರೆ. ಐವರಿ ಕೋಸ್ಟ್ ದೇಶದ ತೋನೊ ಸೆಕಾ, ನೈಜೀರಿಯಾದ ಕ್ರೊಮೇರ್ ಜಾಬ್, ಅಬೂಬಕರ್, ರಾಮ್ ಬಂಧಿತರಾಗಿದ್ದು, ಆರೋಪಿಗಳಿಂದ 86 ಲಕ್ಷ ಮೌಲ್ಯದ 950 ಗ್ರಾಂ ಕೊಕೇನ್ ಹಾಗೂ 2 ಕೋಟಿ ಮೌಲ್ಯದ 2.24 ಕೇಜಿ ಎಂಡಿಎಂಎ ಜಪ್ತಿಯಾಗಿದೆ.



ಬೊಮ್ಮನಹಳ್ಳಿ, ಚೆನ್ನಮ್ಮನಕೆರೆ ಅಚ್ಚುಕಟ್ಟು ಹಾಗೂ ದೇವನಹಳ್ಳಿ ವ್ಯಾಪ್ತಿಯಲ್ಲಿ ಸಿಸಿಬಿ ಹಾಗೂ ಸ್ಥಳೀಯ ಪೊಲೀಸರು ಪ್ರತ್ಯೇಕವಾಗಿ ದಾಳಿ ನಡೆಸಿ ಪೆಡ್ಲರ್‌ಗಳನ್ನು ಬಂಧಿಸಿದ್ದಾರೆ ಎಂದು ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ.

ಎರಡು ವರ್ಷಗಳ ಹಿಂದೆ ಬ್ಯುಸಿನೆಸ್ ವೀಸಾದಡಿ ಭಾರತಕ್ಕೆ ಬಂದಿದ್ದ ನೈಜೀರಿಯಾ ದೇಶದ ಸೆಕಾ, ಆರಂಭದಲ್ಲಿ ಮುಂಬೈ ಹಾಗೂ ದೆಹಲಿಯಲ್ಲಿ ಬಟ್ಟೆ ವ್ಯಾಪಾರ ಮಾಡುತ್ತಿದ್ದ.

ಪುಟ 2

ಸಂಜೆ ಮುಗಿಲು
ಶನಿವಾರ
6.4.2024




## ಬಾಬು ಜಗಜೀವನ ರಾಮ್ ಜಯಂತಿ

ಮೈಸೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಇಂದು ಬೆಳಿಗ್ಗೆ ರೈಲ್ವೇ ನಿಲ್ದಾಣದ ವೃತ್ತದಲ್ಲಿರುವ ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಪುತ್ಥಳಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಆಚರಣೆ ಮಾಡಲಾಯಿತು. ಜಿಲ್ಲಾಧಿಕಾರಿಗಳಾದ ಡಾ. ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತರಾದ ರಮೇಶ್ ಬಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ ಅವರು ಬಾಬು ಜಗಜೀವನ ರಾಂ ಅವರ ಪುತ್ಥಳಿಗೆ ಪುಷ್ಪಾರ್ಪಣೆ ಸಲ್ಲಿಸಿ, ನಮಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ್ ಮತಯಾಚನೆ



**ಮೈಸೂರು:** ನಗರದ ದೇವರಾಜ ಮಾರುಕಟ್ಟೆಯಲ್ಲಿ ಇಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರು, ಚಾಮರಾಜ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಕೆ.ಹರೀಶ್ ಗೌಡ ಅವರ ಸಮ್ಮುಖದಲ್ಲಿ ಗ್ಯಾರಂಟಿ ಯೋಜನೆಗಳ ಪ್ರಣಾಳಿಕೆಯನ್ನು ನೀಡುವ ಮೂಲಕ ಮತ ಯಾಚನೆ ಮಾಡಿದರು.

ಮಾರುಕಟ್ಟೆಯ ಪ್ರತಿ ಮಳಿಗೆಗಳಿಗೂ ಭೇಟಿ ನೀಡಿ ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಗಳನ್ನು ತಿಳಿಸುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವಂತೆ ವಿನಂತಿ ಮಾಡಿಕೊಂಡರು.

ದೇವರಾಜ ಮಾರುಕಟ್ಟೆಯ ವರ್ತಕರ ಸಂಘದ ಅಧ್ಯಕ್ಷರಾದ ಮಹದೇವ್ ಅವರು ಶಾಸಕರಾದ ಕೆ.ಹರೀಶ್ ಗೌಡ ಹಾಗೂ ಕಾಂಗ್ರೆಸ್ ಅಭ್ಯರ್ಥಿಯಾದ ಎಂ.ಲಕ್ಷ್ಮಣ್ ಅವರನ್ನು ಸನ್ಮಾನಿಸಿ. ಚುನಾವಣಾ ಪ್ರಚಾರದಲ್ಲಿ ಭಾಗವಹಿಸಿ ಸಂಪೂರ್ಣ ಬೆಂಬಲ ಕೊಡುವುದಾಗಿ ಆಶ್ವಾಸನೆ ನೀಡಿದರು. ಮಾರುಕಟ್ಟೆಯ ಪ್ರಮುಖ ಮುಖಂಡರಾದ ಹೇಮಣ್ಣ ಸೇರಿದಂತೆ ಇತರರನ್ನು ಭೇಟಿ ಮಾಡಿ ಹೆಚ್ಚಿನ ಬೆಂಬಲ ನೀಡುವಂತೆ ತಿಳಿಸಿದರು.

ದೇವರಾಜ ಮಾರುಕಟ್ಟೆಯ ಅಂಗಡಿಯ ಮಾಲೀಕರು, ವ್ಯಾಪಾರಿಗಳು ಹಾಗೂ ಸಿಬ್ಬಂದಿಗಳು ಐದು ಗ್ಯಾರಂಟಿ ಯೋಜನೆಗಳ ಸದುಪಯೋಗವನ್ನು ನಾವು ಪಡೆದುಕೊಳ್ಳುತ್ತಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜನಪರ ಕಾರ್ಯಕ್ರಮಗಳನ್ನು ಒಪ್ಪಿಕೊಂಡಿದ್ದೇವೆ ಹಾಗಾಗಿ ಕಾಂಗ್ರೆಸ್ ಪಕ್ಷ ಮತ್ತು ಅಭ್ಯರ್ಥಿ ಎಂ.ಲಕ್ಷ್ಮಣ್ ಅವರನ್ನು ಬೆಂಬಲಿಸಿ ಅತಿ ಹೆಚ್ಚು ಮತಗಳ ಅಂತರದಲ್ಲಿ ಗೆಲ್ಲಿಸುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ಶುಲ್ಕ ರಹಿತ ದೂರವಾಣಿ

**ಬೆಂಗಳೂರು:** ಲೋಕಸಭಾ ಚುನಾವಣೆ ? 2024ನ್ನು ಮುಕ್ತ ಹಾಗೂ ಶಾಂತಿಯುತವಾಗಿ ನಡೆಸುವ ದೃಷ್ಟಿಯಿಂದ ಹಾಗೂ ಮತದಾರರು ಯಾವುದೇ ಆಮಿಷಕ್ಕೆ ಒಳಗಾಗದೇ ನಿರ್ಭೀತಿಯಿಂದ ಮತ ಚಲಾಯಿಸಲು ಅನುವು ಮಾಡಿಕೊಡುವ ನಿಟ್ಟಿನಲ್ಲಿ ಅಬಕಾರಿ ಇಲಾಖೆಯು ಎಲ್ಲಾ ರೀತಿಯ ಕ್ರಮಗಳಿಗೆ ಸಾರ್ವಜನಿಕರ ಸಹಕಾರವನ್ನು ಕೋರಲಾಗಿದೆ ಎಂದು ಬೆಂಗಳೂರು ಉತ್ತರ ವಿಭಾಗ (ಜಾರಿ ಮತ್ತು ತನಿಖೆ) ಅಬಕಾರಿ ಜಂಟಿ ಆಯುಕ್ತರು ತಿಳಿಸಿದ್ದಾರೆ. ರಾಜ್ಯ ಮತ್ತು ರಾಷ್ಟ್ರೀಯ ಕಾನೂನಿನಲ್ಲಿ ನಿಷೇಧಿಸಲ್ಪಟ್ಟ ಎನ್‌ಡಿಪಿಎಸ್ ವಸ್ತುಗಳ ಮಾರಾಟ, ದಾಸ್ತಾನು, ಸಾಗಾಣಿಕೆ, ಸೇವನೆ ಹಾಗೂ ಅನಧಿಕೃತ ನಕಲಿ ಕಳ್ಳಬಟ್ಟಿ, ಸೇಂದಿ, ರಕ್ಷಕರ ಸಿಬ್ಬಂದಿಗಳಿಗೆ ಮಾತ್ರ ಮಾರಾಟ ಮಾಡಬಹುದಾದ ಮದ್ಯವು ಸೇರಿದಂತೆ ಅನಧಿಕೃತವಾಗಿ ಮಾರಾಟ / ತಯಾರಿಕೆ ಇತ್ಯಾದಿ ಮದ್ಯ ತಯಾರಿಕೆ, ದಾಸ್ತಾನು, ಮಾರಾಟ ಮತ್ತು ಸಾಗಾಣಿಕೆ ಅಥವಾ ಅಬಕಾರಿ ಸಂಬಂಧಿತ ಯಾವುದೇ ಪದಾರ್ಥಗಳು ಕಂಡು ಬಂದಲ್ಲಿ ಸಾರ್ವಜನಿಕರು ಶುಲ್ಕ ರಹಿತ ದೂರವಾಣಿ ಸಂಖ್ಯೆ 1800?425?1285 (ಟೋಲ್ ಫ್ರೀ) ಗೆ ಅಥವಾ ಇ-ಮೇಲ್ ವಿಳಾಸರಿಭಿಜಭಚಿಟಿರಟಿಂಡಿಣುರಟಚಿಟ.ಛಿಂಟಮೂಲಕ ದೂರು/ ಮಾಹಿತಿ /ಸುಳಿವು ನೀಡಲು ಸಂಪರ್ಕಿಸಬಹುದು. ಅಥವಾ ಅಬಕಾರಿ ಜಂಟಿ ಆಯುಕ್ತರ ಕಚೇರಿ (ಜಾರಿ ಮತ್ತು ತನಿಖೆ) ಬೆಂಗಳೂರು ಉತ್ತರ ವಿಭಾಗ, ಬೆಂಗಳೂರು ಹೊಸ ಸಾರ್ವಜನಿಕ ಕಚೇರಿ ಕಟ್ಟಡಗಳ ಸಂಕೀರ್ಣ, ಕೆ.ಆರ್.ವೃತ್ತ, ನೃಪತುಂಗ ರಸ್ತೆ, ಬೆಂಗಳೂರು 560001 ಅಥವಾ ದೂರವಾಣಿ ಸಂಖ್ಯೆ: 080-22210285 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 7 ನಾಮಪತ್ರ ತಿರಸ್ಕೃತ

**ರಾಮನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಇಂದು 6 ಅಭ್ಯರ್ಥಿಗಳ 7 ನಾಮಪತ್ರಗಳು ತಿರಸ್ಕೃತವಾಗಿದೆ. ಸ್ವತಂತ್ರ ಅಭ್ಯರ್ಥಿಗಳಾದ ಪ್ರದೀಪ್ ಟಿ.ವಿ-1 ನಾಮಪತ್ರ, ಶಿವಣ್ಣ 1 ನಾಮಪತ್ರ, ಬಂಡಿ ರಂಗನಾಥ ವೈ. ಆರ್. 1 ನಾಮಪತ್ರ, ಜೆ.ಟಿ ಪ್ರಕಾಶ್ 1 ನಾಮಪತ್ರ, ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದ ಅಭ್ಯರ್ಥಿ ರಾಜಣ್ಣ ಎಚ್. 2 ನಾಮಪತ್ರ, ನವ ಭಾರತ ಸೇನೆ ಪಕ್ಷದ ಅಭ್ಯರ್ಥಿ ಎನ್. ವಸಂತ ರಾವ್ ಜಗತಾಪ್ 1 ನಾಮಪತ್ರ ತಿರಸ್ಕೃತವಾಗಿದೆ. ಒಟ್ಟು 45 ನಾಮಪತ್ರ ಸ್ವೀಕೃತಗೊಂಡಿದ್ದು, ಅದರಲ್ಲಿ 7 ನಾಮಪತ್ರಗಳು ತಿರಸ್ಕೃತಗೊಂಡು, 38 ನಾಮಪತ್ರಗಳು ಅಂಗೀಕೃತವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

## ಚುನಾವಣಾ ಪ್ರಚಾರಕಾರ್ಯಕ್ಕೆ 18 ವರ್ಷದೊಳಗಿನ ಮಕ್ಕಳ ಬಳಕೆಗೆ ನಿಷೇಧ

**ಚಿಕ್ಕಬಳ್ಳಾಪುರ:** 2024ರ ಲೋಕಸಭಾ ಸಾರ್ವತ್ರಿಕ ಚುನಾವಣಾ ಸಂದರ್ಭದಲ್ಲಿ ಚುನಾವಣಾ ಪ್ರಚಾರಕ್ಕೆ 18 ವರ್ಷಕ್ಕಿಂತ ಕೆಳಗಿರುವ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಭಾರತ ಸರ್ಕಾರವು ವಿಶ್ವಸಂಸ್ಥೆಯ ಅನುಮೋದಿತ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ 1992ರ ಡಿಸೆಂಬರ್ 11 ರಂದು ಒಪ್ಪಿ ಅನುಮೋದಿಸಿದ್ದು, ಈ ಮಕ್ಕಳ ಹಕ್ಕುಗಳ ಒಡಂಬಡಿಕೆ ಹಾಗೂ ಮಕ್ಕಳ ನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ ಕಾಯ್ದೆ) 2015 ರನ್ವಯ 18 ವರ್ಷದೊಳಗಿನ ಎಲ್ಲರೂ ಮಕ್ಕಳು ಎಂದು ಪರಿಗಣಿತವಾಗಿದೆ. ಮಕ್ಕಳ ಹಕ್ಕುಗಳ ಒಡಂಬಡಿಕೆಯ ಕಲಂ 32 ಮತ್ತು 36 ರಲ್ಲಿ ಮಕ್ಕಳ ಆರೋಗ್ಯ ಮತ್ತು ಶಿಕ್ಷಣಕ್ಕೆ ಅಪಾಯಕಾರಿಯಾದ ಕ್ಷೇತ್ರದಲ್ಲಿ ಮಕ್ಕಳು ಕಾರ್ಯನಿರ್ವಹಿಸದಂತೆ ಹಾಗೂ ಮಕ್ಕಳ ಬೆಳವಣಿಗೆಗೆ ತೊಡಕನ್ನುಂಟು ಮಾಡುವ ಯಾವುದೇ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶಿಸಿದೆ. ಲೋಕಸಭಾ ಚುನಾವಣಾ ಪ್ರಚಾರ ಕಾರ್ಯಗಳಲ್ಲಿ (ಪ್ರಚಾರ ಹಾಗೂ ಇನ್ನಿತರೆ) ಯಾವುದೇ ಪಕ್ಷಗಳು 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಿದೆ. ಅದಾಗ್ಯೂ, ಮಕ್ಕಳನ್ನು ಚುನಾವಣಾ ಕಾರ್ಯದಲ್ಲಿ ಬಳಸಿಕೊಂಡಲ್ಲಿ ಕಾಯ್ದೆಯನ್ವಯ ಸೂಕ್ತ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷರಾದ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾನದ ಜಾಗೃತಿ

**ಚಿಕ್ಕಬಳ್ಳಾಪುರ:** ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ಸಂದೀಪ್ ಕುಮಾರ್ ರವರ ಅಧ್ಯಕ್ಷತೆಯಲ್ಲಿ ಚಿಕ್ಕಬಳ್ಳಾಪುರ ಅಗಲಗುರ್ಕಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಹೂವಿನ ಮಾರುಕಟ್ಟೆಯಲ್ಲಿ ಚಿಕ್ಕಬಳ್ಳಾಪುರ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಸಾರ್ವಜನಿಕರಿಗೆ ವ್ಯಾಪರಸ್ಥರಿಗೆ ಮತದಾನ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಅವರು ಮಾತನಾಡಿ, ಮತದಾನ ಮಾಡುವುದು ಪ್ರತಿ ಮತದಾರರ ಹಕ್ಕು ಮತ್ತು ಕರ್ತವ್ಯವಾಗಿರುತ್ತದೆ. ತಪ್ಪದೇ ಮತ ಚಲಾಯಿಸಿ. ಇನ್ನೊಬ್ಬರ ಹೆಸರಿನಲ್ಲಿ ಮತದಾನ ಮಾಡುವುದು ಅಕ್ಷಮ್ಯ ಅಪರಾಧ ಮತ್ತು ಶಿಕ್ಷಾರ್ಹ. ಏಪ್ರಿಲ್ 26 ರಂದು ಸಾರ್ವಜನಿಕ ರಜೆ ಇದ್ದು ತಪ್ಪದೇ ಎಲ್ಲರೂ ಮತದಾನ ಮಾಡಬೇಕು ಎಂದು ತಿಳಿಸಿ ನೆರೆದಿದ್ದವರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಪಿಡಿಒ ಅಶೋಕ್, ವಿಜೇಂದ್ರ, ರವಿಕುಮಾರ್ ಮತ್ತು ಹೂವಿನ ಮಾರುಕಟ್ಟೆಯ ವ್ಯವಸ್ಥಾಪಕರು ಸಿಬ್ಬಂದಿ , ಸಾರ್ವಜನಿಕರು ಇತರರು ಹಾಜರಿದ್ದರು. ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನೆಲೆಯಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಶುಕ್ರವಾರ ಆವಲಗುರ್ಕಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮತದಾರರ ಸಾಕ್ಷರತಾ ಸಂಘದ ವತಿಯಿಂದ ಆಯೋಜಿಸಿದ್ದ ರಂಗೋಲಿ ಸ್ಪರ್ಧೆ ಮತ್ತು ಮತದಾನಕ್ಕೆ ಸಂಬಂಧಿಸಿದ ಚಿತ್ರಗಳನ್ನು ಬಿಡಿಸುವ ಮೂಲಕ ಶಾಲಾ ವಿದ್ಯಾರ್ಥಿಗಳು ತಮ್ಮ ಮನೆಯ ಸುತ್ತಮುತ್ತ ಜಾಗೃತಿ ಮೂಡಿಸಿದರು. ಗ್ರಾಮ ಮಟ್ಟದಲ್ಲಿ ಮತದಾನದ ಧ್ಯೇಯವಾಕ್ಯದ ಸಂದೇಶ ಫಲಕಗಳನ್ನು ಹಿಡಿದು ಮತದಾನ ಜಾಥಾ ನಡೆಸಿದರು.

# ಉಪವಾಸ ಸತ್ಯಾಗ್ರಹ

**ಮಂಡ್ಯ:** ಭೀಕರ ಬರಗಾಲದ ಸಂಕಷ್ಟ ಪರಿಸ್ಥಿತಿಯಲ್ಲಿ ಜನ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಕೆ ಆರ್ ಎಸ್ ಜಲಾಶಯದಿಂದ ನಾಲೆಗಳಿಗೆ ನೀರು ಹರಿಸಿ ಕೆರೆ ಕಟ್ಟೆಗಳನ್ನು ತುಂಬಿಸುವಂತೆ ಒತ್ತಾಯಿಸಿ ತಾಲೂಕಿನ ಮರಿಲಿಂಗನ ದೊಡ್ಡಿಯಲ್ಲಿ ಗ್ರಾಮದ ಜನತೆ ಉಪವಾಸ ಸತ್ಯಾಗ್ರಹ ನಡೆಸಿದರು.

ಗ್ರಾಮದ ಮುಖ್ಯ ರಸ್ತೆಯ ಬಸ್ ನಿಲ್ದಾಣದ ಬಳಿ ಮರಿಲಿಂಗನ ದೊಡ್ಡಿ ಮತ್ತು ಸುತ್ತಮುತ್ತಲ ಗ್ರಾಮದ ಜನತೆ ಉಪವಾಸ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಳೆ ಕೊರತೆಯಿಂದ ನೀರಿನ ಅಭಾವ ಎದುರಾಗಿದ್ದರೆ, ಜನ ಜಾನುವಾರಗಳಿಗೆ ಕುಡಿಯಲು ನೀರು ಇಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಿದೆ, ನೀರಿನ ಕೊರತೆ ಇರುವುದರಿಂದ ರೈತರು ಹೊಸ ಬೆಳೆ ಹಾಕಬಾರದು ಎಂದು ಆಳುವ ಸರ್ಕಾರ ನಿರ್ಬಂಧ ಹಾಕಿದ್ದರಿಂದ ಯಾವುದೇ ರೈತರು ಹೊಸ ಬೆಳೆ ಹಾಕಿರುವುದಿಲ್ಲ, ಇರುವ ನೀರನ್ನೆಲ್ಲಾ ತಮಿಳುನಾಡಿಗೆ ಹರಿಸಿದ ಪರಿಣಾಮ ಕೃಷ್ಣರಾಜಸಾಗರ ಜಲಾಶಯದಲ್ಲಿ ನೀರಿನ ಪ್ರಮಾಣ ಕಡಿಮೆ ಇದೆ, ಬೆಳೆದು ನಿಂತಿರುವ ಬೆಳೆ ರಕ್ಷಣೆ ಹಾಗೂ ಕುಡಿಯುವ ನೀರಿಗಾಗಿ 90 ಅಡಿ ಇದ್ದಾಗ ನಾಲೆಗಳಿಗೆ ಒಂದು ಕಂತು ನೀರು ಬಿಡಬೇಕಾಗಿತ್ತು, ಆದರೆ ರಾಜ್ಯ ಸರ್ಕಾರ ನಾಲೆಗಳಿಗೆ ನೀರು ಹರಿಸದೆ ತೊಂದರೆ ಮಾಡಿದೆ ಎಂದು ಹೇಳಿದರು.

ಇದೀಗ ಜಲಾಶಯದಲ್ಲಿ 84 ಅಡಿ ನೀರಿದ್ದು, ವಿಶ್ವೇಶ್ವರಯ್ಯ ನಾಲೆ ಆಧುನೀಕರಣ ಗುತ್ತಿಗೆದಾರರ ಓಲೈಕೆಗಾಗಿ ನಾಲೆಗಳಿಗೆ ನೀರು ಹರಿಸುತ್ತಿಲ್ಲ,ಬೆಳೆ ರಕ್ಷಣೆಗಾಗಿ ನಾವು ನೀರು ಕೇಳುತ್ತಿಲ್ಲ, ಜನ ಜಾನುವಾರುಗಳಿಗೆ ಕುಡಿಯಲು ನೀರಿಲ್ಲದ ಪರಿಸ್ಥಿತಿಯಲ್ಲಿ ಸಂಕಷ್ಟ ಎದುರಿಸುತ್ತಿರುವ ಸಮಯದಲ್ಲಿ ಕೆ ಆರ್ ಎಸ್ ಜಲಾಶಯದಿಂದ ನಾಲೆಗಳಿಗೆ ನೀರು ಹರಿಸಿ ಕೆರೆಕಟ್ಟೆಗಳನ್ನು ತುಂಬಿಸಬೇಕು ಎಂದು ಒತ್ತಾಯಿಸಿದರು. ಜಿಲ್ಲೆಯ ಜನತೆ ಸಮಸ್ಯೆಯನ್ನು ಅರಿತಿದ್ದರು ಸಹ ನಮಗ್ಯಾಕೆ ಎಂದು ಮೌನ ಬಯಸಿ ಕುಳಿತುಕೊಳ್ಳಬಾರದು, ಇದರಿಂದ ಮತ್ತಷ್ಟು ಸಂಕಷ್ಟಕ್ಕೆ ಸಿಲುಕ ಬೇಕಾಗುತ್ತದೆ, ರಾಜ್ಯ ಸರ್ಕಾರವನ್ನು ಎಚ್ಚರಿಸಿ ನೀರು ಪಡೆಯಬೇಕಾಗಿದೆ, ನೀರಿನ ಅಭಾವ ಕಣ್ಣಾರೆ ಕಂಡರು ಸಚಿವ ಶಾಸಕರು ಕಂಡು ಕಾಣದಂತೆ ಇದ್ದಾರೆ, ನಾಲೆಗಳಿಗೆ ನೂರು ಹರಿಸಿ ಎಂದು ಸಚಿವ ಶಾಸಕರನ್ನು ಪ್ರಶ್ನಿಸ ಬೇಕು, ರಾಜ್ಯ ಸರ್ಕಾರ ನಿರ್ಲಕ್ಷ್ಯ ತೋರದೆ ಕೆರೆ ಕಟ್ಟೆಗಳ ತುಂಬಿಸಲು ಮುಂದಾಗಬೇಕು ಎಂದು ಆಗ್ರಹಿಸಿದರು. ಮುಖಂಡರಾದ ಯೋಗೇಶ್,ರಾಜೇಶ್, ಅನಿಲ್,ಮೋಹನ್,ಬೋರಪ್ಪ, ಶಿವಲಿಂಗೇಗೌಡ,ರಾಮಲಿಂಗೇಗೌಡ,ಅನು ಕುಮಾರ್, ಕುಳ್ಳಪ್ಪ ನೇತೃತ್ವ ವಹಿಸಿದ್ದರು.

## ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯಲ್ಲಿ ಜಿಲ್ಲಾಡಳಿತದಿಂದ ಮಾಹಿತಿ

# ಮೈಸೂರಲ್ಲಿ ಕಾಲರಾ ಪತ್ತೆ

**ಮೈಸೂರು:** ಬರ ಪರಿಸ್ಥಿತಿ ಉಲ್ಬಣಗೊಳ್ಳುತಿದ್ದು, ಕುಡಿಯುವ ನೀರಿನ ಅಭಾವ ಕಂಡುಬರುತ್ತಿರುವ ಜಿಲ್ಲೆಯ 108 ಸಮಸ್ಯಾತ್ಮಕ ಹಳ್ಳಿಗಳಿಗೆ ಕುಡಿಯುವ ನೀರು ಒದಗಿಸಲು ತಕ್ಷಣ ಸಂಬಂಧಿಸಿದ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕೆಂದು ಜಿಲ್ಲಾಧಿಕಾರಿ ಡಾ.ರಾಜೇಂದ್ರ, ಕೆ.ವಿ ಹೇಳಿದರು

ಜಿಲ್ಲಾಡಳಿತ ಭವನದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಗರ ಪಾಲಿಕೆ, ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯತ್ ಹಾಗೂ ಕುಡಿಯುವ ನೀರು ಸರಬರಾಜು ಇಲಾಖೆಯ ಇಂಜನಿಯರು ಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಜಲಮೂಲಗಳ ಸಂರಕ್ಷಣೆ, ನಿರ್ವಹಣೆ ಹಾಗೂ ದುರಸ್ಥಿ ಕಾರ್ಯಗಳನ್ನು ಕೈಗೊಂಡು ಜನ,ಜಾನುವಾರುಗಳಿಗೆ ನೀರು ಒದಗಿಸಬೇಕೆಂದರು.

» **ಜಿಲ್ಲೆಯಲ್ಲಿ 108 ಕುಡಿಯುವ ನೀರು ಸಮಸ್ಯಾತ್ಮಕ ಹಳ್ಳಿಗಳ ಪಟ್ಟಿ**

» **ಮೇವು ಹೊರರಾಜ್ಯಗಳಿಗೆ ಹೋಗಬಾರದು**

» **ಕೊಳವೆ ಬಾವಿ ತೋಡಿಸಲು ಅನುಮತಿ ಕಡ್ಡಾಯ**

» **ವಿಫಲ ಕೊಳವೆಬಾವಿ ಮುಚ್ಚದೆ ಅನಾಹುತಗಳಾದರೆ ಅಧಿಕಾರಿಗಳ ತಲೆದಂಡ - ಡಿ.ಸಿ**

ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ರಂಜಿತ್ ಮಾಹಿತಿ ನೀಡಿ ನೀರಿನ ಕೊರತೆ ಇರುವ ಕಡೆ 9 ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆಗೆ ತೆಗೆದುಕೊಳ್ಳಲಾಗಿದೆ ಹಾಗೂ ಕಲ ಹಳ್ಳಿಗಳಿಗೆ ಹಬ್ಬಗಳ ಸಂದರ್ಭದಲ್ಲಿ ಟ್ಯಾಂಕರ್ ನೀರು ಕೊಡಲಾಗಿದೆ . ಪಿರಿಯಾಪಟ್ಟಣ ನಗರದಲ್ಲಿ ಮಾತ್ರ 9 ವಾರ್ಡ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಟ್ಯಾಂಕರ್ ಮೂಲಕ ನೀರು ಕೊಡಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಬೇಕಾಬಿಟ್ಟಿಯಾಗಿ ಕೊಳವೆ ಬಾವಿಗಳನ್ನ ತೋಡಿಸಲಾಗುತ್ತದೆ ಎಂಬ ಮಾಹಿತಿ ಇದ್ದು, ಸಂಬಂಧಿಸಿದ ಪ್ರಾಧಿಕಾರಗಳ ಅನುಮತಿ ಇಲ್ಲದೆ ಬೋರ್ವೆಲ್ ಕೊರೆಸುವಂತಿಲ್ಲ, ಗ್ರಾಮ ಪಂಚಾಯತಿ, ಸ್ಥಳೀಯ ಸಂಸ್ಥೆಗಳಿಗೆ 25 ದಿನ ಮುಂಚಿತವಾಗಿ ಅನುಮತಿ ತೆಗೆದುಕೊಳ್ಳಬೇಕು ಹಾಗೂ ಖಾಸಗಿಯವರು ತೋಡಿಸುವ ಕೊಳವೆ ಬಾವಿಗಳು ಸಾರ್ವಜನಿಕ ಕೊಳವೆ ಬಾವಿಗಳಿಗಿಂತ 500 ಮೀ ಅಂತರದಲ್ಲಿರಬೇಕಾದುದು ಕಡ್ಡಾಯ.



ವಿಫಲ ಕೊಳವೆ ಬಾವಿ ಮುಚ್ಚಿ : ವಿಫಲ ಕೊಳವೆ ಬಾವಿಗಳನ್ನು ತಕ್ಷಣ ಮುಚ್ಚಲು ಕ್ರಮವಹಿಸಿ. ವಿಜಯಪುರದಲ್ಲಿ ಆದಂತಹ ಘಟನೆಗಳು ಎಲ್ಲಿಯೂ ಮರುಕಳಿಸಬಾರದು. ಒಂದು ಗ್ರಾಮಕ್ಕೆ ಕೊಳವೆ ಬಾವಿ ತೋಡುವ ಲಾರಿ ಪ್ರವೇಶವಾದಾಗಲೇ ಅನುಮತಿ ಪಡೆದಿದ್ದಾರ ಪರೀಕ್ಷಿಸಬೇಕು, ಒಂದು ವೇಳೆ ಕೊಳವೆ ಬಾವಿ ವಿಫಲವಾದರೆ ಅದನ್ನು ಸಂಪೂರ್ಣವಾಗಿ ಮುಚ್ಚುವ ಜವಾಬ್ದಾರಿ ಲಾರಿ ಮಾಲೀಕರದೇ ಆಗಿರುತ್ತದೆ. ಒಂದು ವೇಳೆ ಯಾರೂ ವಿಫಲ ಕೊಳವೆ ಬಾವಿ ಮುಚ್ಚದೇ ಅನಾಹುತಗಳು ಸಂಭವಿಸಿದರೆ ಸಂಬಂಧಿಸಿದ ವ್ಯಾಪ್ತಿಯ ಅಧಿಕಾರಿಗಳ ನೇರ ಹೊಣೆಗಾರರನ್ನಾಗಿ ಮಾಡಿ ಅವರ ತಲೆದಂಡವಾಗಲಿದೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಾಹಿತಿ ನೀಡಿ, ಜಿಲ್ಲೆಯಲ್ಲಿ ಒಂದು ಕಾಲರಾ ಪ್ರಕರಣ ವರದಿಯಾಗಿದ್ದು,ಸುತ್ತಲಿನ 600 ಮನೆಗಳ ತಪಾಸಣೆ ಮಾಡಲಾಗಿದೆ ಹಾಗೂ ಸುತ್ತಲಿನ ಪರಿಸರವನ್ನು ಸ್ವಚ್ಚತೆಯಿಂದಿಟ್ಟುಕೊಳ್ಳುವಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಬರ ಪರಿಸ್ಥಿತಿ ಇರುವುದರಿಂದ ಬ್ಯಾಂಕಿನವರು ಸಾಲ ವಸೂಲಾತಿಯಲ್ಲಿ ಅಮಾನವೀಯವಾಗಿ ನಡೆದುಕೊಳ್ಳಬಾರದು ಎಂದು ಬ್ಯಾಂಕ್ ಸಿಬ್ಬಂದಿಗಳಿಗೆ ಸೂಚಿಸಿದರು.

ಪಶುಸಂಗೋಪನಾ ಇಲಾಖೆಯ ಜಂಟಿ ನಿರ್ದೇಶಕರಾದ ಡಾ.ನಾಗರಾಜು ಮಾಹಿತಿ ನೀಡಿ, 3 ರಿಂದ 4 ವಾರಗಳಿಗಾಗುವಷ್ಟು ಮೇವಿನ ಲಭ್ಯತೆ ಇದ್ದು, ಈಗಾಗಲೇ 36 ಸಾವಿರ ಮೇವಿನ ಕಿಟ್ ನೀಡಲಾಗಿದ್ದು ಮತ್ತೆ 36 ಸಾವಿರ ಕಿಟ್ ಬಂದಿದ್ದು ವಿತರಿಸಲಾಗುವುದೆಂದರು.

ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ ರೈತ ಮುಖಂಡರುಗಳು ಕೆಲ ಗ್ರಾಮಗಳಲ್ಲಿ ಮೇವಿನ ಕೊರತೆಯಿದೆಯೆಂದು ಹೇಳುತ್ತಾರೆ ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಮಸ್ಯೆಯಿರುವ ಹಳ್ಳಿಗಳಿಗೆ ಭೇಟಿ ನೀಡಿ ಎಂದರು.ಗಡಿ ಭಾಗಗಳಲ್ಲಿ ಮೇವು ಹೊರರಾಜ್ಯಗಳಿಗೆ ಹೋಗದಂತೆ ನೋಡಿಕೊಳ್ಳಿ ಎಂದರು.

ಬಿಸಿಲಿನ ತೀವ್ರತೆ ಹಿನ್ನೆಲೆಯಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ವ್ಯಾಪಕ ಪ್ರಚಾರ ಮಾಡಿಸಿ, ಹೊರಗಿನ ಬೀದಿ ಬದಿಯ ಆಹಾರ ಸೇವಿಸದಂತೆ ಅರಿವು ಮೂಡಿಸಿ, ಹೆಚ್ಚು ನೀರು ಕುಡಿಯುವುದು, ಹತ್ತಿ ಬಟ್ಟೆ ಧರಿಸುವಂತೆ ಮಾಹಿತಿ ನೀಡಿ ಎಂದರು.

ಜನನಿಬಿಡ ಸ್ಥಳಗಳಲ್ಲಿ ಸಂಘ ಸಂಸ್ಥೆಗಳಿಂದ ನೀರಿನ ಅರವಟ್ಟಿಗೆಗಳ ವ್ಯವಸ್ಥೆ ಮಾಡಿಕೊಡುವಂತೆ ಮನವಿ ಮಾಡಿ ಎಂದರು.

ಸಭೆಯಲ್ಲಿ ಜಿ.ಪಂ.ಸಿಇಒ ಗಾಯತ್ರಿ ಕೆ.ಎಂ, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳಿದ್ದರು.

# ಸಂವಿಧಾನ ಉಳಿಸಲು ಕಾಂಗ್ರೆಸ್ ಬೆಂಬಲಿಸಿ

**ಮೈಸೂರು:** ದೇಶದಲ್ಲಿ ಸಂವಿಧಾನ ಮತ್ತು ಪ್ರಜಾಪ್ರಭುತ್ವ ಅಪಾಯದಲ್ಲಿದ್ದು, ಸಂವಿಧಾನವನ್ನು ಉಳಿಸಲು ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್‌ರವರನ್ನು ಬೆಂಬಲಿಸಬೇಕೆಂದು ವರುಣಾ ಕ್ಷೇತ್ರದ ಮಾಜಿ ಶಾಸಕ ಹಾಗೂ ಆಶ್ರಯ ಸಮಿತಿ ಅಧ್ಯಕ್ಷ ಡಾ|| ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಚಾಮುಂಡೇಶ್ವರಿ ಕ್ಷೇತ್ರದ ಗುಂಗ್ರಾಲ್ ಛತ್ರ ದೊಡ್ಡಗೌಡನಕೊಪ್ಪಲು, ಆನಂದೂರು, ನಾಗವಾಲ, ಬೆಳವಾಡಿ, ಬಸವನಪುರ ಗ್ರಾಮಗಳಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್‌ಪರವಾಗಿ ನಡೆದ ಚುನಾವಣಾ ಪ್ರಚಾರ ಸಮಾರಂಭಗಳಲ್ಲಿ ಮಾತನಾಡಿದ ಅವರು ಕೇಂದ್ರದಲ್ಲಿ ಮೋದಿ ಸರ್ಕಾರ ಬಂದ ಮೇಲೆ ಬಡವರು ಬಡವರಾಗಿಯೇ ಇದ್ದಾರೆ, ಶ್ರೀಮಂತರು ಶ್ರೀಮಂತರಾಗುತ್ತಿದ್ದಾರೆ. ಕೇಂದ್ರ ಸರ್ಕಾರ ಬಡವರ ವಿರೋಧಿ ಸರ್ಕಾರವಾಗಿದೆ. ದಿನನಿತ್ಯ ಬಳಕೆಯ ಡೀಸೆಲ್, ಪೆಟ್ರೋಲ್, ಗ್ಯಾಸ್ ಬೆಲೆಗಳನ್ನು ಏರಿಸಿ ಬಡವರು ಬದುಕುವುದೇ ಕಷ್ಟವಾಗಿದೆ. ಮೋದಿ ಸರ್ಕಾರ ಕೊಟ್ಟ 600 ಭರವಸೆಗಳಲ್ಲಿ ಶೇ. 10% ರಷ್ಟು ಭರವಸೆಗಳನ್ನು ಈಡೇರಿಸಿಲ್ಲ. ಆದರೆ ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದಿದೆ. 2013 ರಿಮದ 2018 ರವರೆಗೆ ರಾಜ್ಯದಲ್ಲಿ ಇದ್ದ ಸಿದ್ದರಾಮಯ್ಯರವರ ನೇತೃತ್ವದ ಕಾಂಗ್ರೆಸ್ ಸರ್ಕಾರ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿತ್ತು. ಈಗ 5 ಗ್ಯಾರಂಟಿಗಳನ್ನು ಈಡೇರಿಸಿ ನುಡಿದಂತೆ ನಡೆದಿದೆ.



ಒಂದು ಕುಟುಂಬಕ್ಕೆ ತಿಂಗಳಿಗೆ 4 ರಿಂದ 5 ಸಾವಿರ ಹಣ ಸಿಗುತ್ತಿರುವುದರಿಂದ ಬಡವರು ನೆಮ್ಮದಿಯಾಗಿದ್ದಾರೆ. ಕೇಂದ್ರದಲ್ಲಿ ಈ ಬಾರಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ ಒಂದು ವರ್ಷಕ್ಕೆ 1 ಲಕ್ಷ ರೂ. ನೀಡುತ್ತಾರೆ. ರೈತರ ಸಾಲ ಮನ್ನಾ ಮಾಡುತ್ತೇವೆ. ಕೃಷಿ ಕ್ಷೇತ್ರದ ಜಿಎಸ್‌ಟಿ ಯನ್ನು ತೆಗೆಯುತ್ತೇವೆ. ಆದ್ದರಿಂದ ಕಾಂಗ್ರೆಸ್ ಕಾರ್ಯಕರ್ತರು ಮನೆಮನೆಗೆ ತೆರಳಿ ಕಾಂಗ್ರೆಸ್ ಪಕ್ಷದ ಕಾರ್ಯಕ್ರಮಗಳನ್ನು ತಿಳಿಸಿ ಜನಪರ ಹೋರಾಟಗಾರರಾದ ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್‌ರವರ ಗೆಲುವಿಗೆ ಎಲ್ಲರೂ ಶ್ರಮಿಸಬೇಕು ಎಂದು ಕರೆ ನೀಡಿದರು.

ಸಮಾರಂಭಗಳಲ್ಲಿ ಮೈಮುಲ್ ಮಾಜಿ ಅಧ್ಯಕ್ಷ ಸಿದ್ದೇಗೌಡ, ಜಿಪಂ ಮಾಜಿ ಅಧ್ಯಕ್ಷ ಕೂರ್ಗಳ್ಳಿ ಮಹದೇವ್, ಜಿಪಂ ಮಾಜಿ ಸದಸ್ಯರಾದ ಅರುಣ್‌ಕುಮಾರ್, ಬೀರಿಹುಂಡಿ ಬಸವಣ್ಣ, ಮಾದೇಗೌಡ ರಾಕೇಶ್ ಪಾಪಣ್ಣ, ಕಾಂಗ್ರೆಸ್ ಸೇವಾದಳದ ಮಾಜಿ ಅಧ್ಯಕ್ಷ ಜಯರಾಮೇಗೌಡ, ಆನಂದೂರು ರಾಮೇಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ. ಗುರುಸ್ವಾಮಿ, ಮುಖಂಡರಾದ ಕೃಷ್ಣಕುಮಾರ ಸಾಗರ್, ನಾಗವಾಲ ನರೇಂದ್ರ, ಜಿ.ಕೆ. ಬಸವಣ್ಣ, ಡಾ. ಪ್ರಕಾಶ್, ಯದುಕುಮಾರ್, ಮಾರ್ಬಳ್ಳಿ ಕುಮಾರ್, ಹರೀಶ್ ಮೊಗಣ್ಣ, ಮಹೇಶ್, ಡಾ. ಪ್ರಕಾಶ್, ಚಲುವೇಗೌಡ, ಸೀಗಳ್ಳಿ ಕುಮಾರ್, ಹುಯಿಲಾಳು ರಾಘವೇಂದ್ರ, ಕಾಮಾಕ್ಷಮ್ಮ, ಭಾಗ್ಯ, ಸ್ವಾಮಿ ಹಾಜರಿದ್ದರು.

## ಬೈಕ್ ರ್‍ಯಾಲಿ; ಮತದಾನ ಜಾಗೃತಿ

**ಚಿಕ್ಕಬಳ್ಳಾಪುರ:** ಪ್ರತಿಯೊಬ್ಬರೂ ಮತದಾನದ ಮಹತ್ವದ ಬಗ್ಗೆ ಅರಿಯಬೇಕು. ಮತದಾನ ಮಾಡುವುದು ನಮ್ಮ ನಿಮ್ಮೆಲ್ಲರ ಹಕ್ಕು. ಈ ವರ್ಷ ಅತಿ ಹೆಚ್ಚಿನ ಮತ ಪ್ರಮಾಣದ ದಾಖಲಾಗಲು ಸಾರ್ವಜನಿಕರು ಕೈ ಜೋಡಿಸಬೇಕೆಂದು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಹೊನ್ನಯ್ಯ ಜಿ.ಕೆ ತಿಳಿಸಿದರು. ಗೌರಿಬಿದನೂರು ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಡಿ.ಪಾಳ್ಯ ಹೋಬಳಿಯ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದರು. ಬೈಕ್ ರ್‍ಯಾಲಿಯೂ ಹುದುಗೂರು ಪಂಚಾಯಿತಿ ಮುಂಭಾಗದಿಂದ ಪ್ರಾರಂಭವಾಗಿ ಡಿ.ಪಾಳ್ಯ, ಬಿ.ಬೋಮಸಂದ್ರ, ಮಾರ್ಗವಾಗಿ ನಾಮಗೊಂಡ್ಲು ಗ್ರಾಮ ಪಂಚಾಯಿತಿಯ ಗ್ರಾಮಗಳಲ್ಲಿ ಸಂಚರಿಸಿತು. ಈ ವೇಳೆ ಮತದಾನದ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು. ಈ ಸಂದರ್ಭದಲ್ಲಿ ನರೇಗ ಸಹಾಯಕ ನಿರ್ದೇಶಕ ಕರಿಯಪ್ಪ, ಡಿ.ಪಾಳ್ಯ ಹೋಬಳಿಯ ಎಲ್ಲಾ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿಗಳ, ಸಿಬ್ಬಂದಿ ಸೇರಿದಂತೆ ಇತರರು ಹಾಜರಿದ್ದರು.

# ಕಾಂಗ್ರೆಸ್ ಪ್ರಣಾಳಿಕೆ ಸ್ವಾಗತಾರ್ಹ-ಕೆಪಿಸಿಸಿ ವಕ್ತಾರ

**ಮೈಸೂರು:** ಕಾಂಗ್ರೆಸ್ ಪಕ್ಷ ಇವತ್ತು ಬಿಡುಗಡೆ ಮಾಡಿರುವ ಚುನಾವಣಾ ಪ್ರಣಾಳಕೆ ರೈತರು, ಮಹಿಳೆಯರು, ಯುವ ಜನರು, ಕಾರ್ಮಿಕರ ಹಿತ ಕಾಪಾಡುವ ನಿಟ್ಟಿನಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಕೆಪಿಸಿಸಿ ವಕ್ತಾರ ಎಚ್.ಎ ವೆಂಕಟೇಶ್ ಅಭಿಪ್ರಾಯಪಟ್ಟಿದ್ದಾರೆ.

ಲೋಕಸಭೆ ಚುನಾವಣೆ ಹಿನ್ನಲೆಲ ಕಾಂಗ್ರೆಸ್ ಬಿಡುಗಡೆ ಮಾಡಿರುವ ಪ್ರಣಾಳಿಕ ಕುರಿತು ಪ್ರತಿಕ್ರಿಯಿಸಿರುವ ಹೆಚ್.ಎ ವೆಂಕಟೇಶ್, ರೈತರು ನಡೆಸುತ್ತಿರುವ ಪ್ರತಿಭಟನೆಗಳು ರೈತರ ನೈಜ ಸಮಸ್ಯೆಗಳ ಕಡೆ ಬೆಳಕು ಚೆಲ್ಲಿದೆ. ಆಡಳಿತರೂಢ ಬಿಜೆಪಿ ನೇತೃತ್ವದ ಎನ್ ಡಿಎ ಸರ್ಕಾರ ರೈತರ ಸಮಸ್ಯೆಗಳನ್ನು ಬಗೆಹರಿಸುವ ಬದಲು ಚಳವಳಿಯನ್ನು ಹತ್ತಿಕ್ಕುವ ಪ್ರಯತ್ನ ನಡೆಸಿದೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ರೈತರ ಮಕ್ಕಳಿಗೆ ಉದ್ಯೋಗ, ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ನೀಡುವುದು. ಕನಿಷ್ಠ ಬೆಂಬಲ ಬೆಲೆ ನೀಡುವ ಸಲುವಾಗಿ ಸ್ವಾಮಿನಾಥನ್ ಆಯೋಗದ ಶಿಫಾರಸ್ಸು ಜಾರಿಗೊಳಿಸಲು ನಮ್ಮ ಪಕ್ಷ ತೀರ್ಮಾನಿಸಿರುವುದು ಸ್ವಾಗತಾರ್ಹ ಬೆಳವಣಿಗೆ. ಶಾಶ್ವತ ಕೃಷಿ ಹಣಕಾಸು ಆಯೋಗ ನೇಮಕ ಮಾಡಿ ರೈತರಿಗೆ ಸಾಲ ಸೌಲಭ್ಯ ಒದಗಿಸುವುದು. ಕನಿಷ್ಠ ಬೆಂಬಲ ಬೆಲೆಯನ್ನು ಕೃಷಿಉತ್ಪನ್ನ ಮಾರುಕಟ್ಟೆ ಮೂಲಕ ರೈತರ ಖಾತೆಗೆ ನೇರ ವರ್ಗಾವಣೆ ಮಾಡಲಾಗುವುದು ಎಂಬುದು ಪ್ರಣಾಳಿಕೆಯ ಪ್ರಮುಖ ಅಂಶವಾಗಿದೆ ಎಂದರು.

ರೈತರ ಎಲ್ಲಾ ಬೆಳೆಗಳಿಗೆ ಬೆಳೆ ವಿಮೆ ಮಾಡುವುದು .ಆದಕ್ಕೆ ಕನಿಷ್ಠ ಮೂಲಧನ ನಿಗದಿ, ಅಲ್ಲದೆ ಬೆಳೆ ಪರಿಹಾರ 30 ದಿನಗಳೊಳಗೆ ರೈತರಿಗೆ ಸಿಗುವಂತೆ ಮಾಡುವುದು ದೊಡ್ಡ ದೊಡ್ಡ ಗ್ರಾಮಗಳು ಹಾಗೂ ಪಟ್ಟಣ ಪ್ರದೇಶಗಳಲ್ಲಿ ರೈತರೇ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ರೈತರ ಸಂತೆ ತೆರೆಯುವ ವ್ಯವಸ್ಥೆ ಶ್ಲಾಘನೀಯವಾಗಿದೆ.

ಇವತ್ತಿಗೂ ನಮ್ಮಲ್ಲಿ ಜಾತಿ ವ್ಯವಸ್ಥೆ ಜೀವಂತವಾಗಿರುವುದು ಸತ್ಯಸಂಗತಿ.



ಹಿಂದುಳಿದವರು. ತುಳಿತಕ್ಕೊಳಗಾದವರು, ಪರಿಶಿಷ್ಟ ಜಾತಿ, ಪಂಗಡದ ಜನರಿಗೆ ಸಾಮಾಜಿಕ ನ್ಯಾಯ ಒದಗಿಸಲು ಪಕ್ಷ ಪಣತೊಟ್ಟಿದೆ. ಈ ನಿಟ್ಟಿನಲ್ಲಿ ದೇಶಾದ್ಯಂತ ಆರ್ಥಿಕ, ಸಾಮಾಜಿಕ ಹಾಗೂ ಜಾತಿ ಜನಗಣತಿ ನಡೆಸಲು ಪಕ್ಷ ತೀರ್ಮಾನಿಸಿರುವುದು ಆರೋಗ್ಯಕರ ಬೆಳವಣಿಗೆ ಆಗಿದೆ ಎಂದು ಹೆಚ್.ಎ ವೆಂಕಟೇಶ್ ತಿಳಿಸಿದ್ದಾರೆ. ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಈಗ ನೀಡುತ್ತಿರುವ ಶೇ.10 ರಷ್ಟು ಇ ಡಬ್ಲ್ಯು ಎಸ್ ಮೀಸಲಾತಿಯನ್ನು ಎಲ್ಲಾ ಜಾತಿ ವರ್ಗಗಳಿಗೆ ವಿಸ್ತರಿಸಲಾಗುವುದು. ಅಧಿಕಾರಕ್ಕೆ ಬಂದ ಕೂಡಲೇ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಪಕ್ಷ ಭರವಸೆ ನೀಡಿದೆ. ಈಗ ಜಾರಿಯಲ್ಲಿರುವ ಗುತ್ತಿಗೆ ನೌಕರಿ ಪದ್ಧತಿ ರದ್ದು ಪಡಿಸಲಾಗುವುದು. ಈಗಾಗಲೇ ಗುತ್ತಿಗೆ ಆಧಾರದ ಮೇಲೆ ಸಲ್ಲಿಸುತ್ತಿರುವವರನ್ನು ಖಾಯಂಗೊಳಿಸುವ ಬಗ್ಗೆ ಆಶ್ವಾಸನೆ ನೀಡಿದೆ.

ಧಾರ್ಮಿಕ ಹಾಗೂ ಭಾಷಾ ಅಲ್ಪ ಸಂಖ್ಯಾತರ ಹಕ್ಕುಗಳ ರಕ್ಷಣೆಗೆ ಒತ್ತು ನೀಡುವುದು. ಈ ವರ್ಗದ ಜನರಿಗೆ ಶಿಕ್ಷಣ, ಉದ್ಯೋಗ, ಕ್ರೀಡೆ, ವ್ಯಾಪಾರ ಇತರೇ ಕ್ಷೇತ್ರಗಳಲ್ಲಿ ಮುಂದೆ ಬರಲು ಎಲ್ಲಾ ರೀತಿ ಆರ್ಥಿಕ ಸಹಕಾರ ನೀಡುವುದಾಗಿ ಪಕ್ಷ ಭರವಸೆ ನೀಡಿದೆ.

ದೇಶಾದ್ಯಂತ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಆರೋಗ್ಯ ಸೇವೆ ಒದಗಿಸಲಾಗುವುದು. ರಾಜಸ್ಥಾನ ಮಾದರಿಯಲ್ಲಿ 25 ಲಕ್ಷ ರೂ. ವೆಚ್ಚದವರೆಗೆ ಆರೋಗ್ಯ ಸೇವೆ ಒದಗಿಸುವ ಯೋಜನೆ ಅನುಷ್ಠಾನಕ್ಕೆ ತರಲಾಗುವುದು. ಅಲ್ಲದೆ ದೇಶದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು ಎಂದು ಪಕ್ಷ ಭರವಸೆ ನೀಡಿದೆ.

ಶಿಕ್ಷಣ ಹಕ್ಕು ಖಾಯಿದೆಗೆ ತಿದ್ದುಪಡಿ ತಂದು ಒಂದರಿಂದ 12 ನೇತರಗತಿವರೆಗೆ ಉಚಿತ ಶಿಕ್ಷಣ ನೀಡಲಾಗುವುದು. ರಾಷ್ಟ್ರೀಯ ಶಿಕ್ಷಣ ನೀತಿಗೆ ಅನೇಕ ರಾಜ್ಯಗಳು ವಿರೋಧ ವ್ಯಕ್ತಪಡಿಸಿವೆ. ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಎಲ್ಲಾ ರಾಜ್ಯಗಳೊಂದಿಗೆ ಚರ್ಚಿಸಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ರೂಪಿಸುವುದಾಗಿ ಪಕ್ಷ ಭರವಸೆ ನೀಡಿದೆ.

ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವ ಸಲುವಾಗಿ ಮಹಾಲಕ್ಷ್ಮಿ ಯೋಜನೆಯಡಿ ಪ್ರತಿ ಬಡ ಮಹಿಳೆಯರಿಗೆ ವಾರ್ಷಿಕ 1 ಲಕ್ಷ ರೂ. ಸಹಾಯ ನೀಡಲು ಪಕ್ಷ ಪ್ರಣಾಳಿಕೆಯಲ್ಲಿ ಭರವಸೆ ನೀಡಿದೆ. ಕ್ರೀಡಾ ಪಟುಗಳಿಗೆ, ಮೀನುಗಾರರಿಗೆ ಹಾಗೂ ದುಡಿಯುವ ವರ್ಗದ ಜನರಿಗೆ ಎಲ್ಲಾ ರೀತಿ ಆರ್ಥಿಕ ಭದ್ರತೆ ಒದಗಿಸಲಾಗುವುದು ಎಂದರು.

ಸಂವಿಧಾನದಲ್ಲಿ ಇರುವಂತೆ ಪ್ರತಿಯೊಬ್ಬ ನಾಗರಿಕರಿಗೆ ನೀಡಲಾಗಿರುವ ವಾಕ್ ಸ್ವಾತಂತ್ರ್ಯವನ್ನು ಎತ್ತಿ ಹಿಡಿಯಲಾಗುವುದು. ನ್ಯಾಯಾಂಗ, ಮಾಧ್ಯಮಗಳ ಹಕ್ಕಗಳನ್ನು ಗೌರವಿಸಲಾಗುವುದು ಎಂದು ಪಕ್ಷ ಪ್ರಣಾಳಿಕೆಯಲ್ಲಿ ಭರವಸೆ ನೀಡಿರುವುದು ಉತ್ತಮವಾಗಿದೆ ಎಂದು ವೆಂಕಟೇಶ್ ಹೇಳಿದ್ದಾರೆ.



ರಾಮನಗರ, ಕನಕಪುರ ತಾಲ್ಲೂಕು ಪಂಚಾಯತ್ ಹಾಗೂ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಕನಕಪುರ ತಾಲ್ಲೂಕಿನ ಟಿ. ಬೇಕುಪ್ಪೆ, ಬನವಾಸಿ ಹಾಗೂ ಬನ್ನಿಮುಕ್ಕೊಡ್ಲು ಗ್ರಾಮ ಪಂಚಾಯಿತಿಗಳಲ್ಲಿ ಮತದಾನ ಮಹತ್ವದ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

# ಲೋಕಸಭಾ ಸಾರ್ವತ್ರಿಕ ಚುನಾವಣೆ :ಚುನಾವಣಾ ವೀಕ್ಷಕರ ನೇಮಕ

**ಮೈಸೂರು:** ಲೋಕಸಭಾ ಸಾರ್ವತ್ರಿಕ ಚುನಾವಣಾ ಸಂಬಂಧ ಭಾರತ ಚುನಾವಣಾ ಆಯೋಗದಿಂದ ವಿಧಾನಸಭಾ ಕ್ಷೇತ್ರಗಳಾದ ಮಡಿಕೇರಿ, ವಿರಾಜಪೇಟೆ, ಪಿರಿಯಾಪಟ್ಟಣ, ಹುಣಸೂರು, ಚಾಮುಂಡೇಶ್ವರಿ, ಕೃಷ್ಣರಾಜ, ಚಾಮರಾಜ ಮತ್ತು ನರಸಿಂಹರಾಜ ಕ್ಷೇತ್ರಕ್ಕೆ ಚುನಾವಣಾ ಸಾಮಾನ್ಯ ವೀಕ್ಷಕರಾಗಿ ಶಾಹಿದ್ ಇಕ್ಬಾಲ್ ಚೌದ್ರಿ, (ಮೊ.ಸಂ 9482042877) ಹಾಗೂ ಪೋಲೀಸ್ ವೀಕ್ಷಕರಾಗಿ ಮನೋಜ್ ತಿವಾರಿ (ಮೊ.ಸಂ 9482209477) ಅವರು ನೇಮಕಗೊಂಡಿದ್ದಾರೆ. ಮಡಿಕೇರಿ, ವಿರಾಜಪೇಟೆ, ಪಿರಿಯಾಪಟ್ಟಣ, ಹುಣಸೂರು ವಿಧಾನಸಭಾ ಕ್ಷೇತ್ರಗಳಿಗೆ ಸುರೇಶ್.ಎ, (ಮೊ.ಸಂ. 9482051577) ಹಾಗೂ ಚಾಮುಂಡೇಶ್ವರಿ, ಕೃಷ್ಣರಾಜ, ಚಾಮರಾಜ ಮತ್ತು ನರಸಿಂಹರಾಜ ಕ್ಷೇತ್ರಗಳಿಗೆ ಯೋಗೀಶ್ ಮಿಶ್ರ (ಮೊ.ಸಂ 9482058477) ಅವರನ್ನು ವೆಚ್ಚ ವೀಕ್ಷಕರಾಗಿ ನೇಮಿಸಲಾಗಿದೆ. ಸಾಮಾನ್ಯ ವೀಕ್ಷಕರಾದ ಶಾಹಿದ್ ಇಕ್ಬಾಲ್ ಚೌದ್ರಿರವರು ಸೋಮವಾರ, ಮಂಗಳವಾರ, ಹಾಗೂ ಬುಧವಾರ ಮಧ್ಯಾಹ್ನ 3 ರಿಂದ 4 ಗಂಟೆಯವರೆಗೆ ಜಲದರ್ಶಿನಿ ಅತಿಥಿಗೃಹ ಹೊಸ ಕಟ್ಟಡದ ವಿ.ಐ.ಪಿ ಲಾಂಜ್-2 ಕೊಠಡಿ, ವೆಚ್ಚ ವೀಕ್ಷಕರಾದ ಸುರೇಶ್.ಎ ಅವರು ಪ್ರತಿ ದಿನ ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ಹಳೆ ಕಟ್ಟಡದ ವಿ.ಐ.ಪಿ-1 ಕೊಠಡಿ ಹಾಗೂ ಯೋಗೀಶ್ ಮಿಶ್ರ ಅವರು ಪ್ರತಿದಿನ ಬೆಳಗ್ಗೆ 11 ರಿಂದ 12 ಗಂಟೆಯವರೆಗೆ ಹಳೆ ಕಟ್ಟಡದ ವಿ.ಐ.ಪಿ-2 ಕೊಠಡಿ, ಪೊಲೀಸ್ ವೀಕ್ಷಕರಾದ ಮನೋಜ್ ತಿವಾರಿ ಅವರು ಸೋಮವಾರ, ಮಂಗಳವಾರ, ಬುಧವಾರ ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ಹೊಸ ಕಟ್ಟಡದ ವಿ.ಐ.ಪಿ ಲಾಂಜ್-1 ಕೊಠಡಿಗೆ ಸಾರ್ವಜನಿಕರು ನೇರವಾಗಿ ಭೇಟಿ ಮಾಡಿ ಯಾವುದೇ ಮನವಿ ಅಥವಾ ಅಹವಾಲುಗಳನ್ನು ಸಲ್ಲಿಸಬಹುದಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯಾದ ಡಾ. ಕೆ.ವಿ ರಾಜೇಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಳಲಿನಲ್ಲಿ ವಿಜೃಂಭಣೆಯ ಶ್ರೀಕಾಳಿಕಾಂಬ ದೇವಿ ಹಬ್ಬ

**ಮಂಡ್ಯ:** ತಾಲ್ಲೂಕಿನ ಹೊಳಲು ಗ್ರಾಮದಲ್ಲಿ ಗಂಗಾಮತಸ್ಥರ ಕುಲದೇವತೆಯಾದ ಕಾಳಿಕಾಂಬ ದೇವಿಯ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಗುರುವಾರ ರಾತ್ರಿ ಗ್ರಾಮದ ಎಲ್ಲಾ ದೇವಸ್ಥಾನಗಳು ಹಾಗೂ ಪ್ರಮುಖ ಬೀದಿಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ರಾತ್ರಿ ಗ್ರಾಮದ ಮಹಿಳೆಯರು ಮಕ್ಕಳು, ಬಾಯಿಬೀಗ ಹಾಗೂ ತಂಬಿಟ್ಟಿನ ಆರತಿಯನ್ನು ತೆಗೆದುಕೊಂಡು ಶ್ರೀಕಾಳಿಕಾಂಬ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ದಿನ ಬೆಳಗ್ಗೆ ಶುಕ್ರವಾರ 10 ಗಂಟೆಗೆ ಮಹಿಳೆಯರು ಮಕ್ಕಳು ದೇವರಿಗೆ ಪೂಜೆ ಸಲ್ಲಿಸಲು ಹೆಡಿಗೆಯನ್ನು ತೆಗೆದುಕೊಂಡು ಹಾಗೂ ದೇವರ ಉತ್ಸವದೊಂದಿಗೆ ದೇವಸ್ಥಾನಕ್ಕೆ ತೆರಳಿದರು. ನಂತರ ಪ್ರತೀ ಮನೆಯವರು ಸಹ ದೇವಸ್ಥಾನದ ಆವರಣದಲ್ಲಿ ಪೂಜೆ ಸಾಮಗ್ರಿಗಳನ್ನು ತೆಗೆದುಕೊಂಡು ಹೋಗಿ ಒಲೆ ಹಚ್ಚಿ ಎಲ್ಲರೂ ಸಹ ಅಡುಗೆ ಮಾಡಿ ದೇವರಿಗೆ ನೈವೇದ್ಯ ಹಾಗೂ ಎಡೆ ಅರ್ಪಿಸಿದರು. ಪುರಾತನ ಕಾಲದಿಂದಲೂ ಸಹ ಈ ಹಬ್ಬವನ್ನು ಆಚರಿಸಿಕೊಂಡು ಬರುತ್ತಿದ್ದುದು ವಿಶೇಷ. ಆದರೆ, ಕಳೆದ ಏಳು ವರ್ಷಗಳಿಂದ ಹಲವು ಕಾರಣಗಳಿಂದ ಹಬ್ಬವನ್ನು ಮಾಡಿರಲಿಲ್ಲ. ಆದ್ದರಿಂದ ಈ ವರ್ಷ ವಿಜೃಂಭಣೆಯಿಂದ ಹಬ್ಬವನ್ನ ಆಚರಿಸಲಾಯಿತು. ಈ ವೇಳೆ ದೇವಸ್ಥಾನದ ಪ್ರಧಾನ ಅರ್ಚಕ ಶಂಕರಪ್ಪ, ಸಮಿತಿ ಅಧ್ಯಕ್ಷ ಸುರೇಶ್‌ಕುಮಾರ್, ಉಪಾಧ್ಯಕ್ಷೆ ಭಾಗ್ಯಮ್ಮ, ಗೌರವಾಧ್ಯಕ್ಷ ನಾರಾಯಣಪ್ಪ, ಮುಖಂಡರಾದ ಶ್ರೀಧರ್, ಗ್ರಾಪಂ ಉಪಾಧ್ಯಕ್ಷ ಜಯಪ್ರಕಾಶ್, ಮಾಜಿ ಉಪಾಧ್ಯಕ್ಷ ಪಲ್ಲವಿ,ಸದಸ್ಯರಾದ ರಾಜಶೇಖರ, ಯುವ ಮುಖಂಡರು, ಗಂಗಾಮತಸ್ಥರ ಮುಖಂಡರು ಹಾಗೂ ಹೊಳಲು ಗ್ರಾಮದ ಮುಖಂಡರುಗಳು ಹಾಜರಿದ್ದು, ದೇವಿಯ ದರ್ಶನ ಪಡೆದರು.



# ಸಹಕಾರ ಸಂಘಕ್ಕೆ ಹರೀಶ್ ದೊಡ್ಡಬಾಣಸವಾಡಿ ಆಯ್ಕೆ

**ಮಂಡ್ಯ:** ತಾಲ್ಲೂಕಿನ ದೊಡ್ಡಬಾಣಸವಾಡಿ ಹರೀಶ್ ಅವರು ಹೊಡಘಟ್ಟ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದರು. ಅವಿರೋಧವಾಗಿ ಆಯ್ಕೆಯಾದ ಹರಿಶ್ ಅವರಿಗೆ ನಿರ್ದೇಶಕರು ಸೇರಿದಂತೆ ಅವರ ಅಭಿಮಾನಿಗಳು ಸಿಹಿ ವಿತರಿಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹಲವು ಸಂಘಸಂಸ್ಥೆಗಳಲ್ಲಿ ಸಕ್ರಿಯವಾಗಿ ಸಮಾಜಮುಖಿ ಕೆಲಸ ಮಾಡಿರುವ ನನಗೆ ಈ ಹುದ್ದೆ ಹರಿಸಿ ಬಂದಿದೆ, ರೈತರ ಪರವಾಗಿ ಕೆಲಸ ಮಾಡುವೆ, ದೊಡ್ಡಬಾಣಸವಾಡಿ, ಚಿಕ್ಕಬಾಣಸವಾಡಿ, ಹೊನ್ನಾಯಕನಹಳ್ಳಿ, ನಲ್ಲಹಳ್ಳಿ, ಈಚಗೆರೆ, ಹೊಡಘಟ್ಟ ಗ್ರಾಮದ ರೈತರ ಅಭಿವೃದ್ಧಿಗೆ ಶ್ರಮಿಸುವೆ. ನನ್ನ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಆಗಲು ಶ್ರಮಿಸಿದ ನಿರ್ದೇಶಕರು, ಗ್ರಾಮಸ್ಥರು ಹಾಗೂ ಮುಖಂಡರಿಗೆ ವಿಶೇಷ ಧನ್ಯವಾದ ಸಲ್ಲಿಸುವೆ ಎಂದರು.

# ಹುಳಿಯಾರು ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿಗೆ ಹಾಹಾಕಾರ

**ಹುಳಿಯಾರು:** ಪಂಚಾಯ್ತಿಗೆ ಲಕ್ಷಾಂತರ ರೂ.ಆದಾಯ ನೀಡುವ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ಹಾಹಾಕಾರ ಇದೆ. ಬಿಸಿಲ ಝಳದಲ್ಲಿ ನೀರಿನ ದಾಹ ತಣಿಸುವುದಕ್ಕಿರಲಿ ಗಂಟಲು ನೆನಸಿಕೊಳ್ಳಲೂ ಸಹ ಹನಿ ನೀರಿಲ್ಲ. ನಿತ್ಯ ಬಸ್ ನಿಲ್ದಾಣಕ್ಕೆ ಬಂದೋಗುವ ಅಧಿಕಾರಿಗಳು, ಜನಪ್ರತಿನಿಧಿಗಳು ಕಣ್ಣಿದ್ದು ಕುರುಡರಾಗಿದ್ದಾರೆ. ಇದು ಜಿಲ್ಲೆಯಲ್ಲೇ ಅತೀ ದೊಡ್ಡ ಹೋಬಳಿ ಕೇಂದ್ರವಾದ ಹುಳಿಯಾರಿನ ಕಥೆವ್ಯಥೆ.

ಹುಳಿಯಾರು ಪ್ರಮುಖ ವಾಣಿಜ್ಯ ಕೇಂದ್ರದ ಜೊತೆಗೆ ಮೈಸೂರು, ಚಿತ್ರದುರ್ಗ, ಹಾಸನ, ಬೆಂಗಳೂರು, ಹೊಸದುರ್ಗ, ಬಳ್ಳಾರಿ ಹೀಗೆ ರಾಜ್ಯದ ಪ್ರಮುಖ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸುತ್ತದೆ. ಹಾಗಾಗಿ ತುಮಕೂರು, ಹಾಸನ, ಚಿಕ್ಕಮಗಳೂರು, ಚಿತ್ರದುರ್ಗ ಜಿಲ್ಲೆಗಳ ಗಡಿ ಗ್ರಾಮದ ಸಸ್ರಾರು ಜನರು ನಿತ್ಯ ಹುಳಿಯಾರು ಬಸ್ ನಿಲ್ದಾಣಕ್ಕೆ ಬಂದೋಗುತ್ತಾರೆ. ಅಲ್ಲದೆ ಶಾಲಾಕಾಲೇಜಿಗೆ ಮಕ್ಕಳು, ಆಸ್ಪತ್ರೆಗಳಿಗೆ ರೋಗಿಗಳು, ಬ್ಯಾಂಕ್‌ಗಳಿಗೆ ವೃದ್ದರು, ಅಂಗವಿಕಲರು ಸಹ ಬರಲು ಇಲ್ಲಿಗೆ ಬರುತ್ತಾರೆ. ಆದರೆ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದ್ದು, ನಾನಾ ಕಡೆಯಿಂದ ಬಸ್ ಹಿಡಿಯಲು ಆಗಮಿಸಿದ ಪ್ರಯಾಣಿಕರಿಗೆ ನೀರಿನ ಬವಣೆಯ



ಬಿಸಿ ತಟ್ಟಿದೆ. ಈ ಬಸ್ ನಿಲ್ದಣದಲ್ಲಿ ವರ್ಷಗಳಿಂದಲೂ ನೀರಿನ ಸಮಸ್ಯೆಯಿದ್ದರೂ ಅಷ್ಟಾಗಿ ಕಂಡು ಬರುತ್ತಿರಲಿಲ್ಲ. ಈಗಂತೂ ಬೇಸಿಗೆ ದಿನವಾಗಿದ್ದರಿಂದ ಪರಿಸ್ಥಿತಿ ಮತಷ್ಟು ಬಿಗಡಾಯಿಸಿದೆ. ಇಲ್ಲಿ ಮುದ್ದಹನುಮೇಗೌಡರು ಸಂಸದರಾಗಿದ್ದ ಸಂದರ್ಬದಲ್ಲಿ ಮಾಡಿಸಿದ್ದ ಶುದ್ಧ ನೀರಿನ ಘಟಕ ಇದೆ. ಅದಕ್ಕೆ ನಲ್ಲಿ ಮತ್ತು ನೀರಿನ ಸರಬರಾಜು ವ್ಯವಸ್ಥೆ ಮಾಡದೆ ನಿಷ್ಕ್ರಿಯವಾಗಿದೆ. ಹಾಗಾಗಿ ನಿಲ್ದಾಣದಲ್ಲಿರುವ ಖಾಸಗಿ ಹೋಟೆಲ್ ಮತ್ತು ಚಹಾ ಅಂಗಡಿಗಳಿಗೆ ಹೋಗಿ ಕೇಳುತ್ತಿದ್ದಾರೆ. ಅವರೂ ಸಹ ದುಡ್ಡು ಕೊಟ್ಟು ತರುವುದರಿಂದ ವ್ಯಾಪಾರ ಮಾಡದೆ ನೀರನಷ್ಟೇ ಕೇಳುವ ಎಷ್ಟು ಜನಕ್ಕೆ ಕೊಡಲು ಸಾಧ್ಯ ಹೇಳಿ?

ಹಾಗಾಗಿಯೇ ನೀರಿನ ವಿಷಯದಲ್ಲಿ ಆಗಾಗ ಸಾರ್ವಜನಿಕರು ಮತ್ತು ಹೋಟೆಲ್‌ನವರೊಂದಿಗೆ ಜಗಳ ಆಗುತ್ತಲೇ ಇರುತ್ತದೆ. ಅನಿವಾರ್ಯವಾಗಿ ಹೊರಗೆ ದುಡ್ಡು ಕೊಟ್ಟು ಮಿನರಲ್ ವಾಟರ್‌ಗಳನ್ನು ತೆಗೆದುಕೊಳ್ಳುವಂತಾಗಿದೆ.ರಾಜ್ಯದ ಹಲವು ನಗರಗಳಿಗೆ ಹುಳಿಯಾರು ಮಾರ್ಗವಾಗಿ ಬಸ್‌ಗಳು ಓಡಾಡುವುದರಿಂದ ಅಹೋರಾತ್ರಿ ಬಸ್‌ಗಳು ಓಡಾಡುತ್ತವೆ. ರಾತ್ರಿ ಹೋಟೆಲ್‌ಗಳು ಮುಚ್ಚಿರುತ್ತವೆ. ಅಂಥಹ ಸಂದರ್ಭದಲ್ಲಿ ಪ್ರಯಾಣಿಕರ ಗೋಳು ಹೇಳತೀರದು. ರಾತ್ರಿ ತಂಗುವ ಬಸ್‌ಗಳ ಚಾಲಕ-ನಿವಾಹರ್ಕರಿಗೆ ಇದರ ಶಾಕ್ ಮುಟ್ಟುತ್ತದೆ. ಅಲ್ಲಿನ ಫುಟ್ ಫಾತ್ ವ್ಯಾಪಾರಿಗಳಿಗೂ ನೀರಿಗಾಗಿ ಪರಿತಪಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿರುತ್ತದೆ. ಪಂಚಾಯ್ತಿಗೆ ಖಾಸಗಿ ಬಸ್ ಸುಂಕ, ಪುಟ್‌ಫಾತ್ ಸುಂಕ, ವಾಣಿಜ್ಯ ಮಳಿಗೆಗಳ ಬಾಡಿಗೆ ಹೀಗೆ ಮಾಸಿಗ ಲಕ್ಷಾಂತರ ರೂ ಸಂಗ್ರಹವಾಗುತ್ತಿದ್ದರೂ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ ಅಂದರೆ ನಿಜಕ್ಕೂ ಅಚ್ಚರಿಯಾಗುತ್ತದೆ. ಹಣವಂತರು ಮಿನರಲ್ ವಾಟರ್‌ಗಳನ್ನು ತೆಗೆದುಕೊಳ್ಳುತ್ತಾರೆ. ಬಡ ಪ್ರಯಾಣಿಕರು ಏನು ಮಾಡಬೇಕು. ಪ್ರಯಾಣಿಕರ ಅನುಕೂಲಕ್ಕಾಗಿ ಪಂಚಾಯ್ತಿ ತಕ್ಷಣ ನೀರಿನ ವ್ಯವಸ್ಥೆ ಮಾಡಬೇಕಿದೆ.

### ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಬಣ್ಣನೆ

# ಹಸಿವು ಮುಕ್ತ ದೇಶಕ್ಕೆ ಬಾಬೂಜಿ ಕೊಡುಗೆ

**ಚಿಕ್ಕಬಳ್ಳಾಪುರ:** ದೇಶ ಹಸಿವಿನ ಸಂಕಷ್ಟದಲ್ಲಿದ್ದಾಗ ಹಸಿರು ಕ್ರಾಂತಿಗೆ ನಾಂದಿ ಹಾಡುವ ಮೂಲಕ ದೇಶದಲ್ಲಿ ಆಹಾರ ಧಾನ್ಯಗಳು ಸಮೃದ್ಧವಾಗಿ ಸಿಗುವಂತೆ ಮಾಡಿದವರು ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನರಾಂ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಹಸಿರುಕ್ರಾಂತಿಯ ಹರಿಕಾರ, ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನರಾಮ್ ಅವರ 117 ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೀನದಲಿತರು, ರೈತರು, ಕಾರ್ಮಿಕರು, ಶೋಷಿತರ ಬಗ್ಗೆ ಅಪಾರ ಕಳಕಳಿಯನ್ನು ಹೊಂದಿದ್ದ ದೂರದೃಷ್ಟಿಯ ನಾಯಕ ಬಾಬು ಜಗಜೀವನರಾಮ್. ಕೇಂದ್ರದಲ್ಲಿ ಹಲವು ಮಹತ್ವದ ಸಚಿವ ಖಾತೆಗಳನ್ನು ಸಮರ್ಥವಾಗಿ ನಿರ್ವಹಿಸಿದ್ದ ಅವರು ದೇಶ ಹಸಿವಿನ ಸಂಕಷ್ಟದಲ್ಲಿದ್ದಾಗ ಹಸಿರು ಕ್ರಾಂತಿಗೆ ನಾಂದಿ ಹಾಡಿದರು. ಇಂದು ದೇಶ ಆಹಾರ ಸಮೃದ್ಧತೆಯಲ್ಲಿ ಸ್ವಾವಲಂಬನೆ ಸಾಧಿಸಿದೆ ಎಂದರೆ ಅದಕ್ಕೆ ಅವರ ಪರಿಶ್ರಮ ಮತ್ತು ದೂರದೃಷ್ಟಿಯೇ ಕಾರಣ. ಅವರ ಚಿಂತನೆಗಳ ಬೆಳಕಿನಲ್ಲಿ ವಿದ್ಯಾರ್ಥಿ ಯುವಜನರು ದೇಶವನ್ನು ಕೊಂಡೊಯ್ಯುವ ಅಗತ್ಯವಿದೆ ಎಂದರು.

ಭಾರತೀಯ ಸಮಾಜದ ದ್ರುವತಾರೆಗಳಾದ ಡಾ. ಬಾಬು ಜಗಜೀವನರಾಂ ಮತ್ತು ಡಾ. ಬಿ. ಆರ್.ಅಂಬೇಡ್ಕರ್ ರವರು ಶೋಷಿತ ವರ್ಗದ ಏಳಿಗೆ, ಅಭಿವೃದ್ಧಿ, ಸಂಘಟನೆ, ಹೋರಾಟ, ಶಿಕ್ಷಣಕ್ಕಾಗಿ ಶ್ರಮಿಸಿ ಎಲ್ಲರ ಬದುಕಿಗೆ ಬೆಳಕಾಗಿದ್ದಾರೆ. ಅವರ ಜೀವನ ದಾರಿ ಮತ್ತು ಆದರ್ಶಗಳನ್ನು ನಾವೆಲ್ಲರೂ ಜೀವನದಲ್ಲಿ ರೂಡಿಸಿಕೊಂಡು ದೇಶದ ಭವಿಷ್ಯವನ್ನು ಉಜ್ವಲಗೊಳಿಸಲು ಶ್ರಮಿಸಬೇಕು. ನಮ್ಮ ಇಂದಿನ ಮತ್ತು ಮುಂದಿನ ಪೀಳಿಗೆಯ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಡಾ. ಬಾಬು ಜಗಜೀವನರಾಂ ರವರು ಭಾರತದ ಮಾಜಿ ಉಪಪ್ರಧಾನಿಗಳಾಗಿ ಹಾಗೂ ಕೇಂದ್ರದ ವಿವಿಧ ಇಲಾಖೆಗಳ ಸಚಿವರಾಗಿ ದೇಶವನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸಿ ದೇಶದ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದರು.

ಉಪನ್ಯಾಸಕ ಮುನಿರಾಜು ಎಂ. ಅರಿಕೆರೆ ರವರು ಮಾತನಾಡಿ ಡಾ.ಬಾಬು ಜಗಜೀವನ್ ರಾಮ್ ಅವರು ಬಡತನ



ಮತ್ತು ಅಸ್ಪೃಶ್ಯತೆಯ ಮಧ್ಯೆ ಮೂಡಿದ ಪರಿವರ್ತನೆಯ ಹಣತೆಯಾಗಿದ್ದಾರೆ. ಕೆಳ ಸಮುದಾಯದಲ್ಲಿ ಜನಿಸಿ ಜಾತಿ ತಾರತಮ್ಯಕ್ಕೆ ಒಳಗಾಗಿದ್ದರು ಸಹ ತಮ್ಮ ಅಚಲ ಸಾಧನೆಯ ಮೂಲಕ ಭಾರತದ ರಾಜಕೀಯ ಚರಿತ್ರೆಯಲ್ಲಿ 50 ವರ್ಷಗಳ ಕಾಲ ಉತ್ತಮ ಸಂಸದೀಯಪಟುವಾಗಿ ಅಚ್ಚಳಿಯದ ಸಾಧನೆ ಮಾಡಿದ್ದರು ಎಂದರು.

ಕಾರ್ಮಿಕ ಖಾತೆ ಸಚಿವರಾಗಿ ಕಾರ್ಮಿಕರ ಸಂಕಷ್ಟಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಕ್ಕೆ ತಂದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಂಚೆ ಕಚೇರಿಗಳನ್ನು ತೆರೆಯುವ ಜೊತೆಗೆ ಎಸ್.ಸಿ, ಎಸ್.ಟಿ ಸಮುದಾಯದ ಅಭ್ಯರ್ಥಿಗಳ ನೇಮಕಾತಿಗೆ ಒತ್ತು ನೀಡಿದರು. ರೈಲ್ವೆ ಮಜ್ದೂರ್ ಯೂನಿಯನ್ ಸಂಘಟನೆ ಸ್ಥಾಪನೆ ಮಾಡಿ ಮೀಸಲಾತಿ ಅಡಿಯಲ್ಲಿ ಬರುವ ಖಾಲಿ ಹುದ್ದೆಗಳ ನೇಮಕದಲ್ಲಿ ಶೋಷಿತ ಸಮುದಾಯಗಳ ಪರ ಸೇವೆ ಸಲ್ಲಿಸಿದ್ದಾರೆ. ಕೃಷಿ ಸಚಿವರಾಗಿದ್ದ ಅವಧಿಯಲ್ಲಿ ಪಾರಂಪರಿಕ ಕೃಷಿಯ ಜತೆಗೆ ಭೂರಹಿತ ಸಾಗುವಳಿದಾರರಿಗೆ ಭೂಮಿ ಹಂಚಿಕೆ, ಸಹಕಾರಿ ಸೇವೆ ಪ್ರಾರಂಭ, ಉತ್ತಮ ಬೀಜ, ರಸಗೊಬ್ಬರ ವಿತರಣೆ ಯೋಜನೆ ಜಾರಿಗೊಳಿಸಿ ಹಸಿರು ಕ್ರಾಂತಿಗೆ ಕಾರಣ ಕರ್ತರಾಗಿದ್ದಾರೆ ಎಂದರು. ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಹಾಗೂ ಡಾ. ಬಾಬು ಜಗಜೀವನರಾಂ ರವರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ಡಾ. ಬಾಬು ಜಗಜೀವನರಾಂ ರವರ 117ನೇ ಜನ್ಮ ದಿನಾಚರಣೆಯ ಜಯಂತಿಯ ಕಾರ್ಯಕ್ರಮದಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಮತ್ತು ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಮತದಾನದ ಜಾಗೃತಿ ಕುರಿತು ಮತದಾರರ ಪ್ರತಿಜ್ಞಾವಿಧಿ ಬೋಧಿಸಲಾಯಿತು ಏಪ್ರಿಲ್ 26 ರಂದು ತಪ್ಪದೇ ಎಲ್ಲರೂ ಮತದಾನ ಮಾಡಲು ಮನವಿ ಮಾಡಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಸಂವಿಧಾನ ಪೀಠಿಕೆಯನ್ನು ಬೋಧಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್.ನಾಗೇಶ್, ಉಪವಿಭಾಗಾಧಿಕಾರಿ ಡಿ.ಎಚ್.ಅಶ್ವಿನ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ತೇಜಾನಂದ ರೆಡ್ಡಿ, ತಹಸೀಲ್ದಾರ್ ಅನಿಲ್, ತಾಲೂಕು ಪಂಚಾಯತ್ ಕಾರ್ಯನಿರ್ವಣಾಧಿಕಾರಿ ಸಂದೀಪ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶೇಷಾದ್ರಿ, ವಿವಿಧ ಸಮುದಾಯಗಳ ಮುಖಂಡರು ಕಾರ್ಯಕ್ರಮದಲ್ಲಿ ಉಪಸ್ಥಿತರಿದರು.

# ಲಗೇಜು ಬಾಕ್ಸ್ ಇದ್ದರೂ ಬಸ್ಸಿನೊಳಗೇ ಲಗೇಜು ಇರಿಸುವ ನಿರ್ವಾಹಕ

**ಬೇಲೂರು:** ಹೇಳಿ ಕೇಳಿ ತುಂಬಿ ತುಳುಕುವ ಬಸ್ಸುಗಳು. ಪ್ರಯಾಣಿಕರು ನಿಂತೇ ಪ್ರಯಾಣಿಸಬೇಕಾದ ಅನಿವಾರ್ಯತೆ ಜನಸಾಮಾನ್ಯರದ್ದು. ಈ ನಡುವೆ ಬಸ್ಸುಗಳ ಒಳಗಡೆ ಲಗೇಜು ಹಾಕಿಸಿಕೊಂಡು ಬರುವ ನಿರ್ವಾಹಕರಿಂದಾಗಿ ಪ್ರಯಾಣಿಕರು ಪರಪಾಡದ ಪಾಡು ಯಾತನೆ ಅನುಭವಿಸುವಂತ ಹೀನಾಯ ಸ್ಥಿತಿ ಒದಗಿಬಂದಿದೆ.

ಬೇಲೂರಿನ ಬಸ್ ನಿಲ್ದಾಣಕ್ಕೆ ಸಂಜೆ ಸುಮಾರು 6 ಗಂಟೆ ಸಮಯದಲ್ಲಿ ಹಾಸನ ಕಡೆಯಿಂದ ಚಿಕ್ಕಮಗಳೂರಿಗೆ ತೆರಳುವ ಬಸ್ಸು (ಕೆ.ಎ.18 ಎಫ್0681) ಸಂಜೆ ಸುಮಾರು 6 ಗಂಟೆ ವೇಳೆ ಬಂದಾಗ ಪ್ರಯಾಣಿಕರು ನೂಕು ನುಗ್ಗಲಿನಲ್ಲಿ ಬಸ್ ಹತ್ತತೊಡಗಿದರು. ಆದರೆ ಬಸ್ಸಿನ ನಿರ್ವಾಹಕ ಮಾತ್ರ ಪ್ರಯಾಣಿಕರ ಮೇಲೆ ಹೌಹಾರಿದ್ದಲ್ಲದೆ, ಹತ್ತುತ್ತಿದ್ದ ಪ್ರಯಾಣಿಕರನ್ನು ತಡೆದು ತಡಯಮ್ಮ ಲಗೇಜಿದೆ, ಬಸ್ಸು ಹೋಗುತ್ತೆ' ಎಂದು ಅಬ್ಬರಿಸಿ ಬಸ್ಸಿನೊಳಗೆ ತಾನು ಇರಿಸಿಕೊಂಡಿದ್ದ ಲಗೇಜ್ ಮೂಟೆಯನ್ನು ಇಳಿಸತೊಡಗಿದ. ಪ್ರಯಾಣಿಕರು ಮೊದಲೇ ಬಸ್ಸಿನಲ್ಲಿ ಪ್ರಯಾಣಿಸುವುದೆ ಕಷ್ಟದ ಕೆಲಸ, ಇದರ ನಡುವೆ ಬಸ್ಸಿನೊಳಗೆ ಲಗೇಜು ಇಟ್ಟುಕೊಳ್ಳುವುದರ ಬಗ್ಗೆ ಪ್ರಯಾಣಿಕರೊಬ್ಬರು ಪ್ರಶ್ನಿಸಿ, ಲಗೇಜು ಹಾಕುವುದಕ್ಕೆ ಸ್ಥಳವಿಲ್ಲವ ಎಂದು ಪ್ರಶ್ನಿಸಿದರು. ಅದಕ್ಕೆ ಆ ಪ್ರಯಾಣಿಕರೊಟ್ಟಿಗೆ ಘರ್ಷಣೆಗೆ ಇಳಿದರು. ಇದೇ ವೇಳೆ ಆಗಮಿಸಿದ ಇದೆ ಬಸ್ ಚಾಲಕ ನಿರ್ವಾಹಕನಿಗೆ ಬೆಂಬಲವಾಗಿ ನಿಂತು, ಬಸ್ಸಿನ ಬಾಗಿಲನ್ನು ಹಾಕುತ್ತಲೇ ಪ್ರಯಾಣಿಕರ ಮೇಲೆ ಕೂಗಾಡತೊಡಗಿದರು. ಲಗೇಜು ಹಾಕಿದ ಬಗ್ಗೆ ಹಾಗೂ ಪ್ರಯಾಣಿಕರು ಹತ್ತುತ್ತಿರುವಾಗಲೇ ಬಸ್ಸನ್ನು ಚಾಲನೆ ಮಾಡಿದ ಬಗ್ಗೆ ಪ್ರಶ್ನಿಸಿದ ಮಹಿಳಾ ಪ್ರಯಾಣಿಕರೊಬ್ಬರ ಮೇಲೂ ಚಾಲಕ ಹರಿಹಾಯ್ದರು. ರಾಜ್ಯ ರಸ್ತೆಸಾರಿಗೆ ಬಸ್ಸುಗಳ ಒಳ ಭಾಗದಲ್ಲಿ ಲಗೇಜು ಹಾಕಬಹುದೆ?. ಲಗೇಜು ಹಾಕುವುದಕ್ಕೆಂದೇ ಪ್ರತ್ಯೇಕ ಸ್ಥಳ ನಿಗಧಿಪಡಿಸಿಲ್ಲವಾ? ಬಸ್ಸಿನೊಳಗೆ ಲಗೇಜು ಹಾಕಿರುವುದು ನಿರ್ವಾಹಕರಿಗೆ ಗೊತ್ತಿಲ್ಲವೇ? ಗೊತ್ತಿಲ್ಲದೆ ಇದ್ದಿದ್ದರೆ ಬಸ್ಸಿನೊಳಗಿದ್ದ ಲಗೇಜನ್ನು ನಿರ್ವಾಹಕ ಇಳಿಸಿಕೊಟ್ಟಿದ್ದು ಹೇಗೆ? ಬಸ್ಸಿನೊಳಗೆ ಇರಿಸಿಕೊಂಡಿದ್ದ ಲಗೇಜಿಗೆ ನಿರ್ವಾಹಕ ಲಗೇಜು ಶುಲ್ಕ ಪಡೆದುಕೊಂಡಿದ್ದಾರೆಯೇ?.

ನಿರ್ವಾಹಕನಿಗೆ ಬೆಂಬಲವಾಗಿ ನಿಂತ ಚಾಲಕನೂ ಸಹ ಲಗೇಜ್ ವಿಚಾರದಲ್ಲಿ ಪಾಲುದಾರನೇ? ಎಂಬ ಸಂಶಯ ಉಂಟಾಗಿದೆ. ಈ ಬಸ್ಸಿನ ನಿರ್ವಾಹಕ ಇದೇ ರೀತಿ ಎಷ್ಟು ಸಮಯದಿಂದ ಬಸ್ಸಿನೊಳಗೆ ಲಗೇಜು ಇರಿಸಿಕೊಂಡು ಬರುತ್ತಿದ್ದಾರೆ?. ಈ ಬಗ್ಗೆ ಮೇಲಾಧಿಕಾರಿಗಳು ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕೆಂದು ಪ್ರಯಾಣಿಕರು ಮನವಿ ಮಾಡಿದ್ದಾರೆ.

# ಹುಳಿಯಾರು-ತಿಪಟೂರು ಮಾರ್ಗದಲ್ಲಿ ಮತ್ತೆ ಕೆಟ್ಟು ನಿಂತ ಬಸ್!

**ಹುಳಿಯಾರು:** ಹುಳಿಯಾರು ತಿಪಟೂರು ಮಾರ್ಗದಲ್ಲಿ ಸಂಚರಿಸುವ ಕೆಎಸ್‌ಆರ್‌ಟಿಸಿ ಬಸ್‌ಗಳು ನಿತ್ಯ ಒಂದಿಲ್ಲೊಂದು ವಾಹನಗಳು ಕೆಟ್ಟು ನಿಂತು ಈ ಮಾರ್ಗದಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಅದರಲ್ಲೂ ವಿದ್ಯಾರ್ಥಿಗಳಿಗೆ, ರೋಗಿಗಳಿಗೆ ಬಹಳ ತೊಂದರೆಯಾಗುತ್ತಿದೆ ಎಂದು ಸಾರ್ವಜನಿಕರು ದೂರಿದ್ದರೂ ಸಹ ಅಧಿಕಾರಿಗಳು ಎಚ್ಚೆತ್ತುಕೊಳ್ಳದ ಪರಿಣಾಮ ಶುಕ್ರವಾರವೂ ಸಹ ಬಸ್ ಕೆಟ್ಟು ನಿಂತು ಪ್ರಯಾಣಿಕರಿಗೆ ತೊಂದರೆಯಾಗಿದೆ.



ಹುಳಿಯಾರು ತಿಪಟೂರು ಮಾರ್ಗ ಸಂಖ್ಯೆ 1718 ವಾಹನ ಸಂಖ್ಯೆ ಕೆಎ 06 ಎಫ್ 933 ಬಸ್ ಹುಳಿಯಾರಿನಿಂದ 6 ಕಿ.ಮೀ.ದೂರದಲ್ಲಿರುವ ಲಕ್ಷ್ಮೀಪುರದ ಬಳಿ ಶುಕ್ರವಾರ ಬೆಳಗ್ಗೆ ಪ್ರಥಮ ಸುತ್ತಿನವಳಿಯಲ್ಲೇ ಕೆಟ್ಟು ನಿಂತಿದೆ. ಇದರಿಂದ ಪರೀಕ್ಷೆಗೆ ಹೋಗಬೇಕಾದ ವಿದ್ಯಾರ್ಥಿಗಳಿಗೆ ಹಾಗೂ ಆಸ್ಪತ್ರೆಗೆ ತೆರಳಬೇಕಿದ್ದ ರೋಗಿಗಳಿಗೆ ಹಾಗೂ ಬ್ಯಾಂಕ್‌ಗೆ ಹೋಗಬೇಕಿದ್ದ ಗ್ರಾಹಕರಿಗೆ ಭಾರಿ ತೊಂದರೆಯಾಗಿದ್ದು ಮತ್ತೊಂದು ಬಸ್ ಬರುವವರೆವಿಗೂ ಗಂಟೆಗಟ್ಟಲೆ ಕಾದುಕಾದು ಪ್ರಯಾಣಿಸಬೇಕಾಗಿ ಬಂದಿತ್ತು. ತಿಪಟೂರು ಘಟಕದಲ್ಲಿ ವಾಹನಗಳ ಸರಿಯಾದ ಮೇನ್ಟೆನೆಸ್ ಮಾಡದಿರುವುದು ಮುಖ್ಯವಾಗಿ ಪಾರುಪತ್ತೆದಾರರು ಇಲ್ಲದಿರುವುದು, ಸರಿಯಾದ ರೀತಿಯ ಬಿಡಿ ಭಾಗಗಳ ಸರಬರಾಜು ಇಲ್ಲದಿರುವುದು, ಇರುವ ಇಬ್ಬರು ಮ್ಯಕಾನಿಕ್‌ಗಳು ಪ್ರತಿದಿನ ಬೆಳಗಿನ ಪಾಳಯದಲ್ಲಿ ಕೆಲಸ ನಿರ್ವಹಿಸಿ ರಾತ್ರಿ ಪಾಳಯದಲ್ಲಿ ಯಾರೊಬ್ಬರೂ ಇಲ್ಲದಿರುವುದರಿಂದ ರಾತ್ರಿ ಕೆಲಸ ನಿರ್ವಹಿಸಿ ಬಂದ ಚಾಲಕರುಗಳು ವಾಹನದ ತೊಂದರೆಯ ಬಗ್ಗೆ ತಿಳಿಸಲು ಸಾಧ್ಯವಾಗದಿರುವುದು ಈ ತೊಂದರೆಗೆ ಕಾರಣವಾಗಿದೆ ಎಂದು ಲಿಖಿತವಾಗಿ ದೂರು ನೀಡಿದ್ದರೂ ಸಹ ಕ್ರಮ ಕೈಗೊಳ್ಳದಿದ್ದರಿಂದ ಪದೇಪದೇ ಬಸ್‌ಗಳು ಈ ಮಾರ್ಗದಲ್ಲಿ ಕೆಟ್ಟು ನಿಲ್ಲುವಂತಾಗಿದೆ. ಇದು ಪರೀಕ್ಷಾ ಸಮಯವಾಗಿರುವುದರಿಂದ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಈ ರೀತಿ ವಾಹನಗಳು ಕೆಟ್ಟ ನಿಂತರೆ, ಅವರು ಸರಿಯಾದ ಸಮಯಕ್ಕೆ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗುತ್ತಿರುವುದಿಲ್ಲ. ಕೆಲವು ಬಸ್‌ಗಳು ಕೆಟ್ಟು ರಸ್ತೆ ಮಧ್ಯದಲ್ಲಿ ನಿಲ್ಲುವುದರಿಂದ ಉಳಿದ ಬಸ್‌ಗಳ ಮೇಲೆ ಪ್ರಯಾಣಿಕರ ಒತ್ತಡ ಹೆಚ್ಚಿನದಾಗಿದ್ದು ಅವು ತುಂಬಿ ತುಳುಕುತ್ತವೆ ಇದರಿಂದ ವಯಸ್ಸಾದ ಪ್ರಯಾಣಿಕರು, ಸ್ತ್ರೀಯರು, ರೋಗಿಗಳು ಸಂಚರಿಸುವುದು ತುಂಬಾ ಕಷ್ಟ ಸಾಧ್ಯವಾಗಿರುತ್ತದೆ. ಮೇಲಧಿಕಾರಿಗಳು ಇನ್ನಾದರೂ ಇತ್ತ ಗಮನಹರಿಸಿ ಸೂಕ್ತ ರೀತಿಯಲ್ಲಿ ಬದಲಿ ವ್ಯವಸ್ಥೆಯನ್ನು ಮಾಡಿ ಕಾರ್ಮಿಕರಿಗೂ ಹಾಗೂ ಪ್ರಯಾಣಿಕರಿಗೂ ಅನುಕೂಲ ಮಾಡಿಕೊಡಬೇಕೆಂದು ಸಾರ್ವಜನಿಕರು ಮನವಿ ಮಾಡಿದ್ದಾರೆ.

# ಜಗಜೀವನರಾಂ ಅವರ ತತ್ವಾದರ್ಶ ಪಾಲಿಸಿ

**ವಿಜಯಪುರ:** ಜಗಜೀವನರಾಂ ಅವರು ದೇಶ ಕಂಡ ಮಹಾನ್ ಸ್ವಾತಂತ್ರ್ಯ ಹೋರಾಟಗಾರ ಹಾಗೂ ದಕ್ಷ ಆಡಳಿತಗಾರರಾಗಿದ್ದು,ಅವರಂತಹ ಮಹಾನ್ ನಾಯಕರ ಕೊಡುಗೆ, ತತ್ವಾದರ್ಶಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪುರಸಭಾ ಮುಖ್ಯಾಧಿಕಾರಿ ಸಂತೋಷ ಕುಮಾರ್ ತಿಳಿಸಿದರು. ಇವರು ಪಟ್ಟಣದ ಪುರಸಭಾ ಆವರಣದಲ್ಲಿ ಪುರಸಭಾವತಿಯಿಂದ ಆಯೋಜಿಸಿದ್ದ ಮಾಜಿ ಉಪ ಪ್ರಧಾನಿ ದಿ.ಬಾಬು ಜಗಜೀವನರಾಂ ಅವರ 117ನೇ ಜಯಂತಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ದಿ.ಬಾಬು ಜಗಜೀವನರಾಂ ಅವರು ಸಮಾಜ ಸುಧಾರಣೆ ಹಾಗೂ ಎಲ್ಲರೂ ಸಮಾನವಾಗಿ ಜೀವನ ನಡೆಸಬೇಕು ಎನ್ನುವ ಮಹತ್ವಾಕಾಂಕ್ಷೆಯನ್ನು ಅವರು ಹೊಂದಿದ್ದರು. ಕಾರ್ಮಿಕರ ಏಳಿಗೆಯನ್ನು ಸದಾ ಬಯಸುತ್ತಿದ್ದರು. ದೇಶದ ಜನರು ಅಹಾರ ಕೊರತೆ ಅನುಭವಿಸುತ್ತಿರುವುದನ್ನು ಕಂಡು ಹಸಿರು ಕ್ರಾಂತಿ ಪ್ರಾರಂಭಿಸಿದರು. ಎಂದು ತಿಳಿಸಿದರು. ಪುರಸಭಾ ಅಧಿಕಾರಿ ಲಿಂಗಣ್ಣ, ಪುರಸಭಾ ಸಿಬ್ಬಂದಿಗಳಾದ ಶಿವನಾಗೇಗೌಡ, ಹೇಮವತಿ, ಅಪ್ಪಿ, ವಿನೋಧ. ಹಾಗೂ ಪುರಸಭಾ ಪೌರಕಾರ್ಮಿಕರು ಹಾಜರಿದ್ದರು.



# ಚಾ.ನಗರದಲ್ಲಿ 25 ಮಂದಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆ

**ಚಾಮರಾಜನಗರ:** ಮೊದಲ ಹಂತದ ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಗುರುವಾರ ಮುಕ್ತಾಯಗೊಂಡಿದ್ದು, ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 25 ಮಂದಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಉಮೇದುವಾರಿಕೆ ಸಲ್ಲಿಸಲು ಕೊನೆಯ ದಿನವಾದ ಗುರುವಾರ ಬಿಎಸ್‌ಪಿ ಅಭ್ಯರ್ಥಿ ಸೇರಿದಂತೆ ಒಂಬತ್ತು ಮಂದಿ ನಾಮಪತ್ರ ಸಲ್ಲಿಸಿದರು.

ಕೊನೆ ಕ್ಷಣದಲ್ಲಿ ಬದಲು: ಬಹುಜನ ಸಮಾಜ ಪಕ್ಷವು (ಬಿಎಸ್‌ಪಿ) ತನ್ನ ಅಭ್ಯರ್ಥಿಯನ್ನು ಕೊನೆ ಕ್ಷಣದಲ್ಲಿ ಬದಲಾಯಿಸಿದೆ. ಬಿಎಸ್‌ಪಿ ರಾಜ್ಯ ಸಂಯೋಜಕರಾದ ಎಂ.ಕೃಷ್ಣಮೂರ್ತಿ ಅವರನ್ನು ಕಣಕ್ಕಿಳಿಸಿದೆ.

ಪಕ್ಷವು ಈ ಮೊದಲು ನಿವೃತ್ತ ತಹಶೀಲ್ದಾರ್ ಸಿ.ಮಹದೇವಯ್ಯ ಅವರನ್ನು ಅಭ್ಯರ್ಥಿ ಎಂದು ಘೋಷಿಸಿತ್ತು. ಅವರು ಕೂಡ ಕ್ಷೇತ್ರದಾದ್ಯಂತ ಓಡಾಡಿ ಪ್ರಚಾರ ನಡೆಸಿದ್ದರು. ಆದರೆ, ಅವರ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣ ನ್ಯಾಯಾಲಯದಲ್ಲಿ ಇನ್ನೂ ಇತ್ಯರ್ಥವಾಗದೇ ಇದ್ದುದರಿಂದ, ಕೊನೆ ಗಳಿಗೆಯಲ್ಲಿ ವರಿಷ್ಠರ ಸೂಚನೆಯಂತೆ ಅಭ್ಯರ್ಥಿಯನ್ನು ಬದಲಾಯಿಸಲಾಗಿದೆ ಎಂದು ಪಕ್ಷದ ಮುಖಂಡರು ತಿಳಿಸಿದ್ದಾರೆ.

'ಬುಧವಾರದವರೆಗೂ ಮಹದೇವಯ್ಯ ಅವರೇ ಅಭ್ಯರ್ಥಿಯಾಗಿದ್ದರು. ಅವರ ಮೇಲಿದ್ದ ಕ್ರಿಮಿನಲ್ ಪ್ರಕರಣ ನ್ಯಾಯಾಲಯದಲ್ಲಿ ಬಾಕಿ ಇತ್ತು. ಅದು ಈ ವಾರದ ಆರಂಭದಲ್ಲಿ ಇತ್ಯರ್ಥಗೊಳ್ಳಲಿದೆ ಎಂದು ಹೇಳಿದ್ದರು. ಆದರೆ, ನ್ಯಾಯಾಲಯದಲ್ಲಿ ವಿಲೇವಾರಿಯಾಗಿಲ್ಲ. ಬುಧವಾರ ಸಂಜೆ ಇದನ್ನು ಅವರು ಗಮನಕ್ಕೆ ತಂದರು. ಅಪರಾಧ ಪ್ರಕರಣ ಎದುರಿಸುತ್ತಿರುವವರಿಗೆ ಟಿಕೆಟ್ ಕೊಡಬಾರದು ಎಂಬ ನಿರ್ಧಾರವನ್ನು ಪಕ್ಷದ ಕೇಂದ್ರ ಸಮಿತಿ ಕೈಗೊಂಡಿರುವುದರಿಂದ ಅಭ್ಯರ್ಥಿಯನ್ನು ಬದಲಾಯಿಸಲಾಗಿದೆ' ಎಂದು ಬಿಎಸ್‌ಪಿ ಜಿಲ್ಲಾ ಅಧ್ಯಕ್ಷ ಎನ್.ನಾಗಯ್ಯ 'ಪ್ರಜಾವಾಣಿ'ಗೆ ತಿಳಿಸಿದರು.

ಮುಖಂಡರು, ಕಾರ್ಯಕರ್ತರ ಮೆರವಣಿಗೆ: ನಾಮಪತ್ರ ಸಲ್ಲಿಸುವುದಕ್ಕೂ ಮುನ್ನ ಎಂ.ಕೃಷ್ಣಮೂರ್ತಿ ಅವರು ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಹ.ರಾ.ಮಹೇಶ್, ಪಕ್ಷದ ಜಿಲ್ಲಾಧ್ಯಕ್ಷ ಎನ್.ನಾಗಯ್ಯ, ಉಪಾಧ್ಯಕ್ಷ ಬ್ಯಾಡಮೂಡ್ಲು ಸಿ.ಮಹದೇವಯ್ಯ ಹಾಗೂ ಇತರ ಮುಖಂಡರು, ಕಾರ್ಯಕರ್ತರೊಂದಿಗೆ ಚಾಮರಾಜೇಶ್ವರ ಉದ್ಯಾನದಿಂದ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನದ ಮುಖ್ಯಗೇಟ್ ವರೆಗೂ ಮೆರವಣಿಗೆ ನಡೆಸಿದರು. ನಾಮಪತ್ರ ಸಲ್ಲಿಸುವ ವೇಳೆ ಪಕ್ಷದ ರಾಜ್ಯ ಅಧ್ಯಕ್ಷ ಮಾರಸಂದ್ರ ಮುನಿಯಪ್ಪ ಅವರು ಜೊತೆಯಾದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಮುನಿಯಪ್ಪ ಅವರು, 'ಪಕ್ಷದಿಂದ ಎಂ.ಕೃಷ್ಣಮೂರ್ತಿ ಕಣಕ್ಕೆ ಇಳಿದಿದ್ದಾರೆ. ಕಾಂಗ್ರೆಸ್, ಬಿಜೆಪಿಯಲ್ಲಿ ಬಿ.ಫಾರಂಗೆ ?10, ?20 ಕೋಟಿ ಕೊಡಬೇಕಿದೆ. ಮತದಾರರಿಗೆ ?1000 , ?2000 ನೀಡುತ್ತಿದ್ದಾರೆ. ಟಿವಿ, ಬಂಗಾರ ನೀಡುತ್ತಾರೆ. ಆ ಸಂಸ್ಕೃತಿ ಬಿಎಸ್‌ಪಿಯಲ್ಲಿ ಇಲ್ಲ. ಒಂದು ನೋಟು, ಒಂದು ವೋಟು ಸಿದ್ಧಾಂತದಲ್ಲಿ ಚುನಾವಣೆ ಎದುರಿಸುತ್ತೇವೆ' ಎಂದರು.

ಆಕಸ್ಮಿಕ ಸ್ಪರ್ಧೆ: ಅಭ್ಯರ್ಥಿ ಎಂ.ಕೃಷ್ಣಮೂರ್ತಿ ಮಾತನಾಡಿ, 'ಆಕಸ್ಮಿಕ, ಅನಿವಾರ್ಯವಾಗಿ ಸ್ಪರ್ಧೆ ಮಾಡಬೇಕಾಯಿತು. ನನಗಿಂತ ಮೊದಲು ಸಿ.ಮಹದೇವಯ್ಯ ಅವರನ್ನು ಅಭ್ಯರ್ಥಿಯಾಗಿ ಘೋಷಣೆ ಮಾಡಲಾಗಿತ್ತು. ಕೆಲವು ತಾಂತ್ರಿಕ ಕಾರಣಗಳಿಂದ ಅವರು ಸ್ಪರ್ಧೆಯಿಂದ ಹಿಂದೆ ಸರಿಯುವಂತಾಗಿ ಎಲ್ಲ ಪಕ್ಷದ ಮುಖಂಡರು ಸ್ಪರ್ಧೆ ಮಾಡುವಂತೆ ಒತ್ತಡ ಹೇರಿದರು ಪದಾಧಿಕಾರಿಗಳ ಆಶಯದಂತೆ ನಾನು ಸ್ಪರ್ಧೆ ಮಾಡಿದ್ದೇನೆ. 2001 ರಿಂದ ಚಾಮರಾಜನಗರ ಜಿಲ್ಲೆಯಲ್ಲಿ ನಿರಂತರ ಸಂಪರ್ಕ ಹೊಂದಿದ್ದೇನೆ. ಬಹುಜನ ಚಳವಳಿಯನ್ನು ಬಹಳ ತಳಮಟ್ಟದಿಂದ ಕಟ್ಟಿದ್ದೇನೆ' ಎಂದರು.

ಗೆಲುವಿಗೆ ಶ್ರಮಿಸುವೆ: ಸ್ಪರ್ಧೆಯಿಂದ ಹಿಂದೆ ಸರಿದ ನಿವೃತ್ತ ತಹಶೀಲ್ದಾರ್ ಸಿ.ಮಹದೇವಯ್ಯ ಮಾತನಾಡಿ, 'ತಾಂತ್ರಿಕ ಕಾರಣದಿಂದ ಪಕ್ಷಕ್ಕೆ ಯಾವುದೇ ತೊಂದರೆಯಾಗಬಾರದೆಂದು ಸ್ಪರ್ಧೆಯಿಂದ ಹಿಂದೆ ಸರಿದಿದ್ದೇನೆ. ನನ್ನ ಬದಲಾಗಿ ಸ್ಪರ್ಧಿಸಿರುವ ಕೃಷ್ಣಮೂರ್ತಿ ಅವರಿಗೆ ಸಂಪೂರ್ಣ ಬೆಂಬಲ ನೀಡಿ ಅವರ ಗೆಲುವಿಗೆ ಶ್ರಮಿಸುತ್ತೇನೆ' ಎಂದರು.

ಕೊನೆಯ ದಿನ ಬಿಎಸ್‌ಪಿಯ ಕೃಷ್ಣಮೂರ್ತಿ ಸೇರಿದಂತೆ ಒಂಬತ್ತು ಮಂದಿ ನಾಮಪತ್ರ ಸಲ್ಲಿಸಿದರು. ಡಾ.ಅಂಬೇಡ್ಕರ್ ಪೀಪಲ್ಸ್ ಪಾರ್ಟಿಯಿಂದ ಸಿ.ಎಂ.ಕೃಷ್ಣ ಕರ್ನಾಟಕ ಪ್ರಜಾ ಪಾರ್ಟಿಯ (ರೈತ ಪರ್ವ) ಪ್ರಸನ್ನ ಕುಮಾರ್.ಬಿ ಸಮಾಜವಾದಿ ಜನತಾ ಪಾರ್ಟಿ (ಕರ್ನಾಟಕ)ಯಿಂದ ಚಾಮದಾಸಯ್ಯ ಪಕ್ಷೇತರ ಅಭ್ಯರ್ಥಿಗಳಾಗಿ ಸುಭಾಷ್ ಚಂದ್ರ. ಕೆ ನಟರಾಜು ನಿಂಗರಾಜು. ಜಿ.ಸಿ.ರಾಜು ನಿಂಗರಾಜು ಜೆ ಉಮೇದುವಾರಿಕೆ ಸಲ್ಲಿಸಿದ ಇತರರು. ಇದುವರೆಗೆ 25 ಅಭ್ಯರ್ಥಿಗಳಿಂದ 36 ನಾಮಪತ್ರಗಳು ಸಲ್ಲಿಕೆಯಾಗಿವೆ. ಉಳಿದ 16 ಅಭ್ಯರ್ಥಿಗಳು: ಈ ಮೊದಲು ನಿಂಗರಾಜು ಎಸ್. (ಕರ್ನಾಟಕ ಜನತಾ ಪಕ್ಷ) ಸುಮಾ ಎಸ್ (ಎಸ್‌ಯುಸಿಐ?ಸಿ) ಪ್ರದೀಪ್‌ಕುಮಾರ್ (ಪಕ್ಷೇತರ) ಮಹೇಶ ಎಂ (ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ) ಗುರುಲಿಂಗಯ್ಯ (ಪಕ್ಷೇತರ) ರಾಜು ಕೆ. (ಪಕ್ಷೇತರ) ಎಂ.ನಾಗೇಂದ್ರ ಬಾಬು (ಪಕ್ಷೇತರ) ಎನ್.ಅಂಬರೀಷ್ (ಪಕ್ಷೇತರ) ಮಹದೇವಸ್ವಾಮಿ ಬಿ.ಎಂ (ಪಕ್ಷೇತರ) ಸಿ.ಶಂಕರ (ಪಕ್ಷೇತರ) ಜಿ.ಡಿ.ರಾಜಗೋಪಾಲ (ಪಕ್ಷೇತರ) ಸುನೀಲ್ ಬೋಸ್ (ಕಾಂಗ್ರೆಸ್) ಎಸ್.ಬಾಲರಾಜು (ಬಿಜೆಪಿ) ಬಾಲಯ್ಯ (ಪಕ್ಷೇತರ) ಎಚ್. ಕೆ.ಸ್ವಾಮಿ (ಪಕ್ಷೇತರ) ಸಣ್ಣಸ್ವಾಮಿ (ಪಕ್ಷೇತರ) ಉಮೇದುವಾರಿಕೆ ಸಲ್ಲಿಸಿದ್ದರು. ಇಂದು ಪರಿಶೀಲನೆ: ನಾಮಪತ್ರಗಳ ಪರಿಶೀಲನಾ ಕಾರ್ಯ ಶುಕ್ರವಾರ (ಏಪ್ರಿಲ್ 5) ನಡೆಯಲಿದೆ.

## ಪ್ರಸನ್ನಕುಮಾರ್ ಕರ್ನಾಟಕ ಪ್ರಜಾಪಾರ್ಟಿಯ ಅಭ್ಯರ್ಥಿ

**ಕರ್ನಾಟಕ ಪ್ರಜಾಪಾರ್ಟಿ (ರೈತಪರ್ವ) ಪಕ್ಷದ ಅಭ್ಯರ್ಥಿಯಾಗಿ ವಕೀಲ ಬಿ.ಪ್ರಸನ್ನಕುಮಾರ್ ಉಮೇದುವಾರಿಕೆ ಸಲ್ಲಿಸಿದರು. ಕರ್ನಾಟಕ ಪ್ರಜಾಪಾರ್ಟಿ ರಾಜ್ಯಾಧ್ಯಕ್ಷ ವಿ.ಶಿವಣ್ಣ ಮೈಸೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್. ಮಂಜುನಾಥ್ ಕೊಳ್ಳೇಗಾಲ ತಾಲ್ಲೂಕು ಅಧ್ಯಕ್ಷ ಕುಣಗಳ್ಳಿರಂಗಸ್ವಾಮಿ ವಕೀಲ ದೇವರಾಜು ಇದ್ದರು. ನಾಮಪತ್ರ ಸಲ್ಲಿಸಿದ ಪಕ್ಷದ ರಾಜ್ಯಾಧ್ಯಕ್ಷ ವಿ.ಶಿವಣ್ಣ ಮಾತನಾಡಿ 'ದೇಶವನ್ನಾಳಿದ ಕಾಂಗ್ರೆಸ್ ಬಿಜೆಪಿ ದೇಶದ ಜನತೆಗೆ ಉತ್ತಮ ಆರೋಗ್ಯ ಶಿಕ್ಷಣ ಸೇವೆ ಕೊಡುವಲ್ಲಿ ಸಂಪೂರ್ಣ ವಿಫಲವಾಗಿವೆ. ಜೆಡಿಎಸ್ ಪಕ್ಷ ಬಿಜೆಪಿಯೊಂದಿಗೆ ಮೈತ್ರಿಮಾಡಿಕೊಂಡು ರಾಜ್ಯದ ಹಿತಾಸಕ್ತಿಯನ್ನು ಬಲಿಕೊಟ್ಟಿದೆ. ರಾಜ್ಯದ ಹಿತಕಾಯುವ ಕರ್ನಾಟಕ ಪ್ರಜಾಪಾರ್ಟಿಯಿಂದ ಮೈಸೂರು ಮಂಡ್ಯ ಚಾಮರಾಜನಗರ ಕ್ಷೇತ್ರಗಳಲ್ಲಿ ಮಾತ್ರ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗಿದೆ' ಎಂದರು.**



**ವಿಜಯಪುರ ಪಟ್ಟಣದ ಶ್ರೀ ಅನ್ನಪೂರ್ಣೇಶ್ವರಿ ಕನ್ವೆನ್ಷನ್ ಹಾಲ್‌ನಲ್ಲಿ ಬುಧವಾರದಂದು ಕೆಪಿಸಿಸಿ ಕಾರ್ಯದರ್ಶಿ ವಿ. ಮಂಜುನಾಥ್ ರವರ ಸಹೋದರ ಲಿಂಗೈಕ್ಯ ವಿ ಬಸವರಾಜ್ ಶಾಂತಾರವರ ಪುತ್ರಿ ಚಿ. ಸೌ. ವಿ. ಬಿ. ಐಶ್ವರ್ಯ ರಾಜ್ ಹಾಗೂ ಚಿ. ರಾ. ಎನ್. ನಿರಂಜನ್ ರವರ ವಿವಾಹ ಮಹೋತ್ಸವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ರವರು ಭಾಗವಹಿಸಿ ನೂತನ ವಧು ವರರಿಗೆ ಆಶೀರ್ವದಿಸಿದ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಮುಬಾರಕ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಿ ರಾಜಣ್ಣ, ಟೌನ್ ಕಾಂಗ್ರೆಸ್ ಅಧ್ಯಕ್ಷ ವಿಎಂ ನಾಗರಾಜು, ಕಾರ್ಯದರ್ಶಿ ಕೋಕೋ ಕೋಲಾ ಮಂಜುನಾಥ್, ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಮಚಂದ್ರಪ್ಪ, ವಿ. ವಿಶ್ವನಾಥ್ ಹಾಗೂ ಸಿ. ವಿಜಯರಾಜ್ ,ಮತ್ತಿತರರು ಉಪಸ್ಥಿತರಿದ್ದರು .**

# ನೀರು-ಮೇವಿಗೆ ಕೊರತೆಯಾಗದಂತೆ ಎಚ್ಚರಿಕೆ ವಹಿಸಲು ಸೂಚನೆ

**ಕೋಲಾರ:** ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಯಾವುದೇ ರೀತಿಯ ಕೊರತೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀರು ಪೋಲಾಗದಂತೆ ಲಭ್ಯವಿರುವ ನೀರಿನ ಸಮರ್ಪಕ ನಿರ್ವಹಣೆ ಸೇರಿದಂತೆ ಅವಶ್ಯಕತೆಯಿರುವ ಮತ್ತು ತೀವ್ರ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ ಗ್ರಾಮಗಳಲ್ಲಿ ಖಾಸಗಿ ಬೋರ್ ವೆಲ್ ಗುರುತಿಸಿ, ಮಾಲೀಕರೊಂದಿಗೆ ನಿಯಮಾವಳಿ ಅನ್ವಯ ಒಡಂಬಡಿಕೆ ಮಾಡಿಕೊಳ್ಳುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಕೆಗೆ ಸಂಬಂಧಪಟ್ಟಂತೆ ಟೆಂಡರ್ ಪ್ರಕ್ರಿಯೆಗಳ ಸಮಸ್ಯೆಯನ್ನು ತಕ್ಷಣ ಬಗೆಹರಿಸಿಕೊಳ್ಳಬೇಕು. ದುರಸ್ತಿ ಇರುವ ಪೈಪ್‌ಲೈನ್ ಗಳುನ್ನು ತಕ್ಷಣ ದುರಸ್ತಿಗೊಳಿಸಿ, ನೀರು ಪೋಲಾಗದಂತೆ ಎಚ್ಚರ ವಹಿಸಬೇಕು. ವಿವಿಧ ಜಲಾಶಯ ಹಾಗೂ ನದಿಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಪಂಪ್‌ಸೆಟ್ ಗಳ ಮೂಲಕ ನೀರು ಎತ್ತುವುದನ್ನು ತಡೆಯಬೇಕು. ಆಯಾ ತಹಸಿಲ್ದಾರರು, ವಿದ್ಯುತ್ ಇಲಾಖೆಯ ಅಧಿಕಾರಿಗಳು ತೀವ್ರ ನಿಗಾ ಇಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಜಿಲ್ಲೆಯ ಗ್ರಾಮಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೀರಿನ ಸಮರ್ಪಕ ನಿರ್ವಹಣೆಯಾಗಬೇಕು. ನೀರು ಪೋಲಾಗದಂತೆ ತಡೆಯಲು ನೀರು ಬಿಡುವ ಸಮಯವನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಕಸ ವಿಲೇವಾರಿ ವಾಹನಗಳ ಮೂಲಕ ಜಾಗೃತಿ ಮೂಡಿಸಬೇಕು. ಬರದ ಹಿನ್ನೆಲೆಯಲ್ಲಿ




ಹೊಸದಾಗಿ ಬೋರ್‌ವೆಲ್ ಕೊರೆದು ನೀರು ಪೂರೈಸಲು ಚುನಾವಣಾ ಸಂದರ್ಭದಲ್ಲಿ ಯಾವುದೇ ಅಭ್ಯಂತರ ಇರುವುದಿಲ್ಲ. ಮುಂಬರುವ ಎರಡು ತಿಂಗಳ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ನೀರಿನ ಸಮಸ್ಯೆಯಾಗುವ ಸಾಧ್ಯತೆ ಇರುವುದರಿಂದ, ಈಗಿನಿಂದಲೇ ಖಾಸಗಿ ಬೋರ್‌ವೆಲ್ ಗುರುತಿಸುವ ಕಾರ್ಯ ಮಾಡಬೇಕು. ಬೋರ್ ವೆಲ್ ಗುರುತಿಸಿದ ತಕ್ಷಣ ಮಾಲೀಕರೊಂದಿಗೆ ಒಡಂಬಡಿಕೆ ಮಾಡಿಕೊಳ್ಳಬೇಕು. ತಹಸಿಲ್ದಾರರು, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಸರಿಪಡಿಸಿಕೊಂಡು ಸಕಾಲಕ್ಕೆ ಹಣ ಸಂದಾಯವಾಗುವಂತೆ ನೋಡಿಕೊಳ್ಳಬೇಕು. ಎಲ್ಲಾ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ ಮುಂದಿನ ಎರಡು ತಿಂಗಳ ಅವಧಿಯಲ್ಲಿ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಸೂಚಿಸಿದರು.

ಜಿಲ್ಲೆಯಲ್ಲಿ ಸದ್ಯ ಎಂಟು ಗ್ರಾಮಗಳು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದು , ಈ ಗ್ರಾಮಗಳಿಗೆ ಬಾಡಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ. ಗ್ರಾಮ ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಸೂಚಿಸಿದರು. ಕೋಲಾರ ನಗರದಲ್ಲಿ ಒಟ್ಟಾರೆ 52 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಅವುಗಳಲ್ಲಿ 42 ಕಾರ್ಯ ನಿರ್ವಹಿಸುತ್ತಿವೆ ಎಂದರು. ಈ 42 ಘಟಕದ ನೀರಿನ ಗುಣಮಟ್ಟವನ್ನು ಪರಿಶೀಲಿಸಿ ಇನ್ನು ಮೂರು ದಿನದಲ್ಲಿ ವರದಿ ನೀಡಲು ಸಂಬಂಧಪಟ್ಟ ಅಧಿಕಾರಿಗೆ ಸೂಚಿಸಿದರು.

ಚುನಾವಣೆ ಕಾಲವೂ ಅಹುದು ಹಾಗೂ ಬರಗಾಲವಾಗಿರುವುದರಿಂದ ಪ್ರತಿಯೊಂದು ತಾಲೂಕಿನ ಗ್ರಾಮ ಪಂಚಾಯತಿಗಳಲ್ಲಿ ನೀರು ಮತ್ತು ಜಾನುವಾರು ಮೇವಿಗೆ ತೊಂದರೆಯಾಗದಂತೆ ಕಟ್ಟುನಿಟ್ಟಿನ ಕ್ರಮ ವಹಿಸಬೇಕೆಂದರು. ಸೂಕ್ತ ಕ್ರಮವಹಿಸದ ಅಧಿಕಾರಿಗಳಿಗೆ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುವುದು ಎಂದರು. ಅಧಿಕ ಉ?ಷ್ಣಾಂಶದ ಹಿನ್ನೆಲೆಯ ಮುಂಜಾಗ್ರತೆಗೆ ಸೂಚನೆ: ಜಿಲ್ಲೆಯಲ್ಲಿ ಅಧಿಕ ಉ?ಷ್ಣಾಂಶದ ಹಿನ್ನೆಲೆಯಲ್ಲಿ ಸಾರ್ವಜನಿಕರು ಅವಶ್ಯಕ ಮುಂಜಾಗ್ರತೆ ಕ್ರಮ ವಹಿಸಲು ಜಿಲ್ಲಾಧಿಕಾರಿಗಳು ಸಲಹೆ ನೀಡಿದ್ದು, ಮುಂದಿನ ಎರಡು ತಿಂಗಳು ಇನ್ನೂ ಹೆಚ್ಚು ಉ?ಷ್ಣಾಂಶ ಹೆಚ್ಚಲಿದೆ. ಕಾರಣ ಬಿಸಿಲಿನಲ್ಲಿ ಓಡಾಡುವದನ್ನು ಕಡಿಮೆಮಾಡಬೇಕು. ಎಳನೀರು, ಜೂಸ್ ಲಿಕ್ವಿಡ್ ಮಾದರಿಯ ಪಾನೀಯಗಳನ್ನು ಸೇವಿಸಬೇಕು. ಆರೋಗ್ಯಕ್ಕೆ ವಿಶೇಷ ಗಮನ ನೀಡಬೇಕು. ಆರೋಗ್ಯ ದಲ್ಲಿ ಏರುಪೇರಾದಲ್ಲಿ ತಕ್ಷಣ ಆರೋಗ್ಯ ಕೇಂದ್ರ, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಅವರು ತಿಳಿಸಿದ್ದಾರೆ. ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮಬಸವಂತಪ್ಪ, ಅಪರ ಜಿಲ್ಲಾಧಿಕಾರಿ ಶಂಕರ ವಣಿಕ್ಯಾಳ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮುಂದಿನ ಪೀಳಿಗೆಗೆ ಕೊಡುಗೆ ನೀಡೋಣ

ಚನ್ನಪಟ್ಟಣ: ಗಾಳಿ, ನೀರು, ಅನ್ನ ಕೊಡುವ ರಾಜ್ಯಕ್ಕೆ ನಮ್ಮಿಂದ ಮುಂದಿನ ಪೀಳಿಗೆಗೆ ಏನಾದರೂಕೊಡುಗೆನೀಡಲುಮುಂದಾಗೋಣ ಎಂದು ಕಕಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್ ಗೌಡ ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಶುಕ್ರವಾರ ನಡೆದ 184 ನೇ ದಿನದ ಹೋರಾಟದಲ್ಲಿ ಅವರು ಹರಿದು ಹಂಚಿ ಹೋಗಿದ್ದ ರಾಜ್ಯವನ್ನು ಒಗ್ಗೂಡಿಸದಿದ್ದರೆ ನಮ್ಮ ನಾಡಿನಲ್ಲಿ ಸಾಂಸ್ಕೃತಿಕ ಅಸ್ಮಿತೆ ಇರುತ್ತಿರಲಿಲ್ಲ. ಮೈಸೂರು ಒಡೆಯರು ಒಡವೆಗಳನ್ನು ಒತ್ತೆ ಇಟ್ಟು ಕೆಆರ್‌ಎಸ್ ಜಲಾಶಯ ಕಟ್ಟದಿದ್ದರೆ ಹಳೆ ಮೈಸೂರು ಭಾಗದಲ್ಲಿ ಕುಡಿಯುವ ನೀರಿಗೂ ತಾತ್ವರ ಆಗುತ್ತಿತ್ತು. ಕೃಷಿ ಸೇರಿದಂತೆ ಪ್ರಾಣಿ ಪಕ್ಷಿಗಳಿಗೆ ನೀರಿನ ಹಾಹಾಕಾರ ಉಂಟಾಗುತ್ತಿತ್ತು. ಸಾಲು ಮರದ ತಿಮ್ಮಕ್ಕ ಸೇರಿದಂತೆ ರಾಮಕೃಷ್ಣಹೆಗ್ಗಡೆಅವರು, ಬಾಲಗಂಗಾಧರ ನಾಥ ಸ್ವಾಮಿಗಳು ಲಕ್ಷಾಂತರ ಗಿಡ ನೆಡಿಸದಿದ್ದರೆ ನಾವು ಶುದ್ಧ ಗಾಳಿಯಿಂದ ವಂಚಿತವಾಗುತ್ತಿದ್ದೆವು, ನಿಟ್ಟಿನಲ್ಲಿ ನಾವು ಸಹ ನಮ್ಮ ಮುಂದಿನ ಪೀಳಿಗೆಗೆ ಏನಾದರೂ ಕೊಡುಗೆ ನೀಡಬೇಕು ಎನ್ನುವ ಜವಾಬ್ದಾರಿಯಿಂದ ಮೇಕೆದಾಟು ಯೋಜನೆ ಅನುಷ್ಠಾನ ಆದರೆ ಬರದ ಸಂದರ್ಭದಲ್ಲಿ ನೀರನ್ನು ಉಳಿಕೆ ಮಾಡಿಕೊಳ್ಳಬಹುದು, ಜೊತೆಗೆ ತಮಿಳುನಾಡಿಗೂ ಬಿಡಬಹುದು, ಈ ನಿಟ್ಟಿನಲಿ ನಮ್ಮ ಹೋರಾಟ ನಿರಂತರವಾಗಿರಲಿದೆ. ಜೊತೆಗೆ ಪ್ರಾಣಿ ಪಕ್ಷಿಗಳಿಗಳ ನೀರಣಿಕೆ ತೀರಿಸಲು ಮನೆಗಳ ಮೇಲೆ ಮಣ್ಣಿನ ಬಟ್ಟಲು ಅಥವಾ ಮಿನಿ ಟ್ಯಾಂಕ್‌ಗಳಲ್ಲಿ ನೀರನ್ನು ಇಡುವ ಆಂದೋಲನ ನಡೆಯುತ್ತಿದೆ ಎಂದರು.

ರಾಜ್ಯದಿಂದ ಕೇರಳಕ್ಕೆ ನೀರು ಕೊಡುವ ಅಗತ್ಯ ಇಲ್ಲ. ಬೆಂಗಳೂರಿನ ಕೊಳಚೆ ನೀರಿನ ಮೇಲೆ ಹಕ್ಕು ಸಾಧಿಸುವ ಸುಪ್ರಿಂ ಕೋರ್ಟ್ ಮತ್ತು ಪ್ರಾಧಿಕಾರದ ಅವೈಜ್ಞಾನಿಕ ನೀತಿಗಳನ್ನು ಸರಿ ಮಾಡಬೇಕು, ಈ ನಿಟ್ಟಿನಲ್ಲಿ ಸರ್ಕಾರವು ಎಚ್ಚೆತ್ತು, ಈ ಬಗ್ಗೆ ಅಧಿಕಾರಿಗಳು ಹಾಗೂ ವಕೀಲರ ತಂಡವನ್ನು ನಿಯೋಜನೆ ಮಾಡಬೇಕು. ಬೆಂಗಳೂರಿನಲ್ಲಿ ಪರರಾಜ್ಯದವರಿಗೆ ಹಾಗೂ ಉಳ್ಳವರು ಜಿಎಸ್‌ಟಿ ತೆರಿಗೆ ಕಟ್ಟುತ್ತಾರೆ ಎಂದು ಸಬೂಬು ನೀಡಿ ಬೆಂಗಳೂರಿಗೆ ನೀರು ಕೊಡುತ್ತಿರುವ ಸರ್ಕಾರ ಮಂಡ್ಯ ಜನತೆಗೆ ಕುಡಿಯಲು ನೀರನ್ನು ಕೊಡುತ್ತಿಲ್ಲ. ಈ ಎಲ್ಲವನ್ನು ಸರಿ ಮಾಡಬೇಕು ಎಂದರೆ ಹೋರಾಟಗಳು ಹೆಚ್ಚಾಗಬೇಕು ಎಂದರು

ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು(ಎನ್‌ಜಿ), ಮಾತನಾಡಿ, ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಅಣೆಕಟ್ಟೆ ಕಟ್ಟುವುದು ಬಹು ವರ್ಷಗಳ ಬೇಡಿಕೆಯಾಗಿದೆ. ನಿನ್ನೆ ಕುಮಾರಸ್ವಾಮಿಅವರು ಎನ್‌ಡಿಎ ಮೈತ್ರಿಯ 28 ಸಂಸದರನ್ನು ಗೆಲ್ಲಿಸಿದರೆ ಮೇಕೆದಾಟು ಅಣೆಕಟ್ಟೆ ಕಟ್ಟಲು ಕೇಂದ್ರದಲ್ಲಿ ಹೋರಾಟ ಮಾಡುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ. ಆದರೆ ಕುಮಾರಸ್ವಾಮಿಅವರು ಇಷ್ಟು ವರ್ಷಗಳಿಂದ ಮೇಕೆದಾಟು ಯೋಜನೆ ಬಗ್ಗೆ ಏಕೆ ಪ್ರಶ್ನೆ ಮಾಡಲು ಮುಂದಾಗಲಿಲ್ಲ ಎಂಬುದು ಪ್ರಶ್ನೆಯಾದರೂ ಈಗ ಮೇಕೆದಾಟು ಯೋಜನೆ ಮಾಡುವುದಾಗಿ ಮುಂದೆ ಬಂದಿರುವ ರಾಜಕಾರಣಿಗಳ ನಡೆ ಸ್ವಾಗತಾರ್ಹವಾಗಿದೆ ಎಂದರು. ಸಾಕ್ಷರ ಕೋಗಿಲೆ ಚೌ.ಪು.ಸ್ವಾಮಿ, ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೇಶ್, ನಿವೃತ್ತ ಶಿಕ್ಷಕ ಪುಟ್ಟಪ್ಪಾಜಿ, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ರಾಜು, ಶಿವಣ್ಣ, ಪವನ್, ಶಂಕರ್ ಆರ್. ಸೇರಿದಂತೆ ಇತರರು ಇದ್ದರು.



# ಬಾಬೂಜೀ ಕೊಡುಗೆ ಅಪಾರ

## ಮೈಸೂರಿನ ಪ್ರಗತಿಪರ ಚಿಂತಕ ದಾಸನೂರು ಕೂಸಣ್ಣ ಬಣ್ಣನೆ

**ಚಾಮರಾಜನಗರ:** ದೇಶದ ಆಹಾರ ಕ್ಷೇತ್ರದ ಸ್ವಾವಲಂಬನೆಗೆ ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್‌ರಾಮ್ ಅವರ ಕೊಡುಗೆ ಅಪಾರವಾಗಿದೆ ಎಂದು ಮೈಸೂರಿನ ಪ್ರಗತಿಪರ ಚಿಂತಕರಾದ ದಾಸನೂರು ಕೂಸಣ್ಣ ಅವರು ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಭಾರತದ ಮಾಜಿ ಉಪಪ್ರಧಾನಿ, ರಾಷ್ಟ್ರನಾಯಕ ಡಾ. ಬಾಬು ಜಗಜೀವನ್‌ರಾಮ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯಭಾಷಣ ಮಾಡಿ ಮಾತನಾಡಿದರು.

ರಾಜಕೀಯ ಮುತ್ಸದ್ದಿಯಾಗಿದ್ದ ಬಾಬೂಜೀ ಅವರು ದೇಶವು ಆಹಾರ ಸಮಸ್ಯೆ ಎದುರಿಸಿದ ಸಮಯದಲ್ಲಿ ಸಮಗ್ರ ಆಹಾರನೀತಿಯನ್ನು ಜಾರಿಗೊಳಿಸಿ ಭಾರತವು ಆಹಾರ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾದಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ದೇಶದ ದಲಿತ ಚರಿತ್ರೆಯಲ್ಲಿ ಅಸಮಾನತೆ, ಹಸಿವು, ಅಪಮಾನ, ದೌರ್ಜನ್ಯಕ್ಕೊಳಗಾದವರನ್ನು ಸಂಕಷ್ಟದಿಂದ ಮೇಲೆತ್ತಿ ಸಮಾನತೆಯ ಬೆಳಕು ಚೆಲ್ಲಿದವರಲ್ಲಿ ಬಾಬೂಜೀ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅಗ್ರಗಣ್ಯರು. ವ್ಯಕ್ತಿತ್ವ, ನಡೆ-ನುಡಿ ಬದ್ಧತೆ, ಕ್ರಿಯಾಶೀಲತೆಯಲ್ಲಿ ಇಂದಿನ ರಾಜಕಾರಣಿಗಳಿಗೆ ಬಾಬೂಜೀಯವರು ಮಾದರಿಯಾಗಿದ್ದಾರೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಕಾರ್ಮಿಕ ಕಾಯ್ದೆಗೆ ಬದ್ರಬುನಾದಿ ಹಾಕಿದರು. ಅದರ ಅನುಷ್ಠಾನದಲ್ಲಿ ಬಾಬೂಜೀಯವರ ಕಾಣಿಕೆ ಅಪಾರವಾಗಿದೆ. ಕಾರ್ಮಿಕರ ರಕ್ಷಣೆ, ಸಬಲೀಕರಣಕ್ಕೆ ನಾಂದಿ ಹಾಡಿ, ಕಾರ್ಮಿಕರು ದೇಶದಲ್ಲಿ ಸುಭದ್ರ ಜೀವನ ನಡೆಸಲು ಈ ಇಬ್ಬರು ಮಹನೀಯರು ಕಾರಣೀಭೂತರಾಗಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಅಂಚೆ ಕಚೇರಿ ಸ್ಥಾಪನೆ ಮೂಲಕ ಪ್ರತಿ ಹಳ್ಳಿಹಳ್ಳಿಗಳಲ್ಲಿಯೂ ಜನರ ಹೂಡಿಕೆಯನ್ನು ಪ್ರೋತ್ಸಾಹಿಸಿ ಜನಸಾಮಾನ್ಯರು ಆರ್ಥಿಕ ಸದೃಢತೆ ಹೊಂದಲು ನೆರವಾದರು ಎಂದು ದಾಸನೂರು ಕೂಸಣ್ಣ ಅವರು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ



ಕಿರಣ್ ಪಡ್ನೇಕರ್ ಅವರು ಮಾತನಾಡಿ ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರು ದೇಶದಲ್ಲಿ ಉತ್ತಮ ಆಹಾರನೀತಿಯನ್ನು ಅನುಷ್ಠಾನಗೊಳಿಸಿ ರೈತರ ಬೆನ್ನುಲುಬು ಆಗಿದ್ದರು. ಶೋಷಿತರ ಪರವಾಗಿ ವಿದ್ಯಾರ್ಥಿದೆಸೆಯಲ್ಲಿಯೇ ಹೋರಾಡಿದ ಬಾಬೂಜೀಯವರು ಹಲವಾರು ಮಹೋನ್ನತ ಸ್ಥಾನಗಳನ್ನು ಅಲಂಕರಿಸಿ ದೇಶದ ರಾಜಕೀಯ ಕ್ಷೇತ್ರಕ್ಕೆ ಮೆರುಗು ತಂದಿದ್ದಾರೆ ಎಂದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕರಾದ ಆರ್.ಎಸ್. ಸುರೇಶ್ ಅವರು ಮಾತನಾಡಿ ಸಮಾಜ ಸುಧಾರಕರು ಹಾಗೂ ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಡಾ. ಬಾಬು ಜಗಜೀವನರಾಮ್ ಅವರ ಚಿಂತನೆಗಳು, ರಾಜಕೀಯ ಮಜಲುಗಳು ದೇಶದ ಜನರಿಗೆ ಅರ್ಥವಾಗಬೇಕಿದೆ. ಅವರ ರಾಜಕೀಯ ಸಾಧನೆ ಅವಿಸ್ಮರಣೀಯವಾಗಿದೆ. ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಬದುಕು-ಬರಹ ವಿವಿಧ ಸಂಪುಟಗಳಾಗಿ ಮುದ್ರಿತವಾಗಿರುವ ಮಾದರಿಯಲ್ಲಿ ಬಾಬೂಜೀಯವರ ಬದುಕು-ಬರಹ, ಸಾಧನೆಗಳನ್ನು ಸಂಪುಟಗಳಾಗಿ ಮುದ್ರಿಸುವಲ್ಲಿ ಗಮನಹರಿಸಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಬೀಬ್ ಅವರು ಮಾತನಾಡಿ ದೇಶದಲ್ಲಿ ಮಹನೀಯರ ಜಯಂತಿಗಳನ್ನು ಆಚರಿಸುವ ಉದ್ದೇಶ ಅವರ ವಿಚಾರಧಾರೆಗಳ ಬಗ್ಗೆ ಜನತೆಗೆ ಅರಿವು ಮೂಡಿಸುವುದೇ ಆಗಿದೆ. ಅವರ ಜೀವನ ಮೌಲ್ಯಗತಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಚಿಕ್ಕಬಸವಯ್ಯ, ನಗರಸಭೆ ಪೌರಾಯುಕ್ತ ಎಸ್.ವಿ. ರಾಮದಾಸ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪನಿರ್ದೇಶಕರಾದ ಪದ್ಮಜಾ, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾದ ಮಂಜುಳ, ಜನಪದ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಶ್ರೀ ಚಾಮರಾಜೇಶ್ವರ ದೇವಾಲಯದಿಂದ ಹೊರಟ ಮೆರವಣಿಗೆಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಚಾಲನೆ ನೀಡಿದರು.

# ಚಲ್ದಿಗಾನಹಳ್ಳಿಯಲ್ಲಿ ಏ.11 ರಿಂದ 13 ಹಾಲುಮತಸ್ಥರ ದೊಡ್ಡದ್ಯಾವರ

**ಕೋಲಾರ:** ಶ್ರೀನಿವಾಸಪುರ ತಾಲೂಕಿನ ಚಲ್ದಿಗಾನಹಳ್ಳಿಯಲ್ಲಿ ಶ್ರೀ ಬೀರೇಶ್ವರ ಸ್ವಾಮಿ, ಭತ್ತೇಶ್ವರ ಸ್ವಾಮಿ, ಸಿದ್ಧೇಶ್ವರಸ್ವಾಮಿ ದೇವಾಲಯಗಳ ( ಈರಕೆಂಪಮ್ಮ, ಈರದೇವಮ್ಮ, ಈರನಾಗಮ್ಮ) ದೊಡ್ಡ ದ್ಯಾವರ ಜಾತ್ರಾ, ಮಹೋತ್ಸವ ಮತ್ತು ದೀಪಾರಾಧನೆ ಏ.11, 12, 13ನೇ ತಾರೀಖು ನಡೆಯಲಿದೆಯೆಂದು ಜಾತ್ರಾ ಸಮಿತಿ ಅಧ್ಯಕ್ಷ ಹಾಗೂ ಮಾಜಿ ಮೇಯರ್ ಡಿ.ವೆಂಕಟೇಶ್‌ಮೂರ್ತಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಮಾಧ್ಯಮದವರೊಂದಿಗೆ ಅವರು ಮಾತನಾಡಿ, ಮೂರು ದಿನಗಳು ನಡೆಯುವ ಬೀರೇಶ್ವರ ಜಾತ್ರಾ, ಮಹೋತ್ಸವವು ಸುಮಾರು 27 ವ?ರ್ಗಗಳ ನಂತರ ನಡೆಯುತ್ತಿರುವ ಜಾತ್ರೆ ಇದಾಗಿದೆ. ಅವಿಭಾಜಿತ ಜಿಲ್ಲೆಗಳು ಸೇರಿದಂತೆ ನೆರೆ ರಾಜ್ಯಗಳಾದ ಆಂಧ್ರಪ್ರದೇಶ ಹಾಗೂ ತಮಿಳುನಾಡಿನ ಕುರುಬ ಸಮುದಾಯದ ಹಾಲುಮತಸ್ಥ ಕುಟುಂಬಸ್ಥರು




ಸೇರಿ ಭಕ್ತಿಭಾವದಿಂದ ದೊಡ್ಡ ದ್ಯಾವರ ನಡೆಸಲಾಗುತ್ತದೆ ಎಂದು ಮಾಹಿತಿ ನೀಡಿದರು. ಜಾತ್ರಾ ಮಹೋತ್ಸವದಲ್ಲಿ ಏ.11 ಗುರುವಾರ ದೇವಾಲಯ ಶುದ್ಧಿ, ಗುಡಿಗಳ ಸಂಪ್ರೋಕ್ಷಣೆ, ಮೂಲ ದೇವರಿಗೆ ವಿಶೇ? ಪೂಜೆ, ಹೂವಿನ ಅಲಂಕಾರ ಸೇರಿದಂತೆ ಪೂಜಾ ಕೈಂಕರ್ಯಗಳು ನೆರವೇರಲಿದೆ. ಏ.22 ಶುಕ್ರವಾರ ದೇವರುಗಳ ಹೊಳೆಯಾಡುವುದು, ವೀರಕುಮಾರರ ತಲೆಯ ಮೇಲೆ ತೆಂಗಿನಕಾಯಿ ಪವಾಡ, ವೀರಗಾಸೆ, ಡೊಳ್ಳುಕುಣಿತ, ಕಾಲಾಟಗಾರರಿಂದ ದೇವರ ಕಥೆ. ಸಂಜೆ 6ರ ನಂತರ ದೀಪಾರಾಧನೆ ಮತ್ತು ದೀಪಾ ತೆಗೆದುಕೊಳ್ಳುವ ಕಾರ್ಯಕ್ರಮ ನಡೆಯುತ್ತದೆ. ಶನಿವಾರ ಏ.23 ಕುಲಬಾಂಧವರಿಗೆ ಬೀಳ್ಕೊಡುಗೆ ನೀಡುವ ಮೂಲಕ ಜಾತ್ರಾ ಮಹೋತ್ಸವ ಮುಕ್ತಾಯಗೊಳ್ಳಲಿದೆ ಎಂದು ವಿವರಿಸಿದರು.

ಚಲ್ದಿಗಾನಹಳ್ಳಿಯಲ್ಲಿ ಅನಾದಿಕಾಲದಿಂದಲೂ ನೆಲೆಗೊಂಡಿರುವ ಶ್ರೀ ಬೀರೇಶ್ವರ ದೇವಸ್ಥಾನವನ್ನು ನೂತನವಾಗಿ ನಿರ್ಮಿಸಲಾಗಿದೆ. ತಲಾಂತರದಿಂದ ದ್ಯಾವರ ಜಾತ್ರೆಯು ನೆರವೇರಿಸಲಾಗುತ್ತಿದ್ದು, ನಾನಾ ಸಮಸ್ಯೆ, ಕಾರಣ ಹಾಗೂ ಕೊರೊನ ಸಲುವಾಗಿ ಮುಂದೂಡಿ, 27 ವ?ರ್ಗಗಳ ನಂತರ ಈ ವ?ರ್ ಅದ್ದೂರಿಯಾಗಿ ನಡೆಸಲಾಗುತ್ತಿದೆ. ಲೋಕಸಭೆ ಚುನಾವಣೆ ನೀತಿ ಸಂಹಿತೆ ಜಾರಿ ಸಲುವಾಗಿ ಯಾವುದೇ ರಾಜಕೀಯ ಪ್ರೇರಿತ ಚಟುವಟಿಕೆಗಳು ನಡೆಯುತ್ತಿಲ್ಲ ಹಾಗೂ ರಾಜಕಾರಣಿಗಳನ್ನು ಆಹ್ವಾನಿಸಿಲ್ಲ. ಧಾರ್ಮಿಕ ಕಾರ್ಯಕ್ರಮ ಮಾತ್ರ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ದೊಡ್ಡ ದ್ಯಾವರ ಜಾತ್ರಾ ಸಮಿತಿಯ ಗೌರವಾಧ್ಯಕ್ಷ ನಾರಾಯಣಗೌಡ, ಕಾರ್ಯದರ್ಶಿ ಸೀನಪ್ಪ, ಸದಸ್ಯರಾದ ಹೂವಳ್ಳಿ ಚಂದ್ರಶೇಖರ್, ವೆಂಕಟಾಚಲಪತಿ, ನಾಗರಾಜ್, ತಿಪ್ಪಣ್ಣ ಮತ್ತಿತರರು ಉಪಸ್ಥಿತರಿದ್ದರು.

## ಕೋಲಾರ ಪತ್ರಿಕೆ ಎಂದರೆ ಅದೊಂದು ಹೆಮ್ಮೆ



**ಕೋಲಾರ:** ಕೋಲಾರ ಪತ್ರಿಕೆ ಎಂದರೆ ಅದೊಂದು ಹೆಮ್ಮೆ, ಅದೊಂದು ಬೆಳವಣಿಗೆ. ಸುದ್ದಿಗೆ ಸೀಮಿತವಾಗದೆ ಹೋರಾಟ, ಸಾಧನೆಗಳಿಗೆ ಪ್ರೇರಣೆ ನೀಡುವ ಅದು ತಮ್ಮ ಬದುಕಿಗೆ ತಿರುವು ನೀಡಿದ್ದನ್ನು ಕೂಡಾ ಎಂದಿಗೂ ಮೆಯುವುದಿಲ್ಲವೆಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ನುಡಿದರು.ಅವರು ನಗರದ ಪತ್ರಕರ್ತರ ಭವನದಲ್ಲಿ ಕೋಲಾರ ಪತ್ರಿಕೆಯ 50ನೇ ವರ್ಷಾಚರಣೆಯ 'ಸುವರ್ಣ ಸಂಭ್ರಮ'ವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಪತ್ರಿಕೆ ವಿತರಕನಾಗಿ ಕೋಲಾರ ಪತ್ರಿಕೆ ಬಳಗಕ್ಕೆ ಸೇರಿದ ತಮ್ಮನ್ನು ಕಾರ್ಯಕ್ರಮವೊಂದರ ವರದಿಗಾರಿಕೆಯ ಸಲುವಾಗಿ ಸಂಪಾದಕರು ಕಳುಹಿಸಿಕೊಟ್ಟಿದ್ದು ತಮ್ಮ ಪತ್ರಿಕಾರಂಗದ ಪ್ರವೇಶಕ್ಕೆ ನಾಂದಿ ಹಾಡಿತು ಎಂದ ಅವರು ಸಂಪಾದಕ ಕೆ. ಪ್ರಹ್ಲಾದರಾವ್ ಅವರು ಹಾಕಿಕೊಟ್ಟ ಆದರ್ಶಗಳ ಹಾದಿಯಲ್ಲ ಎಲ್ಲರ ಶ್ರಮದಿಂದ ಸ್ವಂತಿಕೆಯನ್ನು ಉಳಿಸಿಕೊಂಡು ಬಂದಿರುವ ಕೋಲಾರ ಪತ್ರಿಕೆ ಉತ್ತಮ ಪ್ರಾದೇಶಿಕ, ರಾಜ್ಯ ಪತ್ರಿಕೆಯಾಗಿ ಬೆಳೆಯಲು ಎಲ್ಲರ ಸಹಕಾರ ಅಗತ್ಯವಾಗಿದೆಯೆಂದರು. ಪತ್ರಿಕೆಯ ನೂತನ ಲಾಂಛನ ಅನಾವರಣ ಮಾಡಿದ ಬೆಂಗಳೂರು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥ ಡಾ॥ ಎಸ್.ಆರ್. ಕೇಶವ ಅವರು ಪ್ರಹ್ಲಾದರಾಯರ ಜೀವನದಿಂದ ಪ್ರತಿಯೊಬ್ಬರೂ ಸ್ವಯಂ ಬಂಬಿಕೆ, ಬದ್ಧತೆಯ ಕಾರ್ಯ ನಿರ್ವಹಣೆ, ಕ್ಷೇತ್ರದ ಬಗ್ಗೆ ತಿಳಿದ ಬಳಿಕ ಪ್ರವೇಶ, ಪರಿಣಾಮಕಾರಿ ನಾಯಕತ್ವ, ಆಯಾ ಕಾಲಕ್ಕೆ ತಕ್ಕ ತಂತ್ರಜ್ಞಾನ ಅಳವಡಿಕೆ, ಹೊಸ ಆವಿಷ್ಕಾರಗಳ ಮೂಲಕ ಜನರ ತಲುಪುವಿಕೆ, ವಿಶಾಲವಾದ ಧ್ಯೇಯ, ಲಾಭಕ್ಕೂ ಮಿಗಿಲಾಗಿ ಜನರ ಹಿತಾಸಕ್ತಿಗೆ ಆದ್ಯತೆ, ಅತ್ಯಂತ ಸರಳವಾದ ಜೀವನಶೈಲಿ, ಮೌಲ್ಯಗಳ ಜೊತೆ ಸಾಗುವಿಕೆ ಎನ್ನುವ ನಿರ್ವಹಣಾ ಪಾಠಗಲನ್ನು ಕಲಿಯಬಹುದಾಗಿದೆಯೆಂದು ವಿಶ್ಲೇಷಿಸಿದರು. ಪತ್ರಿಕೆ ಈ-ಪತ್ರಿಕೆ ಆವೃತ್ತಿಗೆ ಚಾಲನೆ ನೀಡಿದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್, ಕೋಲಾರ ಪತ್ರಿಕೆ ಮತ್ತು ಪ್ರಹ್ಲಾದರಾಯರು ತಮ್ಮ ಅಯಸ್ಕಾಂತೀಯ ಗುಣದಿಂದ ಎಲ್ಲರ ಗಮನ ಸೆಳೆದವರು. ವರ್ಷವಿಡೀ ವಿಭಿನ್ನ ಕಾರ್ಯಕ್ರಮಗಳ ಮೂಲಕ ರಾಯರ ಹೆಸರನ್ನು ಚಿರಸ್ಥಾಯಿಯಾಗಿಸುವ ಯತ್ನ ಸ್ವಾಗತಾರ್ಹವೆಂದು ನುಡಿದು ಮೆದುಳು ಜ್ವರ, ಕಾಲರಾ ಉಪಟಳ, ವಿಫಲ ತೊಟುಬಾವಿಗಳ ಸಾಲಮನ್ನಾ ಮತ್ತಿತರ ವಿಚಾರಗಳಲ್ಲಿ ಪತ್ರಿಕೆ ರಚನಾತ್ಮಕ ಜನಾಭಿಪ್ರಾಯ ಮೂಡಿಸಿದ್ದನ್ನು ಸ್ಮರಿಸಿಕೊಂಡರು. ನಿವೃತ್ತ ವಾರ್ತಾಧಿಕಾರಿ ಅ.ನಾ. ಪ್ರಹ್ಲಾದರಾವ್, ಅಂತರರಾಷ್ಟ್ರೀಯ ಅಥ್ಲೆಟಿಕ್ ರಾಮಮೂರ್ತಿ ನಾಯ್ಡು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಪತ್ರಿಕೆಯ ನಿರಂತರ ಚಂದಾದಾರರ ಪರವಾಗಿ ಸತ್ಯನಾರಾಯಣ ಶೆಟ್ಟಿ, ಜಾಹಿರಾತುದಾರರ ಪರವಾಗಿ ಗುರುರಾಜ ಟ್ರಾವೆಲ್ಸ್‌ನ ವೆಂಕಟೇಶ್, ಕೋಲಾರ ಪತ್ರಿಕೆ ಸಿಬ್ಬಂದಿ ವರ್ಗದವರ ಪರವಾಗಿ ಎಚ್.ಕೆ. ರಾಘವೇಂದ್ರ, ಎಂ. ರಮೇಶ್, ಜೆ. ಅಂಬರೀಶ್, ಎಚ್. ವಾಸುದೇವ ಅವರನ್ನು ಸನ್ಮಾನಿಸಲಾಯಿತು. ಭವಾನಿ ಶ್ರೀನಿವಾಸ್‌ರಿಂದ ಪ್ರಾರ್ಥನೆ, ಸಂಪಾದಕ ಸುಹಾಸ್ ಪ್ರಹ್ಲಾದರಾವ್‌ರಿಂದ ಸ್ವಾಗತ, ಪ್ರೊ.ಕೆ.ಆರ್. ನರಸಿಂಹನ್‌ರಿಂದ ನಿರೂಪಣೆ, ಪ್ರಕಾಶಕಿ ಕೆ.ಎನ್. ಶ್ರೀವಾಣಿ ಪ್ರಹ್ಲಾದರಾವ್‌ರಿಂದ ಪ್ರಾಸ್ತಾವಿಕ ನುಡಿ, ಡಾ॥ ನರೇಶ್ ಪ್ರಹ್ಲಾದರಾವ್‌ರಿಂದ ಸನ್ಮಾನಿತರ ಪರಿಚಯ ಮತ್ತು ಪಿ. ಚಂದ್ರಪ್ರಕಾಶ್‌ರಿಂದ ವಂದನೆಗಳಾಯಿತು. ಅವಿಭಜಿತ ಜಿಲ್ಲೆಯ ವಿವಿಧ ಮೂಲೆಗಳಿಂದ ಮಾತ್ರವಲ್ಲದೆ ದೂರದ ಬೆಮಗಳೂರು, ತುಮಕೂರು, ಕುಣಿಗಲ್ ಮತ್ತಿತರ ಸ್ಥಳಗಳಿಂದ ಅಭಿಮಾನಿಗಳು ಆಗಮಿಸಿದ್ದರು.

## ಸುನೀಲ್ ಬೋಸ್ ಗೆ ಗೋ ಬ್ಯಾಕ್ ಬೆನ್ನಲ್ಲೇ ಸಂಕಷ್ಟ

**ಚಾಮರಾಜನಗರ:** ಚಾಮರಾಜನಗರ. ಮೀಸಲು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹಾಗೂ ಡಾ.ಹೆಚ್.ಸಿ ಮಹೇವಪ್ಪ ಪುತ್ರ ಸುನೀಲ್ ಬೋಸ್ ಗೆ ಗೋ ಬ್ಯಾಕ್ ಬೆನ್ನಲ್ಲೇ ಮತ್ತೊಂದು ಸಂಕಷ್ಟ ಎದುರಾಗಿದೆ. ಸುನಿಲ್ ಬೋಸ್ ಕಾಂಗ್ರೆಸ್ ಅಭ್ಯರ್ಥಿ ಯಾಗಿನಾಮಪತ್ರ ಸಲ್ಲಿಕೆ ವೇಳೆ ಪ್ರಮಾಣ ಪತ್ರದಲ್ಲಿ ಪ್ರಮುಖ ಮಾಹಿತಿ ಮರೆಮಾಚಿರುವ ಆರೋಪ ಕೇಳಿ ಬಂದಿದೆ. ನಾಮಪತ್ರ ತಿರಸ್ಕರಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗೆ ಬಿಜೆಪಿ ದೂರು ನೀಡಿದೆ. ವೈವಾಹಿಕ ಜೀವನದ ಬಗ್ಗೆ ಮರೆಮಾಚಿರುವ ಆರೋಪ ಕೇಳಿ ಬಂದಿದೆ. ಪ್ರಮಾಣ ಪತ್ರದಲ್ಲಿ ಹೆಂಡತಿ, ಮಕ್ಕಳ ಹಾಗೂ ಹಿಂದೂ ಅವಿಭಕ್ತ ಕುಟುಂಬದ ಪ್ರಮುಖ ಮಾಹಿತಿ ಮುಚ್ಚಿಟ್ಟಿದ್ದಾರೆಂಬ ಆರೋಪ ಕೇಳಿ ಬಂದಿದೆ. ಹೆಂಡತಿ, ಮಕ್ಕಳು ಹಾಗೂ ತಂದೆ ತಾಯಿಯ ಆಸ್ತಿ ವಿವರ ಘೋಷಿಸಿಲ್ಲ. ಸುನೀಲ್ ಬೋಸ್ ಸಲ್ಲಿಸಿರುವ ಪ್ರಮಾಣ ಪತ್ರ ಅಸಿಂಧುವಾಗಿದೆ. ಹೀಗಾಗಿ ಸುನೀಲ್ ಬೋಸ್ ನಾಮಪತ್ರ ಅಸಿಂಧುಗೊಳಿಸುವಂತೆ ದೂರು ನೀಡಿದೆ. ಹೆಂಡತಿ, ಮಕ್ಕಳ ಜೊತೆಗೆ ಇರುವ ಬಗ್ಗೆ ಛಾಯಾಚಿತ್ರಗಳನ್ನು ಲಗತ್ತಿಸಿ ದೂರು ನೀಡಲಾಗಿದೆ. ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಹಾಗು ಬಿಜೆಪಿ ಅಭ್ಯರ್ಥಿ ಬಾಲರಾಜು ಏಜೆಂಟ್ ನಾರಾಯಣ ಪ್ರಸಾದ್ ಅವರಿಂದ ದೂರು ನೀಡಲಾಗಿದೆ.

## ವಿದ್ಯುತ್ ವ್ಯತ್ಯಯ

**ಹುಳಿಯಾರು:** ಹುಳಿಯಾರು ಹೋಬಳಿಯ ದಸೂಡಿ ಉಪಸ್ಥಾವರದಿಂದ ನೂತನ ಲಿಂಕ್ ಮಾರ್ಗ ನಿರ್ಮಿಸುವ ಕಾಮಗಾರಿ ನಿರ್ವಹಿಸಬೇಕಾಗಿರುವುದರಿಂದ ಎಫ್-6 ಯಗಚೀಹಳ್ಳಿ ನಿರಂತರ ಜ್ಯೋತಿ ಮಾರ್ಗದಲ್ಲಿ ದಿನಾಂಕ: 06-04-2024 ಮತ್ತು ದಿನಾಂಕ: 07-04-2024 ಎರಡು ದಿನ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆವರೆವರಗೆ ವಿದ್ಯುತ್ ಸರಬರಾಜು ಇರುವುದಿಲ್ಲ,

# ಕಾರ್ಮಿಕರ ಆರ್ಥಿಕ ಸಬಲೀಕರಣ ಮಾಡಿದ ಬಾಬೂಜಿ

**ಮಂಡ್ಯ:** ಭಾರತದಲ್ಲಿ ಬಹಳಷ್ಟು ಜನರು ಕಾರ್ಮಿಕ ವರ್ಗಕ್ಕೆ ಸೇರಿದವರಾಗಿದ್ದು, ಅವರನ್ನು ಆರ್ಥಿಕವಾಗಿ ಸಬಲರಾಗಿಸಲು ಮೊದಲ ಬಾರಿಗೆ ಎಂಪ್ಲಾಯಿ ಪ್ರವಿಡೆಂಟ್ ಫಂಡ್ ಎಂಬ ಪರಿಕಲ್ಪನೆ ಯನ್ನು ಡಾ: ಬಾಬು ಜಗಜೀವನರಾಂ ಅವರು ಜಾರಿಗೆ ತಂದರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಂಡ್ಯ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಭಾರತದ ಮಾಜಿ ಉಪಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ; ಬಾಬು ಜಗಜೀವನ ರಾಂ ರವರ 117 ನೇ ಜನ್ಮ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಕಾರ್ಮಿಕರು ದೇಶದ ಅಭಿವೃದ್ಧಿಗೆ ಶ್ರಮಿಸುವ ಅತಿ ದೊಡ್ಡ ಆಸ್ತಿ ಎಂದು ಕಾರ್ಮಿಕರ ಜೀವನ ಸುಧಾರಿಸಲು ಹಲವಾರು ಕಾಯ್ದೆಯನ್ನು ಜಾರಿಗೆ ತಂದರು. ಬಡತನವಿರುವ ಕುಟುಂಬದಲ್ಲಿ ಹುಟ್ಟಿದ ಡಾ: ಬಾಬು ಜಗಜೀವನ ರಾಂ ಅವರು ಬಡತನದ ತೊಂದರೆಗಳನ್ನು ಹತ್ತಿರದಿಂದ ಅರಿತಿದ್ದರು. ಆರ್ಥಿಕ ಅಸಮಾನತೆ, ಅಸ್ಪೃಶ್ಯತೆಯನ್ನು ಹೋಗಲಾಡಿಸಲು ಶ್ರಮಿಸಿದರು ಎಂದರು.

ಬಡತನದ ನಡುವೆಯೂ ಬಾಬು ಜಗಜೀವನ ರಾಂ ಅವರು ಉನ್ನತ ವಿದ್ಯಾಭ್ಯಾಸವನ್ನು ಬನಾರಸ್ ಹಾಗೂ ಕೋಲ್ಕತ್ತಾ ವಿಶ್ವವಿದ್ಯಾಲಯದಲ್ಲಿ ನಡೆಸಿದರು. ಇದೇ ಸಂದರ್ಭದಲ್ಲಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾದರು ಎಂದರು. ಮಂಡ್ಯ ವಿಶ್ವ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಮಂಜು ಅವರು ಮಾತನಾಡಿ ಭಾರತ ಕಂಡಂತಹ ಅಪ್ರತಿಮ ನಾಯಕ, ಹಿರಿಯ ಸ್ವಾತಂತ್ರ್ಯ ಹೋರಾಟಗಾರ, ದೀನ ದಲಿತರ ಆರಾಧ್ಯ ದೈವ, ಭವ್ಯ ಪರಂಪರೆಯ ಹಸಿರುಕಾರ, ಭ್ರಷ್ಟಾಚಾರ ಕಳಂಕ ಅಂಟಿಸಿಕೊಳ್ಳದಂತಹ ಶುದ್ಧ ಚಾರಿತ್ರ್ಯ, ಅಪ್ಪಟ ಪವಿತ್ರ ಚಿನ್ನ ಬಾಬು ಜಗಜೀವನರಾಂ ಅವರು ಎಂದು ಬಣ್ಣಿಸಿದರು. ದೇಶದ ಪ್ರಗತಿ, ನಮ್ಮ ಪ್ರಗತಿ ಕೈಯಲ್ಲಿದೆ ಅದರ ಉದ್ಧಾರವೆ ನಮ್ಮ ಆತ್ಮೋದ್ಧಾರ, ದೇಶದ ಅಭಿವೃದ್ಧಿಯೇ ನಮ್ಮ ಗುರಿಯಾಗಬೇಕು ಎಂಬ ಸಂದೇಶವನ್ನು ಸಾರಿದ ಮಹಾನ್ ಧೀಮಂತ ನಾಯಕ ಬಾಬು ಜಗಜೀವನರಾಂ ಎಂದರು. ಬಾಬು ಜಗಜೀವನ ರಾಂ ಅವರು ನಡೆಸಿದ ಹಸಿರು ಕ್ರಾಂತಿಯಿಂದ ದೇಶದಲ್ಲಿ ಬಡವರಿಗೆ ಆಹಾರದ ಕೊರತೆ ದೂರವಾಯಿತು. ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನ ರಾಂ ಅವರು ಸಮಾಜದ ಕಟ್ಟಕಡೆಯ ವ್ಯಕ್ತಿಯ ಜೀವನಕ್ಕೂ ಆದ್ಯತೆ ನೀಡಿದರು.ಇಂದು ಸಮಾಜದಲ್ಲಿ ಆಹಾರ ಪದಾರ್ಥಗಳ ಕೊರತೆಯಿಲ್ಲ ಎಂದರೇ ಅದಕ್ಕೆ ಕಾರಣ ಬಾಬೂ ಜಗಜೀವನ ರಾಂ ಅವರು ಎಂದರು.

ಬಾಬು ಜಗಜೀವನರಾಂ ಅವರ ಬಾಲ್ಯದ ಶಾಲಾ ದಿನಗಳನ್ನು ನೆನೆದು ಮಾತನಾಡಿ ಬಾಬುಜಿ ಅವರು ಶಾಲೆಗೆ ಸೇರಿದಂತಹ ಸಂದರ್ಭದಲ್ಲಿ ಹಲವಾರು ಕಹಿ ಅನುಭವ ಗಳನ್ನು ಎದುರಿಸಿದ್ದರು, ಎಂದು ಕೆಲವು ಉದಾಹರಣೆಗಳನ್ನು ನೀಡಿದರು. ಸಮಾಜದ ಅಸಮಾನತೆ ಯನ್ನು ಹೋಗಲಾಡಿಸಲು ಬುದ್ಧ, ಬಸವ, ಅಂಬೇಡ್ಕರ್, ಕನಕದಾಸರು ಹಾಗೂ ಇನ್ನಿತರ ಮಹನೀಯರು ಪ್ರಯತ್ನ ಮಾಡಿದರು ಅವರ ಮಾರ್ಗದಲ್ಲೇ ಬಾಬೂ ಜಗಜೀವನರಾಂ ಅವರು ಹೆಜ್ಜೆ ಹಾಕಿದರು ಎಂದರು. ಇಂದಿಗೂ ನಮ್ಮ ದೇಶದಲ್ಲಿ ಭ್ರಷ್ಟಾಚಾರ, ಜಾತಿ ಪದ್ದತಿ, ಅಸ್ಪೃಶ್ಯತೆ, ಬೇಧ-ಬಾವ, ಲಿಂಗ ಅಸಮಾನತೆ ಎಂಬುವುದು ನೇತಾಡುತ್ತಿದೆ ಅದನ್ನು ಸಂಪೂರ್ಣವಾಗಿ ಹೋಗಲಾಡಿಸುವ ಪ್ರಯತ್ನವನ್ನು ಪ್ರತಿಯೊಬ್ಬರು ಮಾಡಬೇಕು. ಮಹಾನ್ ವ್ಯಕ್ತಿಗಳ ತತ್ವ ಆದರ್ಶಗಳನ್ನು ರೂಡಿಸಿಕೊಳ್ಳಬೇಕು ಎಂದು ಹೇಳಿದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದ ಕಾವೇರಿ ಉದ್ಯಾನವನದಲ್ಲಿರುವ ಡಾ: ಬಾಬು ಜಗಜೀವನ್ ರಾಂ ಅವರ ಪ್ರತಿಮೆಗೆ ಜಿಲ್ಲಾಧಿಕಾರಿ ಡಾ: ಕುಮಾರ ಅವರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಸಿದ್ದಲಿಂಗೇಶ್ ಉಪಸ್ಥಿತರಿದ್ದರು.

# ಇ-ತ್ಯಾಜ್ಯ ಕುರಿತು ಜಾಗೃತಿ




**ನಗರದ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಇ-ಪರಿಸರ ಪ್ರೈವೇಟ್ ಲಿಮಿಟೆಡ್ ಇ.ಹೆಚ್.ಎಸ್ ಟೀಮ್ ಇವರುಗಳ ಸಹಯೋಗದೊಂದಿಗೆ ಏ.5 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಇ-ವೇಸ್ಟ್ (ವಿದ್ಯುನ್ಮಾನ ತ್ಯಾಜ್ಯ) ಎಂಬ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಸಿ.ಎ. ಎಸ್.ವಿಶ್ವನಾಥ್, ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಪ್ರೊ.ಚೆನ್ನಬಸವಪ್ರಸ್ನದ್, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಪ್ರಾಂಶುಪಾಲರಾದ ಡಾ.ಎಂ. ವಿಶ್ವಾಸ್ ಹಾಗೂ ಕಾಲೇಜಿನ ಮುಖ್ಯಸ್ಥರು ಹಾಜರಿದ್ದರು.**

**ತುಮಕೂರು:** ಇತ್ತೀಚಿನ ದಿನಗಳಲ್ಲಿ ಇ-ತ್ಯಾಜ್ಯವು ಅನಪೇಕ್ಷಿತ, ಕೆಲಸ ಮಾಡದ, ಅಂತ್ಯದ ಎಲೆಕ್ಟ್ರಾನಿಕ್ ಉತ್ಪನ್ನವಾಗಿದೆ, ಬಳಸಿದ ಮತ್ತು ಅನಗತ್ಯ ಎಲೆಕ್ಟ್ರಾನಿಕ್ಸ್ ಅನ್ನು ಹೇಗೆ ಉತ್ತಮವಾಗಿ ವಿಲೇವಾರಿ ಮಾಡುವುದು ಹಾಗೂ ಇ-ತ್ಯಾಜ್ಯವು ಮೌಲ್ಯಯುತವಾಗದ ವಸ್ತುಗಳನ್ನು ಮತ್ತು ಅಪಾಯಕಾರಿ ಜೀವಾಣುಗಳನ್ನು ಒಳಗೊಂಡಿದೆ. ಇದು ಆರ್ಥಿಕ, ಮೌಲ್ಯ, ಪರಿಸರ, ಮಾನವನ ಆರೋಗ್ಯಕ್ಕೆ ಅತ್ಯಂತ ಅಪಾಯಕಾರಿ. ಆದ ಕಾರಣ ಇದನ್ನು ಮರುಬಳಕೆ ಮತ್ತು ಸುರಕ್ಷಿತ ಮರುಬಳಕೆ ಮಾಡಬೇಕಾದದ್ದು ಎಲ್ಲರೂ ಕರ್ತವ್ಯವಾಗಿದೆ ಎಂದು ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಸಿ.ಎ. ಎಸ್.ವಿಶ್ವನಾಥ್‌ರವರು ತಿಳಿಸಿದರು.

ನಗರದ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ನ ವತಿಯಿಂದ ಇ-ಪರಿಸರ ಪ್ರೈವೇಟ್ ಲಿಮಿಟೆಡ್ ಇ.ಹೆಚ್.ಎಸ್ ಟೀಮ್ ಇವರುಗಳ ಸಹಯೋಗದೊಂದಿಗೆ ಏ.5 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಇ-ವೇಸ್ಟ್ (ವಿದ್ಯುನ್ಮಾನ ತ್ಯಾಜ್ಯ) ಎಂಬ ಇ-ತ್ಯಾಜ್ಯ ಕುರಿತು ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಿ.ಎ. ಎಸ್.ವಿಶ್ವನಾಥ್‌ರವರು ಗಿಡಕ್ಕೆ ನೀರರೆಯುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದ್ದರು.

ಕಾಲೇಜಿನ ವಿದ್ಯಾರ್ಥಿಗಳು ಇ- ತ್ಯಾಜ್ಯದ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಜಾಥಾ ನಡಿಗೆಯನ್ನು ಕಾಲೇಜು ಆವರಣದಿಂದ ಪ್ರಾರಂಭಿಸಿ ಎಂ.ಜಿ. ರಸ್ತೆ, ಬಾರ್ ಲೈನ್ ಮೂಲಕವಾಗಿ ನಡೆದು ಮತ್ತೆ ಕಾಲೇಜಿನ ಆವರಣಕ್ಕೆ ತಲುಪಿದರು.

ಇದೇ ಸಂದರ್ಭದಲ್ಲಿ ಅನನ್ಯ ಕಾಲೇಜಿನ ಉಪಾಧ್ಯಕ್ಷರಾದ ಬಿ.ಆರ್. ಉಮೇಶ್, ಅನನ್ಯ ಸಂಸ್ಥೆಯ ಕಾರ್ಯದರ್ಶಿಗಳಾದ ಪ್ರೊ.ಚೆನ್ನಬಸವಪ್ರಸ್ನದ್, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್ ಹಾಗೂ ಕಾಲೇಜಿನ ಮುಖ್ಯಸ್ಥರು, ಉಪನ್ಯಾಸಕ ವರ್ಗದವರು ಹಾಜರಿದ್ದರು.

# ಸಂಜೆ ಟಿಪ್ಸ್




## ರಿಲಯನ್ಸ್ ಡಿಜಿಟಲ್‌ನಿಂದ 'ಡಿಜಿಟಲ್ ಡಿಸ್ಕೌಂಟ್ ಸೇಲ್'

ರಿಲಯನ್ಸ್ ಡಿಜಿಟಲ್ ಕಂಪನಿಯು ತನ್ನ ಅತಿದೊಡ್ಡ ಎಲೆಕ್ಟ್ರಾನಿಕ್ಸ್ ಮಾರಾಟ 'ಡಿಜಿಟಲ್ ಡಿಸ್ಕೌಂಟ್ ಡೇಸ್' ಆರಂಭಿಸಿದೆ. ಈ ಮೂಲಕ ವ್ಯಾಪಕ ಶ್ರೇಣಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳ ಮೇಲೆ ಭಾರಿ ರಿಯಾಯಿತಿಯ ಭರವಸೆಗಳನ್ನು ನೀಡುತ್ತಿದೆ. ರಿಲಯನ್ಸ್ ಡಿಜಿಟಲ್ ಅಥವಾ ಮೈ ಜಿಯೋ ಸ್ಟೋರ್‌ಗಳಲ್ಲಿ ಗ್ರಾಹಕರು ಈ ಕೊಡುಗೆಗಳ ಪ್ರಯೋಜನ ಪಡೆದುಕೊಳ್ಳಬಹುದು. ಈ ರಿಯಾಯಿತಿ ಮಾರಾಟದಲ್ಲಿ ಗ್ರಾಹಕರು ಪ್ರಮುಖ ಬ್ಯಾಂಕ್ ಕಾರ್ಡ್‌ಗಳ ಮೇಲೆ ಶೇಕಡ 10 ತ್ವರಿತ ರಿಯಾಯಿತಿ ಪಡೆಯಬಹುದು ಅಥವಾ ಸಾಲಗಳ ಮೇಲೆ ರೂ. 15,000 ಕ್ಯಾಷ್ ಬ್ಯಾಕ್ ಪಡೆಯಬಹುದು. ಇದಲ್ಲದೆ 15ನೇ ಏಪ್ರಿಲ್ 2024ರವರೆಗೆ ತಮ್ಮ ನೆಚ್ಚಿನ ಎಲೆಕ್ಟ್ರಾನಿಕ್ಸ್ ಉಪಕರಣಗಳ ಮೇಲೆ ಆಕರ್ಷಕ ರಿಯಾಯಿತಿ ಸಹ ಪಡೆಯಬಹುದು. ರಿಲಯನ್ಸ್ ಡಿಜಿಟಲ್ ನೊಂದಿಗೆ ಹೊಂದಿಕೊಳ್ಳುವ ಇಎಂಐ ಆಯ್ಕೆಗಳೊಂದಿಗೆ ಸುಲಭವಾದ ಹಣಕಾಸಿನ ಸೌಲಭ್ಯವನ್ನೂ ಪಡೆಯಬಹುದಾಗಿದೆ.ಟಿ.ವಿಗಳ ಮೇಲೆ ರಿಯಾಯಿತಿ: ಪ್ರಮುಖ ಕಂಪನಿಗಳ ಟಿ.ವಿಗಳ ಮೇಲೆ ಉತ್ತಮ ರಿಯಾಯಿತಿ ಇದೆ. LG OLED ಮತ್ತು Samsung Neo QLED TV ಗಳಮೇಲೆ ಶೇಕಡ 45 ರಿಯಾಯಿತಿಯನ್ನುಪಡೆಯಿರಿ. ಈ ಟಿ.ವಿಗಳ ಬೆಲೆ ರೂ.79,990 ರಿಂದ ಪ್ರಾರಂಭವಾಗುತ್ತದೆ. 43-ಇಂಚಿನ FullHD ಟಿ.ವಿಗಳ ಮೇಲೆ ಶೇಕಡ 40 ರಿಯಾಯಿತಿ ಆನಂದಿಸಿ. ಬೆಲೆಯು ರೂ.16,990 ರಿಂದ ಪ್ರಾರಂಭವಾಗುತ್ತದೆ.ಅಪ್‌ಗ್ರೇಡ್ ಅವಕಾಶ: ನೀವು ಐಫೋನ್ ಪಡೆಯು ಸಮಯ ಇದೀಗ ಬಂದಿದೆ. ಎಲ್ಲ Apple iPhone ಗಳಲ್ಲಿ ರೂ.12,000 ವರೆಗಿನ ಡಬಲ್ ಎಕ್ಸ್‌ಚೇಂಜ್ ಬೋನಸ್ ಪಡೆಯಿರಿ.

## ಸೌತೆಕಾಯಿ ಇಡ್ಲಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸೌತೆಕಾಯಿ-1(ಚಿಕ್ಕದು), ಅಕ್ಕಿ-2ಬಟ್ಟಲು, ಅವಲಕ್ಕಿ- ಸ್ವಲ್ಪ, ತೆಂಗಿನಕಾಯಿತುರಿ-ಅರ್ಧ ಬಟ್ಟಲು, ರವೆ-ಅರ್ಧ ಬಟ್ಟಲು, ಮೊಸರು- ಅರ್ಧಬಟ್ಟಲು, ಉಪ್ಪು- ರುಚಿಗೆ ತಕ್ಕಷ್ಟು, ಹಸಿಮೆಣಸಿನ ಕಾಯಿ- ಖಾರಕ್ಕೆ ತಕ್ಕಂತೆ

### ಮಾಡುವ ವಿಧಾನ

ಮೊದಲಿಗೆ ಅಕ್ಕಿಯನ್ನು ಬಾಣಲೆಯಲ್ಲಿ ಸ್ವಲ್ಪ ಹುರಿದು ನೀರಿನಲ್ಲಿ ಸುಮಾರು 2ಗಂಟೆಗಳ ಕಾಲ ನೆನೆಸಿಡಬೇಕು. ಇನ್ನೊಂದೆಡೆ ಸೌತೆಕಾಯಿನ್ನು ಚಿಕ್ಕದಾಗಿ ಹಚ್ಚಿಟ್ಟುಕೊಳ್ಳಬೇಕು. ಮತ್ತೊಂದೆಡೆ ರವೆಯನ್ನು ತುಪ್ಪದಲ್ಲಿ ಹುರಿದಿಟ್ಟುಕೊಳ್ಳಬೇಕು. ಇಷ್ಟು ಮಾಡಿಕೊಂಡ ನಂತರ ಅಕ್ಕಿ, ಸೌತೆಕಾಯಿ, ತೆಂಗಿನ ತುರಿ, ಅವಲಕ್ಕಿ, ಉಪ್ಪು ಎಲ್ಲವನ್ನು ಹಾಕಿ ನೀರು ಹಾಕದೆ ರುಬ್ಬಬೇಕು. ಹೀಗೆ ರುಬ್ಬುವ ಹಿಟ್ಟು ಸ್ವಲ್ಪ ಮಂದವಾಗಿವಂತೆ ನೋಡಿಕೊಳ್ಳಬೇಕು. ಬಳಿಕ ಅದಕ್ಕೆ ರವೆ ಮತ್ತು ಗಟ್ಟಿಮೊಸರು, ಕೊತ್ತಂಬರಿ ಸೊಪ್ಪು, ಹಸಿಮೆಣಸಿನಕಾಯಿ ಚೂರು ಸೇರಿಸಿ ಇಡ್ಲಿ ಪಾತ್ರೆಯಲ್ಲಿಟ್ಟು ಬೇಯಿಸಿದರೆ ಸೌತೆಕಾಯಿ ಇಡ್ಲಿ ರೆಡಿ.

## ಶ್ರೀವಲ್ಲಿ ಹೊಸ ಲುಕ್ ಹೇಗಿದೆ ಗೊತ್ತಾ?




ನ್ಯಾಶನಲ್ ಕ್ರಶ್ ಕನ್ನಡತಿ ರಶ್ಮಿಕಾ ಮಂದಣ್ಣ ಏ.5 ಹುಟ್ಟು ಹಬ್ಬ ಆಚರಿಸಿಕೊಂಡಿದ್ದಾರೆ. 28ನೇ ವರ್ಷಕ್ಕೆ ಕಾಲಿಟ್ಟಿರುವ ಕಿರಿಕ್ ಪಾರ್ಟಿ ಬೆಡಗಿಗೆ ಕನ್ನಡ, ತೆಲುಗು, ಬಾಲಿವುಡ್ ನ ಎಲ್ಲಾ ಅಭಿಮಾನಿಗಳಿಂದ ಶುಭಾಶಯಗಳ ಮಹಾಪೂರವೇ ಹರಿದು ಬಂದಿದೆ.

ರಶ್ಮಿಕಾ ಮಂದಣ್ಣ ಅಭಿನಯದ ಪುಷ್ಪಾ ಚಿತ್ರ ಸಖತ್ ಹಿಟ್ ಆಗಿದ್ದು ಈಗ ಚಿತ್ರದ ಸೀಕ್ವೆಲ್ ಪುಷ್ಪಾ 2 ರಿಲೀಸ್ಗೆ ಸಿದ್ಧವಾಗುತ್ತಿದೆ. ಚಿತ್ರದಲ್ಲಿ ಶ್ರೀವಲ್ಲಿ ಪಾತ್ರದಲ್ಲಿ ನಟಿಸಿರುವ ರಶ್ಮಿಕಾ ಅವರ ಫಸ್ಟ್ ಲುಕ್ ರಿಲೀಸ್ ಮಾಡಿ ಚಿತ್ರ ತಂಡ ಬರ್ತ್ ಡೇ ಗಿಫ್ಟ್ ನೀಡಿದೆ. ಸಾಕಷ್ಟು ಆಭರಣ ಧರಿಸಿರುವ ಗೆಟಪ್ನಲ್ಲಿ ಕಾಣಿಸಿಕೊಂಡಿರುವ ರಶ್ಮಿಕಾ ರಗಡ್ ಲುಕ್ ಸಿನಿಮಾದ ಮೇಲಿನ ಕ್ರೇಜ್ ಹೆಚ್ಚಿಸಿದೆ. ಅಗಸ್ಟ್ 15 ರಂದು ಪುಷ್ಪಾ 2 ಚಿತ್ರ ತೆರೆಗೆ ಬರಲಿದ್ದು, ಏ.8 ರಂದು ಚಿತ್ರದ ಟೀಸರ್ ರಿಲೀಸ್ ಆಗಲಿದೆ. ಇನ್ನು ರಶ್ಮಿಕಾ ಅವರಿಗೆ ' ದಿ ಗರ್ಲ್‌ಫ್ರೆಂಡ್' ಚಿತ್ರ ತಂಡ ಕೂಡ ಫಸ್ಟ್ ಲುಕ್ ರಿಲೀಸ್ ಮಾಡಿ ಗಿಫ್ಟ್ ನೀಡಿದೆ. ಅನಿಮಲ್ ಚಿತ್ರದ ಬಳಿಕ ಸದ್ಯ ಮತ್ತೆರಡು ಚಿತ್ರಗಳು ಈ ವರ್ಷ ತೆರೆಗೆ ಬರಲು ಸಿದ್ಧವಾಗಿದೆ. ಇದೆಲ್ಲದರ ನಡುವೆ ರಶ್ಮಿಕಾ ಕನ್ನಡಕ್ಕೆ ಯಾವಾಗ ವಾಪಸ್ಸಾಗುತ್ತಾರೆ ಎಂಬ ಕುತೂಹಲ ಅಭಿಮಾನಿಗಳಲ್ಲಿ ಮನೆ ಮಾಡಿದೆ. ದಕ್ಷಿಣದಿಂದ ಬಾಲಿವುಡ್'ವರೆಗೂ ತನ್ನ ಅಭಿನಯದ ಮೂಲಕ ಪ್ರೇಕ್ಷಕರ ಮನಗೆದ್ದಿರುವ ಈ ನಟಿ, ಇತ್ತೀಚೆಗಷ್ಟೇ ತೆರೆಕಂಡ ಅನಿಮಲ್ ಸಿನಿಮಾದಲ್ಲಿ ಅದ್ಭುತ ಅಭಿನಯ ಮಾಡಿದ್ದರು. ಇನ್ನೊಂದೆಡೆ ಪುಷ್ಪ ಚಿತ್ರ ರಶ್ಮಿಕಾ ವೃತ್ತಿ ಬದುಕಿನಲ್ಲಿ ಮೈಲಿಗಲ್ಲಾಗಿ ಉಳಿಯಲಿದೆ. ರಶ್ಮಿಕಾ ಚಿತ್ರರಂಗಕ್ಕೆ ಕಾಲಿಟ್ಟ 6 ವರ್ಷಗಳಲ್ಲಿ ಹಲವು ಅತ್ಯುತ್ತಮ ಹಿಟ್ ಚಿತ್ರಗಳಲ್ಲಿ ನಟಿಸಿ ಯಶಸ್ವಿ ನಾಯಕಿಯಾಗಿದ್ದಾರೆ. ರಶ್ಮಿಕಾ ಕೇವಲ ಸಿನಿಮಾಗಳಲ್ಲಿ ಮಾತ್ರವಲ್ಲದೆ ತನ್ನ ವೈಯಕ್ತಿಕ ಜೀವನಕ್ಕೆ ಸಂಬಂಧಿಸಿದ ಕೆಲವು ವಿಷಯಗಳ ಬಗ್ಗೆಯೂ ಆಗಾಗ ಸುದ್ದಿಯಲ್ಲಿರುತ್ತಾರೆ. ರಶ್ಮಿಕಾ ಅಭಿನಯದ ಮೊದಲ ಚಿತ್ರ 'ಕಿರಿಕ್ ಪಾರ್ಟಿ' ಬ್ಲಾಕ್ ಬಸ್ಟರ್ ಸಕ್ಸಸ್ ಆಗಿತ್ತು. ಮೊದಲ ಸಿನಿಮಾದಿಂದಲೇ ಭಾರೀ ಸುದ್ದಿ ಮಾಡಿದ್ದರು ರಶ್ಮಿಕಾ.

ಆ ನಂತರ ಗೀತ ಗೋವಿಂದಂ ಚಿತ್ರದಲ್ಲಿ ಗುರುತಿಸಿಕೊಂಡು. ಪುಷ್ಪಾ ಚಿತ್ರದ ಯಶಸ್ಸಿನ ನಂತರ ಬಾಲಿವುಡ್ ಮೇಲೆ ಕಣ್ಣಿಟ್ಟ ಈ ಚೆಲುವೆ ಗುಡ್ ಬೈ ಚಿತ್ರದ ಮೂಲಕ ಹಿಂದಿಯಲ್ಲೂ ಪಾದಾರ್ಪಣೆ ಮಾಡಿದರು. ಭಾಷೆಯ ಬೇಧವಿಲ್ಲದೆ ಚಿತ್ರರಂಗದ ಟಾಪ್ ಹೀರೋಯಿನ್'ಗಳ ಪಟ್ಟಿಯಲ್ಲಿ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಳ್ಳುವಲ್ಲಿ ರಶ್ಮಿಕಾ ಬ್ಯುಸಿಯಾಗಿದ್ದಾರೆ.

ಅದರ ಹೊರತಾಗಿ, ವಿಜಯ್ ದೇವರಕೊಂಡ ಮತ್ತು ರಶ್ಮಿಕಾ ನಡುವೆ ಏನೋ ಇದೆ ಎಂಬ ವದಂತಿಯು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಲೇ ಇರುತ್ತದೆ. ಇನ್ನು, ಈ ವಿಚಾರದಲ್ಲಿ ಇಬ್ಬರಲ್ಲಿ ಯಾರು ಸ್ಪಷ್ಟನೆ ನೀಡಿಲ್ಲ.. ಅದೇನೇ ಇರಲಿ, ಇವರಿಬ್ಬರು ಒಂದಾಗುತ್ತಾರಾ ಎಂದು ಅಭಿಮಾನಿಗಳು ನಿರೀಕ್ಷಿಸುತ್ತಿದ್ದಾರೆ.

## ಮನೆಯಲ್ಲಿ ಜಿರಳೆ ಕಾಟವೇ




ಜಿರಳೆಗಳು ಅಡುಗೆಮನೆಯಲ್ಲಿ ಸಾಮಾನ್ಯ ಸಮಸ್ಯೆಯಾಗಿದೆ. ಬಹುತೇಕ ಎಲ್ಲರಿಗೂ ಮನೆಯಲ್ಲಿ ಸಮಸ್ಯೆ ಇರುತ್ತದೆ. ಜಿರಳೆ ಬಂದ ತಕ್ಷಣ ಮಾರುಕಟ್ಟೆಯಲ್ಲಿ ಸಿಗುವ ಸ್ಪ್ರೇಗಳನ್ನ ಖರೀದಿಸುತ್ತೇವೆ. ಆದರೆ ಅವುಗಳ ಬೆಲೆ ಹೆಚ್ಚು. ನಿತ್ಯವೂ ಹೀಗೆ ಹಣ ಕೊಟ್ಟು ಕೊಳ್ಳಲು ಆಗುವುದಿಲ್ಲ.

ಹಾಗಂತ, ಜಿರಳೆಗಳೂ ಹಾಗೆ ಬಿಡದ ಪರಿಸ್ಥಿತಿ. ಅಕಸ್ಮಾತ್ ನಾವು ತಿನ್ನುವ ಆಹಾರದ ಮೇಲೆ ಓಡಾಡಿದ್ರೆ, ನಾವು ಭಾರೀ ಬೆಲೆ ತೆರುತ್ತೇವೆ. ಹಾಗಿದ್ರೆ, ಜಿರಳೆಗಳನ್ನ ನೈಸರ್ಗಿಕವಾಗಿ ಹೋಗಲಾಡಿಸುವುದು ಹೇಗೆ ಎಂದು ತಿಳಿಯೋಣ.

ಲವಂಗ ಮತ್ತು ಬೇವಿನ ಎಣ್ಣೆಯಿಂದ ಮಾಡಿದ ವಸ್ತುವು ಜಿರಳೆಗಳನ್ನ ಹಿಮ್ಮೆಟ್ಟಿಸುತ್ತದೆ. ಇದಕ್ಕಾಗಿ ಮೊದಲು ಸ್ವಲ್ಪ ಲವಂಗವನ್ನ ತೆಗೆದುಕೊಂಡು ಮಿಕ್ಸಿಯಲ್ಲಿ ರುಬ್ಬಿಕೊಳ್ಳಿ. ನಂತರ ಅದರಲ್ಲಿ ಬೇವಿನ ಎಣ್ಣೆಯನ್ನು ಸುರಿಯಿರಿ. ಜಿರಳೆಗಳು ಬದಿಗೆ ಬರದಂತೆ ಜಿರಳೆಗಳು ಓಡಾಡುವ ಕಡೆ ಈ ಮಿಶ್ರಣವನ್ನ ಹಾಕಬೇಕು.

ಪುದೀನಾ ಎಣ್ಣೆ ಕೂಡ ಜಿರಳೆಗಳನ್ನು ಹಿಮ್ಮೆಟ್ಟಿಸುತ್ತದೆ. ಇದಕ್ಕಾಗಿ, ಪುದೀನಾ ಎಣ್ಣೆಯಲ್ಲಿ ಉಪ್ಪು ಮತ್ತು ನೀರನ್ನು ಸಿಂಪಡಿಸಬೇಕು. ಇದರಿಂದಾಗಿ ಜಿರಳೆಗಳು ಆ ಕಡೆ ಬರುವುದಿಲ್ಲ.

ಜಿರಳೆಗಳಿಗೆ ಸೀಮೆ ಎಣ್ಣೆಯ ವಾಸನೆಯೂ ಇಷ್ಟವಾಗುವುದಿಲ್ಲ. ಜಿರಳೆಗಳು ಹೆಚ್ಚು ಇರುವ ಕಡೆ ಸ್ವಲ್ಪ ಸೀಮೆಎಣ್ಣೆ ಸಿಂಪಡಿಸಿ ಇದರಿಂದ ಜಿರಳೆಗಳು ಓಡಿಹೋಗುತ್ತವೆ.

ಜಿರಳೆಗಳನ್ನ ಹಿಮ್ಮೆಟ್ಟಿಸಲು ಅಡುಗೆ ಸೋಡಾದಲ್ಲಿ ಸ್ವಲ್ಪ ಸಕ್ಕರೆಯನ್ನ ಬೆರೆಸಿ ಜಿರಳೆಗಳು ಬರುವ ಜಾಗಕ್ಕೆ ಹಾಕಿ.

ದಾಲ್ಚಿನ್ನಿ ಕಡ್ಡಿಯನ್ನ ಚಿಕ್ಕದಾಗಿ ಕತ್ತರಿಸಿ ಅಲ್ಲಿ ಇಲ್ಲಿ ಹರಡಿ. ಈ ವಾಸನೆ ಕೂಡ ಜಿರಲೆಯ ಇನ್ನೊಂದು ಬದಿಯನ್ನು ತಲುಪುವುದಿಲ್ಲ. ಪುದೀನ ಎಲೆಗಳು ಸಹ ಜಿರಳೆಗಳನ್ನ ಹಿಮ್ಮೆಟ್ಟಿಸುತ್ತದೆ.

ಈ ಮಧ್ಯೆ ಜಿರಳೆಗಳು ಬರಲು ಮುಖ್ಯ ಕಾರಣವೆಂದರೆ ಅಡುಗೆಮನೆಯ ಸಿಂಕ್ನಲ್ಲಿ ಬಿರುಕುಗಳು, ಆದ್ದರಿಂದ ಅವುಗಳನ್ನ ಬಿಳಿ ಸಿಮೆಂಟ್ನಿಂದ ತುಂಬಿಸಬೇಕು.ಯಾಕಂದ್ರೆ, ಈ ಬಿರುಕುಗಳಲ್ಲಿ ಜಿರಳೆಗಳು ಮೊಟ್ಟೆ ಇಡುತ್ತವೆ.

## ಕೆಆರ್‌ಎಸ್ ಹಿನ್ನೀರಿನ ಭವ್ಯ ನವ್ಯ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ ದರ್ಶನ





ನಾವು ಮೈಸೂರಿನ ಹೂಟಗಳ್ಳಿಯಿಂದ 12 ಗಂಟೆಗೆ ಹೊರಟು ಬೆಳಗೊಳ ಮಾರ್ಗ ಸಾಗಿ ಕೆ.ಆರ್.ಎಸ್. ತಲುಪಿದಾಗ 1 ಗಂಟೆ ಆಗಿತ್ತು. ಬೃಂದಾವನ ಉದ್ಯಾವನದಿಂದ ರಸ್ತೆಯ ಮೂಲಕ 9 ಕಿ.ಮೀ.ದೂರದ ಹೊಸ ಕನ್ನಂಬಾಡಿಯನ್ನು ತಲುಪಿದೆವು. ಮುಖ್ಯ ರಸ್ತೆಯಿಂದ ಒಳ ಹಾದಿಯಲ್ಲಿ ಸುಮಾರು 2 ಕಿ.ಮೀ. ಕಚ್ಚಾ ಕಲ್ಲು ಮಣ್ಣು ರಸ್ತೆಯಲ್ಲಿ ಸಾಗಿ ನೂತನ ವೇಣುಗೋಪಾಲಸ್ವಾಮಿ ದೇವಾಲಯ ಸಮೀಪಿಸಿದೆವು. ದೇವಾಲಯದ ಮುಂಭಾಗ ವಿಶಾಲ ಬಯಲು ಪ್ರದೇಶದಲ್ಲಿ ಬಸ್ಸು ಕಾರು ಬೈಕುಗಳ ನಿಲ್ಲಿಸಲು ಸ್ಥಳಾವಕಾಶ ಚೆನ್ನಾಗಿದೆ. ಆದರೆ ಮುಖ್ಯ ರಸ್ತೆಯಿಂದ ದೇವಸ್ಥಾನದವರೆಗೆ ಟಾರ್ ರಸ್ತೆ ಆಗಿಲ್ಲದಿರುವುದು ಕಾರು ಓಡಿಸುವ ಮಾಲೀಕರಿಗೆ ಟೈರ್ ಪಂಕ್ಚರ್ ಆದರೆ ಎಂಬ ಭಯ ಕಾಡುವುದು ಖರೆ. ಇಲ್ಲಿಗೆ ಬಂದು ಹೋಗಬೇಕಾದರೆ ಸಾಮಾನ್ಯ ಪ್ರವಾಸಿಗರು ಮುಖ್ಯ ರಸ್ತೆಯಿಂದ ಪಾದಯಾತ್ರೆ ಮಾಡಬೇಕಿದೆ. ನಾನು 15 ವರ್ಷಗಳ ಹಿಂದೆ ಪ್ರಕಟಿಸಿದ 'ಕಾವೇರಿ ನದಿಯ ದಡದಲಿ' ಎಂಬ ಕೃತಿಯಲ್ಲಿ ಕೆಆರ್‌ಎಸ್ ಜಲಾಶಯದಲ್ಲಿ ಮುಳುಗಡೆಯಾದ ಕನ್ನಂಬಾಡಿ ಊರು ಮತ್ತು ದೇವಾಲಯಗಳ ಕುರಿತ್ತಾಗಿ ಒಂದಿಷ್ಟು ಮಾಹಿತಿ ಸಂಗ್ರಹಿಸಿ ಬರೆದಿದ್ದೆನು.

ಕೃಷ್ಣರಾಜಸಾಗರ ಜಲಾಶಯದಲ್ಲಿ ನೀರು ಅತ್ಯಂತ ಕಡಿಮೆಯಾದಾಗ ಕಂಡುಬರುತ್ತಿದ್ದ ಶ್ರೀ ವೇಣು ಗೋಪಾಲಸ್ವಾಮಿ ದೇವಸ್ಥಾನ ಹೊಯ್ಸಳ ವಾಸ್ತುಶಿಲ್ಪವನ್ನು ಒಳಗೊಂಡಿದ್ದು ವಿಜಯನಗರ ಕಾಲದಲ್ಲಿ ಪ್ರವರ್ಧಮಾನಕ್ಕೆ ಬಂದಿದೆ. ಕನ್ನಂಬಾಡಿ ಗ್ರಾಮದಲ್ಲಿ ಮಹಾಲಕ್ಷ್ಮಿ ಮತ್ತು ಹಿರಿದೇವಿ ಎಂಬ ದೇವಾಲಯಗಳು ಇದ್ದವು. ಈ ಮೂರು ದೇವಾಲಯಗಳಲ್ಲೂ ಶಾಸನಗಳಿವೆ. ಮಹಾಲಕ್ಷ್ಮಿ ದೇವಾಲಯದ ಧ್ವಜಸ್ತಂಭದ ಮೇಲೆ ಇರುವ ಶಾಸನದಲ್ಲಿ ಮಹಾಲಕ್ಷ್ಮಿಯ ಭಕ್ತ ಅಣ್ಣಯ್ಯನ ಮಗ ಶಿವನಂಜಯ್ಯ ಕನ್ನಂಬಾಡಿಯ ದೇವಾಲಯ ಧ್ವಜಸ್ತಂಭಕ್ಕೆ 8 ಮಣ ತೂಕದ ಹಿತ್ತಾಳೆ ಕವಚವನ್ನು ದಾನವಾಗಿ ನೀಡಿರುವುದಾಗಿ ಹೇಳಲಾಗಿದೆ. ಯಾಗ ಶಾಲೆ ಮಂಟಪದ ದಕ್ಷಿಣದಲ್ಲಿ ಇರುವ ಮತ್ತೊಂದು ಶಾಸನದಲ್ಲಿ ದೇವಾಲಯದ ಮಹಾಮಂಟಪ ಮತ್ತು ರಂಗಮಂಟಪವನ್ನು ಹೆಂಗಸೊಬ್ಬಳು ಜೀರ್ಣೋದ್ಧಾರ ಮಾಡಿಸಿರುವುದು ತಿಳಿಯುತ್ತದೆ. ಕನ್ನಂಬಾಡಿಯು ಮುಳಗುಡೆಯಾಗುವುದಕ್ಕೆ ಮುಂಚೆ 6 ಅಡಿ ಎತ್ತರದ ಗೋಪಾಲಕೃಷ್ಣಸ್ವಾಮಿ ವಿಗ್ರಹ, ಅಳ್ವಾರ್‌ಗಳು, ಸರಸ್ವತಿ, ಗಣಪತಿ, ಉಮಾಮಹೇಶ್ವರಿ, ಮಹಿಷಾಸುರ ಮರ್ಧಿನಿ ಮೊದಲಾದ ವಿಗ್ರಹಗಳನ್ನು ಸ್ಥಳಾಂತರಿಸಿ ನಾರ್ತ್ ಬ್ಯಾಂಕ್ ಸ್ಥಳದಲ್ಲಿ ಸ್ಥಾಪಿಸಿರುವ ನೂತನ ಗೋಪಾಲಸ್ವಾಮಿ ದೇವಾಲಯದಲ್ಲಿರಿಸಲಾಗಿದೆ.

ಇಲ್ಲಿ ಕಣ್ವ ಋಷಿಗಳು ತಪಸ್ಸು ಮಾಡಿದ ಪ್ರತೀತಿ ಇದೆ. ಅವರ ತಪೋಶಕ್ತಿಯಿಂದ ಕಣ್ಣೇಶ್ವರ ದೇವಸ್ಥಾನ ಉಗಮವಾಯಿತೆಂದು ಹೇಳಲಾಗಿದೆ. ಕನ್ನಂಬಾಡಿಯ ಈಶ್ವರ ದೇವಸ್ಥಾನವನ್ನು ಗಂಗರ ಕಾಲದಲ್ಲಿಯೂ, ವೇಣುಗೋಪಾಲಸ್ವಾಮಿ ದೇವಾಲಯವನ್ನು ರಾಷ್ಟ್ರಕೂಟರ ಕಾಲದಲ್ಲಿ ಕಟ್ಟಲಾಯಿತೆಂದು ಶಾಸನಗಳಿಂದ ತಿಳಿಯುತ್ತದೆ. ಇಲ್ಲಿನ ದೇವಸ್ಥಾನಗಳನ್ನು ಪ್ರಸಿದ್ಧಿಗೆ ತಂದವರೆಂದರೆ ಹೊಯ್ಸಳ ದೊರೆ ವಿಷ್ಣುವರ್ಧನ ನಂತರ ಮೈಸೂರು ಅರಸರ ಆಳ್ವಿಕೆಗೆ ಒಳಪಟ್ಟಾಗ ಏಳೆಂಟು ಕಲ್ಯಾಣಿಗಳನ್ನು ಕಟ್ಟಿಸಿ ಬ್ರಾಹ್ಮಣರಿಗೆ ಅಗ್ರಹಾರಗಳನ್ನು ನಿರ್ಮಾಣ ಮಾಡಲಾಯಿತು. ಈ ಕಲ್ಯಾಣಿಗಳು ಕನ್ನಂಬಾಡಿ ಗ್ರಾಮದ ಈಶಾನ್ಯ ದಿಕ್ಕಿನಲ್ಲಿವೆ. 40 ಅಡಿ ಚೌಕಾಕಾರದ ಕಲ್ಯಾಣಿಗಳಿಗೆ ಇಳಿಯಲು ಎಲ್ಲಾ ದಿಕ್ಕಿನಿಂದಲೂ ಸಾಧ್ಯವಿದೆ. ಊರ ದೇವಾಲಯವೊಂದರ ಅವಶೇಷ ದಕ್ಷಿಣ ದಿಕ್ಕಿನಲ್ಲಿದೆ. ಅದರ ಕುರುಹು ಅಲ್ಲಿ ಉಳಿದಿಲ್ಲ. ಅಲ್ಲಿಂದ ನೂರು ಅಡಿ ಮುಂದೆ ತಗ್ಗಿನಲ್ಲಿರುವುದೇ ಗೋಪಾಲಕೃಷ್ಣ ದೇವಾಲಯ. ದೇವಾಲಯ ಹಿಂಭಾಗ ಮತ್ತು ಎಡಭಾಗಗಳ ಪಾಳಿಯ ಮುಂಭಾಗದಲ್ಲಿ ಮುಖಮಂಟಪ ಆಕರ್ಷಿಸುತ್ತದೆ. ದೇವಾಲಯದ ಪ್ರವೇಶದ್ವಾರದ ಮುಂಭಾಗದಲ್ಲಿ ಇನ್ನೊಂದು ಮಂಟಪವಿದೆ. ಗೋಪಾಲಸ್ವಾಮಿ ದೇವಸ್ಥಾನ 2 ಎಕರೆ ಜಾಗದಲ್ಲಿ ವಿಶಾಲವಾಗಿ ಕಟ್ಟಲ್ಪಟ್ಟಿದೆ. ನಾಲ್ಕು ಕಡೆ ಉದ್ದನೆಯ ಪಡಸಾಲೆಯಿಂದ ಕೂಡಿದೆ. ಈ ಪಡಸಾಲೆಯಲ್ಲಿಯೂ 101 ಶಿವಲಿಂಗಗಳನ್ನು ಸ್ಥಾಪಿಸಿ ಮಂಟಪದ ಮಧ್ಯದಲ್ಲಿ ಶಿವಲಿಂಗವನ್ನು ಸ್ಥಾಪಿಸಿರುವುದು ಕಂಡುಬಂದರೂ ಕೂಡ ಅಲ್ಲಿ ಈಗಿರುವುದು ಕೇವಲ ಬೋಳು ಗುಡಿಗಳು. ನಾರಾಯಣನ ಅವತಾರಗಳನ್ನು ಇಲ್ಲಿ ಚಿತ್ರಿಸಿ ದೇವಸ್ಥಾನದ ಅಂದಕ್ಕೆ ಮೆರಗು ಕೊಟ್ಟಿದ್ದು ಇತಿಹಾಸ. 1909ರಲ್ಲಿ ಸರ್ ಎಂ. ವಿಶ್ವೇಶ್ವರಯ್ಯನವರು ಕೃಷ್ಣರಾಜಸಾಗರ ಅಣೆಕಟ್ಟು ಯೋಜನೆ ರೂಪಿಸುವ ಮೊದಲು ಈ ದೇವಸ್ಥಾನವು ಮುಳುಗಡೆಯಾದ ಹಳೇ ಕನ್ನಂಬಾಡಿ ಗ್ರಾಮದಲ್ಲಿತ್ತು. ಕೆ.ಆರ್.ಎಸ್. ಅಣೆಕಟ್ಟು ಯೋಜನೆಯಿಂದ ಕನ್ನಂಬಾಡಿ ನಿವಾಸಿಗಳಿಗೆ ಹೊಸ ಗ್ರಾಮವನ್ನು ನಿರ್ಮಿಸಿ ಅದಕ್ಕೆ ಹೊಸ ಕನ್ನಂಬಾಡಿ ಎಂದು ಹೆಸರಿಡಲಾಗಿದೆ. ವೇಣುಗೋಪಾಲಸ್ವಾಮಿ ದೇವಾಲಯದ ಸಂಕೀರ್ಣ ಕನ್ನೇಶ್ವರ (ಈಶ್ವರ) ದೇವಾಲಯ ಮತ್ತು ಕಾಳಮ್ಮ ದೇವಾಲಯಗಳನ್ನು ಸ್ಥಳಾಂತರಿಸದೇ ಹಾಗೆಯೇ ಬಿಡಲಾಗಿತು. 1930ರ ಹೊತ್ತಿಗೆ ಅಣೆಕಟ್ಟೆಯ ಮೊದಲ ಹಂತ ಪೂರ್ಣವಾಗಿ ಈ ಮೂರೂ ದೇವಾಲಯಗಳು ಮುಳುಗಿದವು. ವೇಣುಗೋಪಾಲಸ್ವಾಮಿಯ ಪ್ರಮುಖ ವಿಗ್ರಹ ಕೊಳಲು ನುಡಿಸುತ್ತಿರುವ ಶ್ರೀ ಕೃಷ್ಣನ ವಿಗ್ರಹವನ್ನು ಮುಳುಗಡೆಗೆ ಮುನ್ನ ಪುನರ್ವಸತಿ ಗ್ರಾಮದ ಹೊಸ ದೇವಾಲಯಕ್ಕೆ ಸ್ಥಳಾಂತರಿಸಲಾಯಿತು. ದೇವಾಲಯ ಸಂಕೀರ್ಣವು 2 ಪ್ರಕಾರಗಳಿಂದ ಸುತ್ತುವರಿದ ಸಮ್ಮಿತಿಯ ಕಟ್ಟಡವಾಗಿತ್ತು. ಮಹಾದ್ವಾರದ ಎರಡೂ ಬದಿಗಳಲ್ಲಿ ಜಗುಲಿಗಳನ್ನು ಹೊಂದಿತ್ತು. ಯಾಗ ಶಾಲೆ ಅಡುಗೆ ಮನೆ ಒಳಗೊಂಡಿತ್ತು. ಇದು 2 ಮಹಾದ್ವಾರದಿಂದ ಸುತ್ತುವರಿದಿತ್ತು. ಇದು ಸೋಮನಾಥಪುರ ದೇವಸ್ಥಾನಕ್ಕೆ ಹೋಲುವ ಹೊಯ್ಸಳ ವಾಸ್ತು ಶಿಲ್ಪಕ್ಕೆ ಉದಾಹರಣೆಯಾಗಿದೆ. ಈ ದೇವಾಲಯವನ್ನು ಕ್ರಿ.ಶ.12ನೇ ಶತಮಾನದಲ್ಲಿ ಸೋಮನಾಥಪುರದ ಚನ್ನಕೇಶವ ದೇವಸ್ಥಾನ ನಿರ್ಮಾಣ ಕಾಲದಲ್ಲಿ ನಿರ್ಮಿಸಲಾಗಿತ್ತು. 1909ರಲ್ಲಿ ಕೆ.ಆರ್.ಎಸ್. ಅಣೆಕಟ್ಟು ನಿರ್ಮಾಣ ಪ್ರಾರಂಭವಾಗಿ 1930ರ ಹೊತ್ತಿಗೆ ಕನ್ನಂಬಾಡಿ ಗ್ರಾಮವು ಸಂಪೂರ್ಣ ಮುಳುಗಡೆ ಆಯಿತು. ಜಲಾಶಯದಲ್ಲಿ ನೀರಿನ ಮಟ್ಟವು ಕಡಿಮೆ ಆದಾಗ ದೇವಾಲಯ ಕಾಣಿಸುತ್ತಿತ್ತು. 2000ರಲ್ಲಿ ತೀರಾ ನೀರು ಕಡಿಮೆಯಾಗಿ ಇದು ಸ್ಪಷ್ಟವಾಗಿ ಗೋಚರಿಸಿತು. ಆಗ ಪತ್ರಿಕೆಗಳಲ್ಲಿ ಪ್ರಕಟವಾಗಿದ್ದ ವರದಿ ಓದಿದ್ದು ನೆನಪಾಯಿತು. ಈ ಕಲಾ ದೇವಾಲಯವು 70 ವರ್ಷಗಳಿಗೂ ಹೆಚ್ಚು ಕಲಾ ನೀರಿನ ಅಡಿಯಲ್ಲಿತ್ತು. ಉದ್ಯಮಿ ಶ್ರೀ ಹರಿಖೋಡೆ ಅವರ ಮಾರ್ಗದರ್ಶನದಲ್ಲಿ ಖೋಡೆ ಪ್ರತಿಷ್ಠಾನವು ದೇವಾಲಯವನ್ನು ಸ್ಥಳಾಂತರಿಸುವ ಮತ್ತು ಪುನ: ಸ್ಥಾಪಿಸುವ ಕಾರ್ಯ ಕೈಗೆತ್ತಿಕೊಂಡು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಯೋಜನೆಯ ವೆಚ್ಚ 2.50 ಕೋಟಿ ಎಂದು ಅಂದಾಜು. ಹೊಸ ನಿವೇಶನವು ಮೂಲ ನಿವೇಶನದ ಉತ್ತರಕ್ಕೆ ಸುಮಾರು ಒಂದು ಕಿ.ಮೀ. ದೂರದಲ್ಲಿದೆ. ಕೆ.ಆರ್.ಎಸ್.ನ ನೀರಿನ ಗರಿಷ್ಠ ಮಟ್ಟ 124.80 ಅಡಿ ತಲುಪಿದರೆ ಹಿನ್ನೀರು ದೇವಾಲಯದ ಹೊರಗೋಡೆಯನ್ನು ಸ್ಪರ್ಶಿಸುತ್ತದೆ. ವಾಸ್ತು ಶಿಲ್ಪಿಗಳು ಮೂಲ ದೇವಾಲಯವನ್ನು ವಿಡಿಯೋದಲ್ಲಿ ಚಿತ್ರೀಕರಿಸಿ 16000 ಫೋಟೋ ತೆಗೆದು ಮೂಲ ದೇವಾಲಯದ ನಿರ್ಮಾಣದಲ್ಲಿ ಬಳಸಲಾದ ಪ್ರತಿಯೊಂದು ಚಪ್ಪಡಿಯನ್ನು ಗುರುತಿಸಿ ನಂಬರ್ ಮಾರ್ಕ್ ಮಾಡಲಾಯಿತು. ತರಭೇತಿ ಪಡೆದ ಕುಶಲಕರ್ಮಿಗಳು ಮತ್ತು ಶಿಲ್ಪಿಗಳೊಂದಿಗೆ ಹೊಸ ಕನ್ನಂಬಾಡಿಯಲ್ಲಿ ಪ್ರತಿಯೊಂದು ಹಳೆಯ ದೇವಾಲಯದ ಕಲ್ಲುಗಳನ್ನು ತೆಗೆದು ಪಾಲಿಶ್ ಮಾಡಿ ಹೊಸ ಪಾಲಿಶ್ ಕಲ್ಲುಗಳನ್ನು ಒಳಗೊಂಡು ನೂತನ ದೇವಾಲಯವನ್ನು ಭವ್ಯವಾಗಿ ನಿರ್ಮಿಸಲಾಗಿದೆ.

**। ಗೊರೂರು ಅನಂತರಾಜು ಹಾಸನ**

## ಚರ್ಮದ ರಕ್ಷಣೆಗೆ ಬೆಲ್ಲ ಬಳಸಿ

### ಬ್ಯೂಟಿ ಟಿಪ್ಸ್



ಬೆಲ್ಲ ಆಯಂಟಿ ಆಕ್ಸಿಡೆಂಟ್ , ಸತು ಮತ್ತು ಸೆಲೆನಿಯಂನಂತಹ ಖನಿಜಗಳಿಂದ ತುಂಬಿರುತ್ತದೆ. ಇದು ಅಕಾಲಿಕ ವಯಸ್ಸಾಗುವಿಕೆಗೆ ಕಾರಣವಾಗುವ ಅಂಶಗಳ ವಿರುದ್ಧ ಹೋರಾಡುತ್ತದೆ. ಹಾಗಾಗಿ ಚರ್ಮದ ರಕ್ಷಣೆಗೆ ಬೆಲ್ಲವನ್ನು ಬಳಸುವ ವಿಧಾನ ಇಲ್ಲಿದೆ. ಜೀರ್ಣಕ್ರಿಯೆ, ದೇಹದ ಚಯಾಪಚಯ ಕ್ರಿಯೆಯನ್ನು ಸುಧಾರಿಸಲು ಮತ್ತು ದೇಹದ ವಿಷವನ್ನು ತೆಗೆದು ಹಾಕಲು ಊಟದ ಬಳಿಕ ಪ್ರತಿದಿನ ಬೆಲ್ಲ ತಿನ್ನಲು ತಜ್ಞರು ಶಿಫಾರಸು ಮಾಡುತ್ತಾರೆ. ಸಣ್ಣ ತುಂಡು ಬೆಲ್ಲ ನಿಯಮಿತವಾಗಿ ಸೇವಿಸುವುದರಿಂದ ನಿಮ್ಮ ಚರ್ಮದ ಮೇಲೆ ರೇಖೆಗಳು, ಸುಕ್ಕುಗಳು ಅಥವಾ ಕಲೆಗಳನ್ನು ಕಡಿಮೆ ಮಾಡುತ್ತದೆ. 2 ಚಮಚ ಜೇನುತುಪ್ಪ, 1 ಚಮಚ ನಿಂಬೆ ರಸ ಮತ್ತು 2 ಚಮಚ ಬೆಲ್ಲವನ್ನು ತೆಗೆದುಕೊಂಡು ಚೆನ್ನಾಗಿ ಮಿಕ್ಸ್ ಮಾಡಿ ಮುಖಕ್ಕೆ ಹಚ್ಚಿ 10 ನಿಮಿಷಗಳ ಕಾಲ ಮಸಾಜ್ ಮಾಡಿ. ಬಳಿಕ ತಣ್ಣೀರಿನಿಂದ ತೊಳೆಯಿರಿ. 1 ಚಮಚ ಬೆಲ್ಲದ ಪುಡಿಗೆ ಟೊಮೆಟೊ ರಸವನ್ನು ಬೆರೆಸಿ ಕೆಲವು ಹನಿ ನಿಂಬೆ ರಸ ಮತ್ತು ಅರಶಿನ ಪುಡಿಯನ್ನು ಮಿಕ್ಸ್ ಮಾಡಿ ಮುಖಕ್ಕೆ ಹಚ್ಚಿ 15 ನಿಮಿಷಗಳ ಬಳಿಕ ತಣ್ಣೀರಿನಿಂದ ವಾಶ್ ಮಾಡಿ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆತುರ, ದುಡುಕು ಸ್ವಭಾವ, ಸಂಶಯ, ಆತಂಕ, ಗೊಂದಲ, ಆರ್ಥಿಕ ಚಿಂತೆ ಕಾಡುವುದು, ಪಾಲುದಾರಿಕೆಯಲ್ಲಿ ಅನಾನುಕೂಲ

**ವೃಷಭ:** ಅಧಿಕ ಖರ್ಚು, ವ್ಯವಹಾರದಲ್ಲಿ ಅನಾನುಕೂಲ, ಮೋಜು ಮಸ್ತಿಗಳಿಂದ ನಷ್ಟ, ಬಂಧು ಬಾಂಧವರಿಂದ ಮೋಸ

**ಮಿಥುನ:** ಮಕ್ಕಳಿಂದ ಸಮಸ್ಯೆ, ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ, ಗೃಹ ನಿರ್ಮಾಣ, ಹೊಸ ವಸ್ತು ಖರೀದಿಯಲ್ಲಿ ಸಮಸ್ಯೆ

**ಕಟಕ:** ಮಾಟ ಮಂತ್ರ ತಂತ್ರದ ಆತಂಕ, ಉದ್ಯೋಗದಲ್ಲಿ ಪ್ರಗತಿ, ಸ್ವಯಂಕೃತ ಅಪರಾಧಗಳು, ಸ್ಥಿರಾಸ್ತಿ ವಿಷಯದಲ್ಲಿ ಆತಂಕ

**ಸಿಂಹ:** ಉದ್ಯೋಗ ಬದಲಾವಣೆ ಮನಸ್ಸು, ಪ್ರಯಾಣದಲ್ಲಿ ಅನುಕೂಲ, ತಂದೆಯಿಂದ ಸಹಕಾರ, ಅಧಿಕ ಖರ್ಚು

**ಕನ್ಯಾ:** ಸಣ್ಣಪುಟ್ಟ ಪೆಟ್ಟು, ಪ್ರಯಾಣದಲ್ಲಿ ವಿಘ್ನ, ಕೋರ್ಟ್ ಕೇಸುಗಳ ಚಿಂತೆ, ಮಿತ್ರರೊಂದಿಗೆ ಕಿರಿಕಿರಿ

**ತುಲಾ:** ಲಾಭದ ಪ್ರಮಾಣ ಕುಂಠಿತ, ಆಕಸ್ಮಿಕ ಅವಘಡ, ದಾಂಪತ್ಯ ಕಲಹ, ಅಧಿಕ ದುಂದು ವೆಚ್ಚ

**ವೃಶ್ಚಿಕ:** ಅನಾರೋಗ್ಯ ಸಮಸ್ಯೆ, ಸಂಗಾತಿಯಿಂದ ಲಾಭ, ತಂದೆ ಆರೋಗ್ಯದಲ್ಲಿ ವ್ಯತ್ಯಾಸ, ಪ್ರಯಾಣದಲ್ಲಿ ಅನಾನುಕೂಲ

**ಧನಸ್ಸು:** ಅವಮಾನ, ಅಪನಿಂದನೆ, ಶತ್ರು ಕಾಟ, ಸಾಲದ ಚಿಂತೆ, ಮಕ್ಕಳ ನಡವಳಿಕೆಯಿಂದ ಬೇಸರ, ಲಾಭ ಪ್ರಮಾಣದಲ್ಲಿ ಕುಂಠಿತ

**ಮಕರ:** ಅವಕಾಶ ಕೈ ತಪ್ಪುವುದು, ಪ್ರೀತಿ ಪ್ರೇಮದ ವಿಷಯಗಳಿಂದ ಅಂತರ, ಉದ್ಯೋಗದಲ್ಲಿ ಹಿನ್ನಡೆ, ಪ್ರಯಾಣದಲ್ಲಿ ಅನಾನುಕೂಲ

**ಕುಂಭ:** ಆರೋಗ್ಯದಲ್ಲಿ ವ್ಯತ್ಯಾಸ, ಸ್ವಯಂಕೃತ ಅಪರಾಧ, ಉದ್ಯೋಗದಲ್ಲಿ ಪ್ರಗತಿ, ಆರ್ಥಿಕವಾಗಿ ಚೇತರಿಕೆ

**ಮೀನ:** ಮಾತಿನಿಂದ ಸಮಸ್ಯೆ, ದಾಯಾದಿಗಳೊಂದಿಗೆ ಕಲಹ, ಮಕ್ಕಳ ಜೀವನದ ಚಿಂತೆ, ಅನಿರೀಕ್ಷಿತ ಧನಾಗಮನ

## ಅಂತಾರಾಷ್ಟ್ರೀಯ ಫೈರ್‌ವಾಕ್ ದಿನ

ಅಂತರರಾಷ್ಟ್ರೀಯ ಫೈರ್‌ವಾಕ್ ದಿನವು ಪ್ರತಿ ವರ್ಷ ಏಪ್ರಿಲ್ನ ಮೊದಲ ಶನಿವಾರದಂದು ನಡೆಯುತ್ತದೆ ಮತ್ತು ಈ ವರ್ಷ ಇದು ಏಪ್ರಿಲ್ 6 ರಂದು ಬಂದಿದೆ. ಪ್ರಪಂಚದಾದ್ಯಂತ ಜನರು ಫೈರ್ವಾಕ್ಗಳು ಎಂದು ಕರೆಯಲ್ಪಡುವ ಚಟುವಟಿಕೆಗಳಲ್ಲಿ ಭಾಗವಹಿಸುತ್ತಾರೆ, ಇದನ್ನು ಸರಳವಾಗಿ ಹೇಳುವುದಾದರೆ, ಬರಿಗಾಲಿನ ಮೇಲೆ ಬರಿಗಾಲಿನಲ್ಲಿ ಸುತ್ತುವುದನ್ನು ಒಳಗೊಂಡಿರುತ್ತದೆ. ಬಿಸಿ ಕಲ್ಲುಗಳು ಅಥವಾ ಎಂಬರ್ಗಳ ಹಾಸಿಗೆ. ವ್ಯಕ್ತಿಯ ಧೈರ್ಯ ಮತ್ತು ಮಾನಸಿಕ ದೃಢತೆಯ ಪರೀಕ್ಷೆಯಾಗಿ ಅಥವಾ ಧಾರ್ಮಿಕ ಸಂದರ್ಭಗಳಲ್ಲಿ ಒಬ್ಬರ ನಂಬಿಕೆಯ ಪುರಾವೆಯಾಗಿ ಈ ಆಚರಣೆಯನ್ನು ಆಗಾಗ್ಗೆ ಅಂಗೀಕಾರದ ವಿಧಿಯಂತೆ ನಡೆಸಲಾಗುತ್ತದೆ. ಫೈರ್ವಾಕಿಂಗ್ನಂತಹ ತೀವ್ರವಾದ ಸಾಮೂಹಿಕ ಘಟನೆಗಳ ಜನಪ್ರಿಯತೆಯು ಸಾಮಾಜಿಕೀಕರಣವನ್ನು ಉತ್ತೇಜಿಸುವ ಕಾರಣದಿಂದ ಬೆಳೆಯುತ್ತಲೇ ಇದೆ ಎಂದು ಸಾಮಾಜಿಕ ಸಿದ್ಧಾಂತಿಗಳು ವಾದಿಸಿದ್ದಾರೆ. ಅವರು ತರುವ ಸಾಮಾಜಿಕ ಒಗ್ಗಟ್ಟು ಮತ್ತು ತಂಡದ ನಿರ್ಮಾಣವು ಅವರನ್ನು ಪ್ರಪಂಚದಾದ್ಯಂತ ಮೆಚ್ಚಿನವರನ್ನಾಗಿ ಮಾಡುತ್ತದೆ. ಫೈರ್ವಾಕಿಂಗ್ನಲ್ಲಿ ತೊಡಗಿಸಿಕೊಳ್ಳಲು ಕಾರಣಗಳು ಏನೇ ಇರಲಿ, ಈ ಶಿಸ್ತು ಜನರ ಭಾವನೆಗಳು ಮತ್ತು ಕಲ್ಪನೆಗಳನ್ನು ಸೆರೆಹಿಡಿದಿದೆ ಮತ್ತು ಇಲ್ಲಿ ಉಳಿಯಲು ಇದೆ ಎಂಬುದು ಸ್ಪಷ್ಟವಾಗಿದೆ. ಬೆಂಕಿಯ ಮೇಲೆ ನಡೆಯುವ ಅಭ್ಯಾಸವು ಹಲವಾರು ಸಾವಿರ ವರ್ಷಗಳಿಂದ ಅಸ್ತಿತ್ವದಲ್ಲಿದೆ. ಜನರು ರಹಸ್ಯ ಸಮಾಜಗಳು ಅಥವಾ ಪ್ರೌಢಾವಸ್ಥೆಯಲ್ಲಿ ದೀಕ್ಷೆಗಾಗಿ, ನಂಬಿಕೆಯ ಆಚರಣೆಗಳ ಮೂಲಕ ಗುಣಪಡಿಸುವಿಕೆಯನ್ನು ಉತ್ತೇಜಿಸಲು ಮತ್ತು ಅವರ ಧರ್ಮಗಳಿಗೆ ಭಕ್ತಿ ತೋರಿಸಲು ಇದನ್ನು ಮಾಡಿದರು. ಅಂತರರಾಷ್ಟ್ರೀಯ ಫೈರ್ವಾಕ್ ದಿನವು ಈ ಪುರಾತನ ಆಚರಣೆಗೆ ಗೌರವವನ್ನು ನೀಡುತ್ತದೆ ಮತ್ತು ಆಧುನಿಕ ಕಾಲದಲ್ಲಿ ತಮ್ಮ ಭಯವನ್ನು ಎದುರಿಸುವ ಸಾಧನವಾಗಿ ಅದನ್ನು ಸ್ವೀಕರಿಸಿದ ಜನರನ್ನು ಆಚರಿಸುತ್ತದೆ. ಜೊತೆಗೆ, ಈ ದಿನವು ಬೆಂಕಿಯ ಪರಿವರ್ತನಾ ಶಕ್ತಿಯ ಬಗ್ಗೆ ಜಾಗೃತಿ ಮೂಡಿಸುತ್ತದೆ.

2017 ರಲ್ಲಿ, ಪ್ರಪಂಚದಾದ್ಯಂತದ ಫೈರ್ವಾಕ್ ಬೋಧಕರು ಲಾಟ್ವಿಯಾದಲ್ಲಿ ಮೊದಲ ಫೈರ್ವಾಕ್ ಗ್ಯಾದರಿಂಗ್ಗಾಗಿ ಒಟ್ಟುಗೂಡಿದರು. ಏಪ್ರಿಲ್ನಲ್ಲಿ ಮೊದಲ ಶನಿವಾರವನ್ನು ಅಂತರರಾಷ್ಟ್ರೀಯ ಫೈರ್ವಾಕ್ ದಿನವನ್ನಾಗಿ ಆಯ್ಕೆ ಮಾಡಲಾಗಿದೆ ಏಕೆಂದರೆ ಅವರು ಅಭ್ಯಾಸವನ್ನು ಉತ್ತೇಜಿಸಲು ಮತ್ತು ಫೈರ್ವಾಕಿಂಗ್ ಸಮುದಾಯವನ್ನು ಮೀರಿ ಇತರರಿಗೆ ಲಭ್ಯವಾಗುವಂತೆ ಮಾಡಲು ಹೆಚ್ಚಿನದನ್ನು ಮಾಡಲು ಒತ್ತಾಯಿಸಿದರು. ಬೋಧಕರು ಈ ದಿನವನ್ನು ವಿಶ್ವಾದ್ಯಂತ ಬೆಂಕಿಯನ್ನು ಪ್ರಾರಂಭಿಸಲು, ವಿಶ್ವಾದ್ಯಂತ ಫೈರ್ವಾಕಿಂಗ್ ಆಂದೋಲನವನ್ನು ಆಚರಿಸಲು ಮತ್ತು ಮಾರ್ಗವನ್ನು ಅನುಸರಿಸಲು ಜನರನ್ನು ಪ್ರೋತ್ಸಾಹಿಸಲು ಒಂದು ಅವಕಾಶವೆಂದು ಪರಿಗಣಿಸಿದ್ದಾರೆ.ಅಂತರರಾಷ್ಟ್ರೀಯ ಫೈರ್ವಾಕ್ ದಿನವನ್ನು ಅಕ್ಟೋಬರ್ 2017 ರಲ್ಲಿ ಸ್ಟೀಫನ್ ಬ್ರೌನ್, ರೋಲ್ಫ್ ಮತ್ತು ಆಸಾ ಬೆಕ್ಮನ್ ಮತ್ತು ಮಾರ್ಟಿನ್ಸ್ ಮತ್ತು ಬೈಬಾ ವೆಕ್ವಾನಾಗ್ಸ್ ಸ್ಥಾಪಿಸಿದರು. ಟೋನಿ ರಾಬಿನ್ಸ್, ಪ್ರಸಿದ್ಧ ಪ್ರೇರಕ ಭಾಷಣಕಾರ, ಹೆಚ್ಚು ಮಾರಾಟವಾದ ಲೇಖಕ ಮತ್ತು ಜೀವನ ತರಬೇತುದಾರ, ಪಶ್ಚಿಮಕ್ಕೆ ಫೈರ್ವಾಕಿಂಗ್ ಅನ್ನು ತಂದ ವ್ಯಕ್ತಿ ಎಂದು ಪರಿಗಣಿಸಲಾಗಿದೆ.



# ಮೋದಿ ಗೆಲುವಿಗಾಗಿ ಮಸೀದಿಯಲ್ಲಿ ನಮಾಜ್

**ನವದೆಹಲಿ:** 2024ರ ಲೋಕಸಭಾ ಚುನಾವಣೆ ಕಾವು ದಿನದಿಂದ ದಿನಕ್ಕೆ ರಂಗೇರುತ್ತಿದೆ. ರಾಜಕೀಯ ನಾಯಕರ ಅಬ್ಬರದ ಪ್ರಚಾರ, ಮಠ – ಮಂದಿರ, ಮಸೀದಿಗಳಿಗೆ ಭೇಟಿ ಮುಂದುವರೆದಿದೆ. ತಮ್ಮ ನೆಚ್ಚಿನ ನಾಯಕರ ಗೆಲವಿಗಾಗಿ ವಿಶೇಷ ಪೂಜೆಗಳು ನಡೆಯುತ್ತಿವೆ.

2024ರ ಲೋಕಸಭೆ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ, ಮೋದಿ ಹಾಗೂ ಬಿಜೆಪಿ ಗೆಲುವು ಪಡೆಯಲಿ ಎಂದು ಮುಸ್ಲಿಂ ನಾಯಕರು ಮಸೀದಿಯಲ್ಲಿ ನಮಾಜ್ ಮಾಡಿದ್ದಾರೆ.

ಪ್ರಧಾನಿ ನರೇಂದ್ರ, ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಮುಸ್ಲಿಂ ವಿರೋಧಿ ಎಂದು ಪ್ರತಿಪಕ್ಷ ಕಾಂಗ್ರೆಸ್ ಸೇರಿದಂತೆ ಎಡಪಂಥಿಯರು ಆರೋಪಿಸುತ್ತಾರೆ. ಆದರೆ, ಇಲ್ಲಿ ಮುಸ್ಲಿಂ ನಾಯಕರೇ ಮೋದಿ ಗೆಲುವಿಗೆ ಪ್ರಾರ್ಥನ ಸಲ್ಲಿಸಿರುವುದು ವಿಶೇಷವಾಗಿದೆ.

ಈ ಪ್ರಾರ್ಥನೆ ನಡೆದಿರುವುದು ಎಲ್ಲಿ ಎಂಬುದು ನಿಖರವಾಗಿ ಮಾಹಿತಿ ಇಲ್ಲ. ಪ್ರಾರ್ಥನೆ ಸಂದರ್ಭದಲ್ಲಿ ಕೆಲವರು ಪ್ರಧಾನಿ ಮೋದಿಯ ಫೋಟೋಗಳನ್ನು ಹಿಡಿದುಕೊಂಡು ನಿಂತಿದ್ದಾರೆ. ಮೌಲ್ವಿಯು 2024ರ ಲೋಕಸಭೆ ಚುನಾವಣೆಯಲ್ಲಿ ಗೆಲುವು ಕರುಣಿಸಲಿ ಎಂದು ಅಲ್ಲಾನಲ್ಲಿ ಬೇಡಿಕೊಳ್ಳುತ್ತಿರುವುದು ವಿಡಿಯೋದಲ್ಲಿದೆ.

# ಮದರಸಾ ಶಿಕ್ಷಣ ಕಾಯ್ದೆ ಕುರಿತ ಅಲಹಾಬಾದ್ ಹೈಕೋರ್ಟ್ ತೀರ್ಪಿಗೆ ಸುಪ್ರೀಂ ತಡೆ



**ನವದೆಹಲಿ:** 'ಉತ್ತರಪ್ರದೇಶ ಮದರಸಾ ಶಿಕ್ಷಣ ಮಂಡಳಿ ಕಾಯ್ದೆ 2004'ಯು ಅಸಾಂವಿಧಾನಿಕವಾದುದು. ಇದು, ಜಾತ್ಯತೀತ ತತ್ವಗಳನ್ನು ಉಲ್ಲಂಘಿಸಿದೆ' ಎಂದು ಅಲಹಾಬಾದ್ ಹೈಕೋರ್ಟ್ ನೀಡಿದ್ದ ತೀರ್ಪಿಗೆ ಸುಪ್ರೀಂ ಕೋರ್ಟ್ ಇಂದು ತಡೆ ನೀಡಿದೆ.

ಮುಖ್ಯ ನ್ಯಾ. ಡಿ.ವೈ. ಚಂದ್ರಚೂಡ್ ಹಾಗೂ ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದೀವಾಲ, ಮನೋಜ್ ಮಿಶ್ರ ಅವರಿದ್ದ ನ್ಯಾಯಪೀಠವು ವಿಚಾರಣೆ ನಡೆಸಿತು.

ಮದರಸಾ ಶಿಕ್ಷಣ ಮಂಡಳಿ ಕಾಯ್ದೆ ಜಾರಿಗೊಳಿಸುವುದರಿಂದ ಜಾತ್ಯತೀತ ತತ್ವಗಳನ್ನು ಉಲ್ಲಂಘಿಸುತ್ತದೆ ಎಂಬ ಅಲಹಾಬಾದ್ ಹೈಕೋರ್ಟ್ನ ತೀರ್ಪು ಸರಿಯಲ್ಲ ಎಂದು ನ್ಯಾಯಪೀಠವು ಹೇಳಿದೆ. ವಿದ್ಯಾರ್ಥಿಗಳು ಮತ್ತು ಅವರ ಪೋಷಕರಿಗೆ ನಿರ್ದಿಷ್ಟ ಶಿಕ್ಷಣವನ್ನು ಆಯ್ಕೆ ಮಾಡುವ ಅಧಿಕಾರ ಇದ್ದೇ ಇರುತ್ತದೆ. ಹಾಗಾಗಿ ಹೈಕೋರ್ಟ್ನ ತೀರ್ಪು 17 ಲಕ್ಷ ವಿದ್ಯಾರ್ಥಿಗಳ ಶಿಕ್ಷಣ ಪಡೆಯುವ ಹಕ್ಕುಗಳು ಮೇಲೆ ಪರಿಣಾಮ ಬೀರುತ್ತದೆ ಎಂದು ಸುಪ್ರೀಂ ಕೋರ್ಟ್ ಪ್ರತಿಪಾದಿಸಿದೆ.

ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳುವಲ್ಲಿ ರಾಜ್ಯಗಳು ಕಾನೂನುಬದ್ಧ ಹಿತಾಸಕ್ತಿಗಳನ್ನು ಹೊಂದಿವೆ. ಈ ಉದ್ದೇಶಕ್ಕಾಗಿ ಕಾಯ್ದೆಯನ್ನು ಸಂಪೂರ್ಣ ರದ್ದುಗೊಳಿಸಬೇಕೇ ಎಂಬುದನ್ನು ಪರಿಗಣಿಸುವ ಅಗತ್ಯವಿದೆ ಎಂಬುದನ್ನು ಪರಿಗಣಿಸುವ ಅಗತ್ಯವಿದೆ ಎಂದು ಪೀಠ ಹೇಳಿದೆ.

# ಮೋದಿಯನ್ನು ಅಧಿಕಾರದಿಂದ ತೆಗೆದು ಹಾಕುವುದೇ ನಮ್ಮ ಗುರಿ: ಖರ್ಗೆ

**ನವದೆಹಲಿ:** ಲೋಕಸಭಾ ಚುನಾವಣೆಯ ಪ್ರಚಾರ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಕಾಂಗ್ರೆಸ್ ಇಂದು ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿ, ಮೋದಿಯನ್ನು ಅಧಿಕಾರದಿಂದ ತೆಗೆದು ಹಾಕುವುದೇ ನಮ್ಮ ಮುಂದಿರುವ ಗುರಿಯಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.ಇವರು ಪ್ರಣಾಳಿಕೆ ಬಿಡುಗಡೆ ಮಾಡಿ ಬಳಿಕ ಮಾತನಾಡಿದರು, ವಿಪಕ್ಷ ನಾಯಕರನ್ನ ಜೈಲಿನಲ್ಲಿಟ್ಟು ಚುನಾವಣೆ ಮಾಡಲಾಗುತ್ತಿದೆ. ನಮ್ಮ ಪಕ್ಷದ ಖಾತೆಯನ್ನೇ ಸಂಪೂರ್ಣ ಮುಟ್ಟುಗೋಲು ಹಾಕಲಾಗಿದೆ. ಯಾರಾದ್ರು ಭಯಪಡುತ್ತಿದ್ದಾರೆ ಎಂದರೆ ಅವರು ತಪ್ಪು ಮಾಡಿದ್ದಾರೆ ಎಂದು, ಆದರೆ ನಮಗೆ ಯಾವುದೇ ಭಯವಿಲ್ಲ. ಮೋದಿ ಜನರ ನಡುವೆ ಹೋಗಲು ಆಗಲ್ಲ. ನಮ್ಮ ರಾಹುಲ್ ಗಾಂಧಿ ಜನರ ಮಧ್ಯೆ ಹೋಗಿದ್ದಾರೆ. ಆದರೆ ಜನರ ಮಧ್ಯೆ ಹೋಗುವುದಕ್ಕೆ ಮೋದಿಗೆ ಭಯವಿದೆ ಎಂದು ವಾಗ್ದಾಳಿ ನಡೆಸಿದರು. ಬಡವರಿಗಾಗಿ ನಮ್ಮ ಪ್ರಣಾಳಿಕೆಯನ್ನ ಅರ್ಪಣೆ ಮಾಡುತ್ತಿದ್ದೇವೆ. 16 ಸದಸ್ಯರ ಪ್ರಣಾಳಿಕೆ ಸಮಿತಿ ರಚನೆ ಮಾಡಿ ಪ್ರಣಾಳಿಕೆ ತಯಾರಿಸಲಾಗಿದೆ. ಭಾರತ ಜೋಡೊ ಯಾತ್ರೆಯಲ್ಲಿ 6 ನ್ಯಾಯಗಳ ಬಗ್ಗೆ ನಾವು ಪ್ರಸ್ತಾಪ ಮಾಡಿದ್ದೇವೆ. ಅದರಂತೆ ನಮ್ಮ ಪ್ರಣಾಳಿಕೆಯಲ್ಲಿ ಉಲ್ಲೇಖಿಸಲಾಗಿದೆ ಎಂದು ತಿಳಿಸಿದರು.



# ಸಮಾಜವಾದಿ ಪಕ್ಷದ ಅಭ್ಯರ್ಥಿ ನಾಮಪತ್ರ ತಿರಸ್ಕೃತ ನ್ಯಾಯಾಂಗ ತನಿಖೆಗೆ ಒತ್ತಾಯ

**ಭೋಪಾಲ್:** ಮಧ್ಯಪ್ರದೇಶ ಖಜುರಾಹೊ ಲೋಕಸಭಾ ಕ್ಷೇತ್ರಕ್ಕೆ ಸಮಾಜವಾದಿ ಪಕ್ಷದ ಅಭ್ಯರ್ಥಿಯಾಗಿ ಮೀರಾ ಯಾದವ್ ಅವರು ಸಲ್ಲಿಸಿದ್ದ ನಾಮಪತ್ರ ತಿರಸ್ಕೃತಗೊಂಡಿದೆ.ಮೀರಾ ಯಾದವ್ ಅವರ ನಾಮಪತ್ರವನ್ನು ಫಾರ್ಮ್ ಮತ್ತು ಹಳೆಯ ಪ್ರಮಾಣೀಕೃತ ನಕಲು ಮತದಾರರ ಪಟ್ಟಿಯಲ್ಲಿ ಒಂದೇ ಸ್ಥಳದಲ್ಲಿ ಸಹಿ ಇಲ್ಲದ ಕಾರಣ ತಿರಸ್ಕರಿಸಲಾಗಿದೆ ಎಂದು ಅಭ್ಯರ್ಥಿಯ ಪತಿ ದೀಪ್ ನಾರಾಯಣ ಯಾದವ್ ಹೇಳಿದ್ದಾರೆ. ನಾಮಪತ್ರಗಳು ಮಾನ್ಯವಾದವರ ಪಟ್ಟಿಯಲ್ಲಿ ಎಸ್‌ಪಿ ಅಭ್ಯರ್ಥಿ ಮೀರಾ ಯಾದವ್ ಅವರ ಹೆಸರು ಲಭ್ಯವಿಲ್ಲ. ಬಿಜೆಪಿ ಅಭ್ಯರ್ಥಿ ವಿ.ಡಿ.ಶರ್ಮಾ, ಬಿಎಸ್‌ಪಿ ಅಭ್ಯರ್ಥಿ ಕಮಲೇಶ್ ಕುಮಾರ್ ಮತ್ತು 12 ಸ್ವತಂತ್ರ ಅಭ್ಯರ್ಥಿಗಳು ಸೇರಿದಂತೆ ಒಟ್ಟು 14 ಅಭ್ಯರ್ಥಿಗಳು ಚುನಾವಣೆಯಲ್ಲಿ ಸ್ಪರ್ಧಿಸಲು ಮಾನ್ಯ ಅಭ್ಯರ್ಥಿಗಳಾಗಿದ್ದಾರೆ.ಚುನಾವಣಾಧಿಕಾರಿ ಮತ್ತು ಪನ್ನಾ ಜಿಲ್ಲಾಧಿಕಾರಿ ಸುರೇಶ್ ಕುಮಾರ್ ಅವರು ಎಸ್ಪಿ ಅಭ್ಯರ್ಥಿಯ ನಾಮಪತ್ರವನ್ನು ಸ್ವೀಕರಿಸದಿರಲು ಕಾರಣಗಳನ್ನು ನಮೂದಿಸಿರುವ ಪತ್ರವನ್ನು ಸಹ ನೀಡಿದ್ದಾರೆ. ಎಸ್‌ಪಿ ಅಭ್ಯರ್ಥಿ ಯಾದವ್ ಅವರು ಎರಡನೇ ಹಂತದ ಲೋಕಸಭೆ ಚುನಾವಣೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಏಪ್ರಿಲ್ 4 ಗುರುವಾರದಂದು ನಾಮಪತ್ರ ಸಲ್ಲಿಸಿದ್ದರು.

# ಸೋಮನಾಥ ದೇವಾಲಯದಲ್ಲಿ ಪ್ರಾರ್ಥನೆ ಸಲ್ಲಿಸಿದ ಪಾಂಡ್ಯ

**ಗುಜರಾತ್:** ಮುಂಬೈ ಇಂಡಿಯನ್ಸ್ ತಂಡದ ನಾಯಕನಾಗಿ ಹ್ಯಾಟ್ರಿಕ್ ಸೋಲು ಕಂಡಿರುವ ಹಾರ್ದಿಕ್ ಪಾಂಡ್ಯ, ಗುಜರಾತ್ನ ಸೋಮನಾಥ ದೇವಾಲಯದಲ್ಲಿ ಇಂದು ವಿಶೇಷ ಪ್ರಾರ್ಥನೆ ಸಲ್ಲಿಸಿದ್ದಾರೆ. ಪಾಂಡ್ಯ ನೇತೃತ್ವದ ಮುಂಬೈ ಪಡೆ ಈ ಬಾರಿಯ ಐಪಿಎಲ್ ಟಿ20 ಕ್ರಿಕೆಟ್ನಲ್ಲಿ ಕಳಪೆ ಪ್ರದರ್ಶನ ತೋರಿದೆ. ಈವರೆಗೆ ಆಡಿರುವ ಮೂರೂ ಪಂದ್ಯಗಳಲ್ಲಿ ಮುಗ್ಗರಿಸಿದ್ದು, ಪಾಯಿಂಟ್ ಖಾತೆ ತೆರೆಯಲು ವಿಫಲವಾಗಿದೆ. ಸ್ವತಃ ಆಲ್ರೌಂಡರ್ ಆಗಿರುವ ಹಾರ್ದಿಕ್, ಬ್ಯಾಟಿಂಗ್ ಮತ್ತು ಬೌಲಿಂಗ್ ಎರಡರಲ್ಲೂ ವೈಫಲ್ಯ ಅನುಭವಿಸಿದ್ದಾರೆ. ಮೂರೂ ಪಂದ್ಯಗಳಲ್ಲಿ ಬ್ಯಾಟ್ ಬೀಸಿರುವ ಅವರು, ಗಳಿಸಿರುವುದು 69 ರನ್ ಮಾತ್ರ. 7 ಓವರ್ ಬೌಲಿಂಗ್ ಮಾಡಿ, 10.85ರ ಸರಾಸರಿಯಲ್ಲಿ ರನ್ ಬಿಟ್ಟುಕೊಟ್ಟಿದ್ದರೂ, ದಕ್ಕಿರುವುದು 1 ವಿಕೆಟ್ ಅಷ್ಟೇ. ಕಳೆದೆರಡು ಆವೃತ್ತಿಯಲ್ಲಿ ಗುಜರಾತ್ ಟೈಟನ್ಸ್ ತಂಡ ಮುನ್ನಡೆಸಿದ್ದ ಹಾರ್ದಿಕ್, ಈ ಆವೃತ್ತಿ ಆರಂಭಕ್ಕೂ ಮುನ್ನ ಮುಂಬೈ ತಂಡ ಸೇರಿದ್ದರು. ಈ ಹಿಂದೆ ಐದು ಸಲ ಕಪ್ ಗೆದ್ದುಕೊಟ್ಟಿದ್ದ ರೋಹಿತ್ ಶರ್ಮಾ ಅವರನ್ನು ಕೆಳಗಿಳಿಸಿ, ಹಾರ್ದಿಕ್ಗೆ ನಾಯಕತ್ವದ ಹೊಣೆ ನೀಡಲಾಗಿದೆ. ಇದು ರೋಹಿತ್ ಅಭಿಮಾನಿಗಳ ಆಕ್ರೋಶಕ್ಕೆ ಕಾರಣವಾಗಿದೆ.



# ಆತಂಕ ಮೂಡಿಸಿದ ಹಕ್ಕಿ ಜ್ವರ

**ಅಮೆರಿಕ:** ಕೋವಿಡ್ಗಿಂತ ಭೀಕರವಾಗಿರುವ ಊ5ಓ1 ಬರ್ಡ್ ಫ್ಲೂ ಸಾಂಕ್ರಾಮಿಕ ರೋಗ ಕಾಣಿಸಿಕೊಂಡಿದ್ದು, ಎಲ್ಲೆಡೆ ಆತಂಕಕ್ಕೆ ಕಾರಣವಾಗಿದೆ. ಅಮೆರಿಕ ಮೂಲದ ಪತ್ರಿಕೆಯೊಂದರ ವರದಿ ಪ್ರಕಾರ, ಈ ಹಕ್ಕಿಜ್ವರ ಕೋವಿಡ್ಗಿಂತ ಭೀಕರವಾಗಿದೆ. ಕೋವಿಡ್ಗಿಂತ 100 ಪಟ್ಟು ಹೆಚ್ಚು ಹಾನಿಯನ್ನುಂಟು ಮಾಡಲಿದೆ ಎಂದು ತಜ್ಞರು ಎಚ್ಚರಿಸಿದ್ದಾರೆ ಎಂದು ಹೇಳಿದೆ. ಈ ವೈರಸ್ ಸಾಂಕ್ರಾಮಿಕ ರೋಗಕ್ಕೆ ಕಾರಣವಾಗಲಿದೆ ಎಂದು ಪಿಟ್ಸ್‌ಬರ್ಗ್ನ ಪ್ರಮುಖ ಹಕ್ಕಿ ಜ್ವರ ಸಂಶೋಧಕ ಡಾ ಸುರೇಶ್ ಕೂಚಿಪುಡಿ ಹೇಳಿದ್ದಾರೆ. ಈ ರೋಗ ತಡೆಯಲು ಮುನ್ನೆಚ್ಚರಿಕೆ ಕ್ರಮಗಳು ಅತ್ಯಗತ್ಯ ಎಂದು ಅವರು ಹೇಳಿದ್ದಾರೆ.



# ನ್ಯೂಯಾರ್ಕ್‌ನಲ್ಲಿ ಭೂಕಂಪ

**ನ್ಯೂಯಾರ್ಕ್:** ಶುಕ್ರವಾರ ನ್ಯೂಯಾರ್ಕ್ ಸಿಟಿ ಪ್ರದೇಶದಲ್ಲಿ 4.7 ತೀವ್ರತೆಯ ಭೂಕಂಪ ಸಂಭವಿಸಿದೆ. ರಿಕ್ಟರ್ ಮಾಪಕದಲ್ಲಿ 4.7 ತೀವ್ರತೆಯ ಭೂಕಂಪನವನ್ನು ಯುಎಸ್ ಜಿಯೋಲಾಜಿಕಲ್ ಸರ್ವೆ ಮಾಪನ ಮಾಡಿದೆ. ಕೇಂದ್ರಬಿಂದುವು ನ್ಯೂಜೆರ್ಸಿಯ ಲೆಬನಾನ್ ಬಳಿ ಇದೆ ಎಂದು ಹೇಳಿದೆ.ತತ್ ಕ್ಷಣವೇ ಯಾವುದೇ ಹಾನಿಯ ಕುರಿತು ವರದಿಯಾಗಿಲ್ಲ. ಯುರೋಪಿಯನ್ ಮೆಡಿಟರೇನಿಯನ್ ಭೂಕಂಪನ ಕೇಂದ್ರವು ಆರಂಭದಲ್ಲಿ ಭೂಕಂಪವನ್ನು 5.5 ತೀವ್ರತೆ ಎಂದು ಹೇಳಿತ್ತು. ಯಾವುದೇ ಹಾನಿಯ ಆರಂಭಿಕ ವರದಿಗಳಿಲ್ಲ ಎಂದು ನ್ಯೂಯಾರ್ಕ್ನ ಅಗ್ನಿಶಾಮಕ ಇಲಾಖೆ ಹೇಳಿದೆ. ನ್ಯೂಯಾರ್ಕ್ ಮೇಯರ್ ಎರಿಕ್ ಆಡಮ್ಸ್ ಅವರು ಭೂಕಂಪದ ಬಗ್ಗೆ ವಿವರಿಸಿದ್ದು ''ಈ ಸಮಯದಲ್ಲಿ ನಾವು ಯಾವುದೇ ಪ್ರಮುಖ ಪರಿಣಾಮಗಳ ವರದಿಗಳನ್ನು ಹೊಂದಿಲ್ಲವಾದರೂ, ನಾವು ಇನ್ನೂ ಪರಿಣಾಮವನ್ನು ನಿರ್ಣಯಿಸುತ್ತಿದ್ದೇವೆ'' ಎಂದು ತಿಳಿಸಿದ್ದಾರೆ.



# ರಾಮನ ಭಜನೆ ಹಾಡಿದ ಜಮ್ಮು ಕಾಶ್ಮೀರದ ಮಾಜಿ ಸಿಎಂ ಫಾರೂಕ್ ಅಬ್ದುಲ್ಲಾ

**ಕತ್ರಾ:** ಜಮ್ಮು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಫಾರೂಕ್ ಅಬ್ದುಲ್ಲಾ ಅವರು ರಾಜ್ಯದ ಕತ್ರಾದಲ್ಲಿ ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ಕಾರ್ಯಕರ್ತರೊಬ್ಬರ ಮನೆಗೆ ಭೇಟಿ ನೀಡಿದ್ದ ವೇಳೆ ರಾಮನ ಭಜನೆಯನ್ನು ಹಾಡಿರುವ ವಿಡಿಯೋ ಎಲ್ಲಾ ಕಡೆ ವೈರಲ್ ಆಗಿದೆ. ಫಾರೂಕ್ ಅಬ್ದುಲ್ಲಾ ಅವರು ಪಕ್ಷದ ನಾಯಕರು ಹಾಗೂ ಅವರ ಕುಟುಂಬಸ್ಥರು ಇದ್ದ ಸಂದರ್ಭದಲ್ಲಿ ಅವರು ರಾಮನ ಕೀರ್ತನೆಯನ್ನು ಹಾಡಿದ್ದು, ರಾಮ ಭಜನೆಗೆ ನಾನಾ ರೀತಿಯ ಪ್ರತಿಕ್ರಿಯೆಗಳು ಬಂದಿದೆ. ಚುನಾವಣೆಯಲ್ಲಿ ಪ್ರತಿ ಮತದ ಮೌಲ್ಯವೇನು ಎಂಬುದು ಮಾಜಿ ಮುಖ್ಯಮಂತ್ರಿ ಡಾ.ಫಾರೂಕ್ ಅಬ್ದುಲ್ಲಾ ಅವರಿಗೆ ಚೆನ್ನಾಗಿ ಗೊತ್ತಿದೆ. ಮತಗಳಿಗಾಗಿ ಈ ನಾಯಕ ದೇವಾಲಯ, ಮಸೀದಿ, ಗುರುದ್ವಾರ, ಭಜನೆ, ಕೀರ್ತನೆ, ಕುಲದೇವ್ ಸೇರಿದಂತೆ ಯಾವುದೇ ಅವಕಾಶವನ್ನೂ ತಪ್ಪಿಸಿಕೊಳ್ಳುವುದಿಲ್ಲ. ಅವರ ಈ ನೈಪುಣ್ಯತೆಯಿಂದಲೇ ಹಲವು ವರ್ಷ ರಾಜಕಾರಣದಲ್ಲಿದ್ದಾರೆ ಎಂಬುದಾಗಿ ನೆಟ್ಟಿಗರು ಅಭಿಪ್ರಾಯಪಟ್ಟಿದ್ದಾರೆ.



# ಉಕ್ರೇನ್ ನೇಟೊ ಸದಸ್ಯತ್ವ ಪಡೆಯಲಿದೆ: ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಬ್ಲಿಂಕನ್

**ಬ್ರಸೆಲ್ಸ್:** ಉಕ್ರೇನ್ಗೆ ಅಮೆರಿಕದ ಬೆಂಬಲವನ್ನು ಪುನರುಚ್ಚರಿಸಿರುವ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಆಂಟನಿ ಬ್ಲಿಂಕನ್ 'ಉಕ್ರೇನ್ ಖಂಡಿತವಾಗಿಯೂ ನೇಟೊ ಸದಸ್ಯತ್ವ ಪಡೆಯಲಿದೆ' ಎಂದಿದ್ದಾರೆ. ಬ್ರಸೆಲ್ಸ್ ನಲ್ಲಿ ಉಕ್ರೇನ್ ವಿದೇಶಾಂಗ ಸಚಿವ ಡಿಮಿಟ್ರೊ ಕ್ಯುಲೆಬಾ ಜತೆ ಮಾತುಕತೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬ್ಲಿಂಕನ್ 'ಉಕ್ರೇನ್ ಮತ್ತು ಅದರ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿಗೆ ಅಮೆರಿಕದ ಬೆಂಬಲ ಮುಂದುವರಿಯುತ್ತದೆ' ಎಂದರು. ನೇಟೊದ ಮುಂದಿನ ವಾರ್ಷಿಕ ಸಭೆ ಜುಲೈಯಲ್ಲಿ ವಾಷಿಂಗ್ಟನ್ನಲ್ಲಿ ನಡೆಯಲಿದೆ. ಉಕ್ರೇನ್ನ ಸದಸ್ಯತ್ವಕ್ಕೆ ಒಂದು ಸೇತುವೆ ನಿರ್ಮಿಸಿ ಆ ಸೇತುವೆಯ ಮೂಲಕ ಸದಸ್ಯತ್ವದತ್ತ ಉಕ್ರೇನ್ ತ್ವರಿತವಾಗಿ ಮುಂದುವರಿಯಬೇಕು ಎಂಬುದು ನಮ್ಮ ಆಶಯವಾಗಿದೆ. ಈ ನಿಟ್ಟಿನಲ್ಲಿ ಕಳೆದ ಎರಡು ದಿನಗಳಿಂದ ಸಾಕಷ್ಟು ಚರ್ಚೆ ನಡೆಸಿದ್ದೇವೆ. ಜುಲೈ ಶೃಂಗಸಭೆಯಲ್ಲಿ ಉಕ್ರೇನ್ನ ಸದಸ್ಯತ್ವದ ಬಗ್ಗೆ ಸರ್ವಾನುಮತದ ಬೆಂಬಲ ಒಗ್ಗೂಡಿಸುವ ವಿಶ್ವಾಸವಿದೆ. ಆದರೆ ಇದಕ್ಕೂ ಮುನ್ನ, ಉಕ್ರೇನ್ಗೆ ಈಗ ಎದುರಾಗಿರುವ ಸಮಸ್ಯೆಯನ್ನು ಎದುರಿಸುವತ್ತ(ರಶ್ಯದ ಆಕ್ರಮಣ) ತುರ್ತು ಗಮನ ಹರಿಸಬೇಕಾಗಿದೆ ಎಂದು ಬ್ಲಿಂಕನ್ ಹೇಳಿದ್ದಾರೆ. ಉಕ್ರೇನ್ ನೇಟೊ ಸದಸ್ಯನಾಗುವುದು ತನ್ನ ರಾಷ್ಟ್ರೀಯ ಭದ್ರತೆಗೆ ಅಪಾಯವಾಗಲಿದೆ ಎಂದು ರಶ್ಯ ಆತಂಕ ವ್ಯಕ್ತಪಡಿಸುತ್ತಿದೆ.



# ಸೈನಿಕರ ರಜೆ ರದ್ದುಗೊಳಿಸಿದ ಇಸ್ರೇಲ್



**ಜೆರುಸಲೇಮ್:** ಸಿರಿಯಾದಲ್ಲಿ ವೈಮಾನಿಕ ದಾಳಿಯಲ್ಲಿ ಇಬ್ಬರು ಇರಾನಿನ ಜನರಲ್ಗಳು ಸೇರಿದಂತೆ 13 ಜನರನ್ನು ಹತ್ಯೆಯಾದ ನಂತರ ಇರಾನ್ನಿಂದ ಸಂಭವನೀಯ ಪ್ರತೀಕಾರದ ದಾಳಿಯ ಭಯದಿಂದ ಇಸ್ರೇಲ್ ಕಟ್ಟೆಚ್ಚರ ವಹಿಸಿದ್ದು ಜಿಪಿಎಸ್ ನ್ಯಾವಿಗೇಷನ್ ಸೇವೆಗಳನ್ನು ನಿರ್ಬಂಧಿಸಲಾಗಿದ್ದು, ಯುದ್ಧ ಘಟಕಗಳಿಗೆ ರಜೆ ರದ್ದುಗೊಳಿಸಲಾಗಿದೆ, ವಾಯು ರಕ್ಷಣ ಆಜ್ಞೆಯನ್ನು ವರ್ಧಿಸಲಾಗಿದೆ

ವಿದೇಶಿ ಮಾಧ್ಯಮಗಳ ವರದಿ ಪ್ರಕಾರ, ಗಾಜಾ ಪಟ್ಟಿಯಲ್ಲಿರುವ ಹಮಾಸ್ನೊಂದಿಗಿನ ಯುದ್ಧದಿಂದಾಗಿ ಈಗಾಗಲೇ ಹೋರಾಟ ನಿರತವಾಗಿ ಸಾಕಷ್ಟು ದಣಿದಿರುವ ಇಸ್ರೇಲ್, ಪವಿತ್ರ ರಂಜಾನ್ ತಿಂಗಳ ಕೊನೆಯ ಶುಕ್ರವಾರದ ಏಪ್ರಿಲ್ 5 ರ ನಂತರ ಇರಾನ್ನಿಂದ ಪ್ರತಿಕ್ರಿಯೆಯನ್ನು ನಿರೀಕ್ಷಿಸುತ್ತಿದೆ. ಪ್ಯಾಲೆಸ್ಟೀನಿಯನ್ನರಿಗೆ ಬೆಂಬಲ ವ್ಯಕ್ತಪಡಿಸಲು ಇರಾನ್ ಈ ದಿನವನ್ನು 'ಜೆರುಸಲೇಮ್ ದಿನ'ವನ್ನಾಗಿ ಆಚರಿಸುತ್ತದೆ.

ಸಿರಿಯಾ ರಾಜಧಾನಿಯಲ್ಲಿ ಇರಾನಿನ ರಾಜತಾಂತ್ರಿಕ ಕಟ್ಟಡದ ಮೇಲೆ ನಡೆದ ವೈಮಾನಿಕ ದಾಳಿಯಲ್ಲಿ ಇರಾನ್ ನ ಉನ್ನತ ಕುಡ್ಸ್ ಫೋರ್ಸ್ ಕಮಾಂಡರ್ ಜನರಲ್ ಮೊಹಮ್ಮದ್ ರೆಜಾ ಜಹೇದಿ ಹತ್ಯೆಯಾಗಿದೆ.. 2020 ರಲ್ಲಿ ಯುಎಸ್ ಡ್ರೋನ್ ದಾಳಿಯಲ್ಲಿ ಖುಡ್ಸ್ ಫೋರ್ಸ್ ಕಮಾಂಡರ್ ಮೇಜರ್ ಜನರಲ್ ಖಾಸೆಮ್ ಸೊಲೈಮಾನಿ ಸಾವನ್ನಪ್ಪಿದ ನಂತರ ಇದು ಅತ್ಯಂತ ಉನ್ನತ ಮಟ್ಟದ ಅಧಿಕಾರಿಯೊಬ್ಬರ ಹತ್ಯೆಯಾಗಿದೆ.

# ಕೇಜ್ರಿವಾಲ್ ಜೈಲಿಗೆ ಹೋಗಲು ಬಿಜೆಪಿ ಸಂಚು: ಸಂಜಯ್ ಸಿಂಗ್

**ನವದೆಹಲಿ:** ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗೆ ತಳ್ಳಲು ಬಿಜೆಪಿ ಹಿರಿಯ ನಾಯಕರು ಸಂಚು ರೂಪಿಸಿದ್ದಾರೆ ಎಂದು ಎಎಪಿ ಸಂಸದ ಸಂಜಯ್ ಸಿಂಗ್ ಹೇಳಿದರು. ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಆರೋಪಿಯಾಗಿರುವ ರಾಘವ್ ಮಾಗುಂಟಾ ಅವರಿಗೆ ಕೇಜ್ರಿವಾಲ್ ಅವರ ವಿರುದ್ಧ ಸುಳ್ಳು ಹೇಳಿಕೆ ನೀಡುವಂತೆ ಬಿಜೆಪಿ ಒತ್ತಡ ಹೇರುತ್ತಿದೆ ಎಂದು ಆರೋಪ ಮಾಡಿದ್ದಾರೆ. ರಾಘವ್ ಮಾಗುಂಟಾ ಅವರ ತಂದೆ, ವೈಎಸ್‌ಆರ್ ಕಾಂಗ್ರೆಸ್ ಸಂಸದ ಮಾಗುಂಟಾ ಶ್ರೀನಿವಾಸುಲು ರೆಡ್ಡಿ ಅವರ ವಿರುದ್ಧ 2022ರ ಸೆಪ್ಟೆಂಬರ್ 16ರಂದು ಕ್ರಮ ಕೈಗೊಳ್ಳಲಾಗಿತ್ತು. ಈ ವೇಳೆ ಅರವಿಂದ ಕೇಜ್ರಿವಾಲ್ ಅವರ ವಿರುದ್ಧ ಸುಳ್ಳು ಹೇಳಿಕೆ ನೀಡುವಂತೆ ಅವರನ್ನು ಒತ್ತಾಯಿಸಲಾಯಿತು. ಅವರು ನಿರಾಕರಿಸಿದಾಗ, ಅವರ ಮಗ ರಾಘವ್ ರೆಡ್ಡಿ ಅವರನ್ನು ಬಂಧಿಸಲಾಯಿತು. ನಿರಂತರ ವಿಚಾರಣೆಯ ಬಳಿಕ ರೆಡ್ಡಿ ಅವರು ಕೇಜ್ರಿವಾಲ್ ವಿರುದ್ಧ ಹೇಳಿಕೆಯನ್ನು ಬದಲಾಯಿಸಿದರು ಎಂದು ಸಿಂಗ್ ಹೇಳಿದರು. ಸಿಎಂ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗೆ ಹಾಕಲು ದೊಡ್ಡ ಪಿತೂರಿಯನ್ನು ನಡೆಸಲಾಗಿದೆ. ಅಬಕಾರಿ ನೀತಿ ಹಗರಣದ ಹಿಂದೆ ಬಿಜೆಪಿ ಕೈವಾಡ ಇದ್ದು, ಪಕ್ಷದ ಹಿರಿಯ ನಾಯಕರು ಶಾಮೀಲಾಗಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ಕೇಜ್ರಿವಾಲ್ ಅವರು ಪ್ರಾಮಾಣಿಕ ಜೀವನವನ್ನು ನಡೆಸಿದ್ದಾರೆ. ದೆಹಲಿಯ ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಜನರಿಗೆ ಉತ್ತಮ ಆರೋಗ್ಯ ಸೌಲಭ್ಯಗಳನ್ನು ನೀಡುವ ಗುರಿಯನ್ನು ಹೊಂದಿದ್ದರು ಎಂದು ಹೇಳಿದ್ದಾರೆ.



# ಆನೆ ಬೇಟೆ ಮೇಲೆ ನಿಷೇಧ ಹೇರಬೇಕೆಂದು ಆಗ್ರಹ

**ಗ್ಯಾಬೋರೋನ್ (ಬೋಟ್ಸ್ವಾನಾ):** ಆಫ್ರಿಕಾ ಖಂಡದಲ್ಲಿನ ಬೋತ್ಸವಾನಾ ದೇಶದ ರಾಷ್ಟ್ರಪತಿ ಮೊಕ್ಗವೀಟ್ಸಿ ಮಾಸಿಸಿ ಇವರು ಜರ್ಮನಿಗೆ 20 ಸಾವಿರ ಆನೆಗಳನ್ನು ಕಳುಹಿಸುವ ಬೆದರಿಕೆ ನೀಡಿದ್ದಾರೆ. ಜನವರಿ ತಿಂಗಳಲ್ಲಿ ಜರ್ಮನಿಯ ಪರಿಸರ ಸಚಿವರು ಆನೆಯ ಸಂವರ್ಧನೆಯ ಅಂಶಗಳನ್ನು ಹೇಳುತ್ತಾ, 'ಬೋಟ್ಸ್ವಾನಾಕ್ಕೆ ಹೋಗಿ ಆನೆಯ ಬೇಟೆ ಮಾಡುವುದು ಮತ್ತು ಅದನ್ನು ಆಮದು ಮಾಡುವುದರ ಮೇಲೆ ಕೆಲವು ನಿರ್ಬಂಧ ಹೇರಬೇಕೆಂದು', ಹೇಳಿದ್ದರು. ಈ ಬಗ್ಗೆ ರಾಷ್ಟ್ರಪತಿ ಮಾಸಿಸಿ ಇವರು, ಜರ್ಮನಿಯ ಪರಿಸರ ಸಚಿವರು ನಮಗೆ ಆನೆಯ ಜೊತೆಗೆ ಇರುವ ಸಲಹೆಯನ್ನು ಹೇಗೆ ನೀಡಿದ್ದಾರೆಯೋ, ಅದರಂತೆಯೇ ಜರ್ಮನಿಯಲ್ಲಿನ ಜನರೂ ಕೂಡ ಆನೆಯ ಜೊತೆಗಿರುವ ಅನುಭವ ಪಡೆಯಬೇಕು. ನಾವು ಜರ್ಮನಿಗೆ ಆನೆಗಳನ್ನು ಉಡುಗೊರೆಯಾಗಿ ನೀಡುವೆವು. ಅವರು ಈ ಉಡುಗೊರೆ ನಿರಾಕರಿಸುವುದಿಲ್ಲ ಎಂದು ನಾವು ಆಶಿಸುತ್ತೇವೆ ಎಂದು ಹೇಳಿದ್ದಾರೆ.ರಾಷ್ಟ್ರಪತಿ ಮಾಸಿಸಿ ಇವರ ಅಭಿಪ್ರಾಯ, ಬೋತ್ಸವಾನಾದಲ್ಲಿ ಆನೆಯ ಸಂವರ್ಧನೆ ಪ್ರಯತ್ನದಿಂದ ಅದರ ಸಂಖ್ಯೆಯಲ್ಲಿ ನಿರಂತರ ಹೆಚ್ಚಳವಾಗುತ್ತಿದೆ. ಅವು ದೇಶದ ಬೆಳೆಗಳನ್ನು ನಾಶ ಮಾಡುತ್ತಿವೆ. ಅಲ್ಲಿಯ ಆನೆಗಳು ಜನರನ್ನು, ವಿಶೇಷವಾಗಿ ಚಿಕ್ಕ ಮಕ್ಕಳನ್ನು ತುಳಿಯುತ್ತಿವೆ ಮತ್ತು ಆಸ್ತಿಯ ಹಾನಿ ಮಾಡುತ್ತಿವೆ. ಇದರಿಂದ ಆಫ್ರಿಕಾದ ಜನ ಕಂಗೆಟ್ಟಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054





# ಏಪ್ರಿಲ್ 15ರಿಂದ ಡಾಲಿ ನಟನೆಯ 'ಉತ್ತರ ಕಾಂಡ' ಚಿತ್ರದ ಶೂಟಿಂಗ್

ಡಾಲಿ ಧನಂಜಯ್, ಶಿವರಾಜ್ ಕುಮಾರ್ ಕಾಂಬಿನೇಷನ್ ನ ಉತ್ತರ ಕಾಂಡ ಸಿನಿಮಾದ ಶೂಟಿಂಗ್ ಏಪ್ರಿಲ್ 15ರಿಂದ ಉತ್ತರ ಕರ್ನಾಟಕ ವಿವಿಧ ಸ್ಥಳಗಳಲ್ಲಿ ನಡೆಯಲಿದೆ. ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡುವ ದೃಷ್ಟಿಯಿಂದ ಉತ್ತರ ಕರ್ನಾಟಕದಲ್ಲೇ ಆಡಿಷನ್ ಮಾಡಿ ಕೆಲವು ಕಲಾವಿದರನ್ನು ಆಯ್ಕೆ ಮಾಡಿಕೊಂಡಿದೆ ಚಿತ್ರತಂಡ.

ಒಂದು ಕಡೆ ಶೂಟಿಂಗ್ ಖುಷಿ ವಿಚಾರವಾದರೆ, ಮತ್ತೊಂದು ಕಡೆ ಹೆಸರಾಂತ ನಟಿಯೇ ಈ ಚಿತ್ರಕ್ಕೆ ಕೈ ಕೊಟ್ಟಿದ್ದಾರೆ. ಸ್ಯಾಂಡಲ್‌ವುಡ್ ನಟಿ ರಮ್ಯಾ ಮತ್ತೆ ಬೆಳ್ಳಿಪರದೆಗೆ ಕಮ್‌ಬ್ಯಾಕ್ ಆಗುತ್ತಿದ್ದಾರೆ ಎಂಬ ಸುದ್ದಿ ಕೇಳಿಯೇ ಫ್ಯಾನ್ಸ್ ಖುಷಿಪಟ್ಟಿದ್ದರು. ಇದೀಗ ಅಭಿಮಾನಿಗಳಿಗೆ ರಮ್ಯಾ ನಿರಾಸೆ ಮೂಡಿಸಿದ್ದಾರೆ. ಬಹುನಿರೀಕ್ಷಿತ 'ಉತ್ತರಕಾಂಡ' ಚಿತ್ರಕ್ಕೆ ನಟಿ ಕೈಕೊಟ್ಟಿದ್ದಾರೆ. ಡೇಟ್ಸ್ ಹೊಂದಾಣಿಕೆ ಆಗದ ಕಾರಣ, ನಾನು ಉತ್ತರಕಾಂಡ ಸಿನಿಮಾದಲ್ಲಿ ನಟಿಸುತ್ತಿಲ್ಲ. ನನ್ನ ಸಿನಿಮಾ ಮತ್ತು ರಾಜಕೀಯ ಕೆಲಸಗಳನ್ನು ಸದ್ಯ ಕಾಯ್ದಿರಿಸಿದ್ದೇನೆ. ಆದರೆ ಚಿತ್ರತಂಡಕ್ಕೆ ಶುಭವಾಗಲಿ ಎಂದು ರಮ್ಯಾ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದ್ದಾರೆ.



ಡಾಲಿ ಧನಂಜಯ್‌ಗೆ ನಾಯಕಿಯಾಗಿ ರಮ್ಯಾ ಕಾಣಿಸಿಕೊಳ್ಳುವುದಾಗಿ ಕಳೆದ ವರ್ಷ ಘೋಷಣೆಯಾಗಿತ್ತು. ಅದ್ದೂರಿಯಾಗಿ ಮುಹೂರ್ತ ಕೂಡ ನೆರವೇರಿತ್ತು. ಚಿತ್ರದಲ್ಲಿ ಶಿವಣ್ಣ ಕೂಡ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಆದರೆ ಈಗ ರಮ್ಯಾ ಚಿತ್ರದಿಂದ ಹೊರನಡೆದಿದ್ದಾರೆ.

# ಕೊಂಬೆ ಮೇಲೆ ನಾಗಿಣಿಯಂತೆ ಮಲಗಿದ ದೀಪಿಕಾ ದಾಸ್



ನಾಗಿಣಿ ಬ್ಯೂಟಿ, ಬಿಗ್ ಬಾಸ್ ಕನ್ನಡ ಸೀಸನ್ 7ರ ಸ್ಪರ್ಧಿ ದೀಪಿಕಾ ದಾಸ್ ಸದ್ಯ ಪತಿ ಜೊತೆ ವೆಕೇಷನ್ ಮೂಡ್‌ನಲ್ಲಿದ್ದಾರೆ. ಟರ್ಕಿಯಲ್ಲಿ ಚಿಟ್ಟೆಯಾಗಿ ಮಿಂಚಿದ್ದ ನಟಿ, ಈಗ ಕೊಂಬೆ ಮೇಲೆ ನಾಗಿಣಿಯಂತೆ ಮಲಗಿಕೊಂಡಿದ್ದಾರೆ. ಈ ಫೋಟೋ ನೋಡಿ ನಿಜವಾದ ನಾಗಿಣಿ ನೀವೇ ಅಂತಾ ಕಾಮೆಂಟ್ ಮಾಡಿದ್ದಾರೆ.

ಪತಿ ಜೊತೆ ದೀಪಿಕಾ ಟರ್ಕಿಯಲ್ಲಿ ಬೀಡು ಬಿಟ್ಟಿದ್ದಾರೆ. ರೆಕ್ಕೆಯನ್ನು ಬೆನ್ನಿಗೆ ಸಿಕ್ಕಿಸಿ, ಕಲರ್‌ಫುಲ್ ಡ್ರೆಸ್‌ನಲ್ಲಿ ನಟಿ ಕಂಗೊಳಿಸಿದ್ದಾರೆ. ಯಾವಾಗಲೂ ಸೂರ್ಯನ ಕಿರಣಕ್ಕೆ ಮುಖ ಒಡ್ಡಿಕೊಳ್ಳಿ, ಆಗ ನೆರಳು ನಿಮ್ಮ ಹಿಂದೆಯೇ ಉಳಿಯುತ್ತದೆ ಎಂದು ಕ್ಯಾಪ್ಷನ್ ನೀಡಿದ್ದರು. ನಟಿಯ ಆಕರ್ಷಕ ಫೋಟೋಗಳು ಅಭಿಮಾನಿಗಳ ಗಮನ ಸೆಳೆದಿತ್ತು. ಈಗ ಹಸಿರು ಬಣ್ಣದ ಡ್ರೆಸ್‌ನಲ್ಲಿ ಕೊಂಬೆ ಮೇಲೆ ನಾಗಿಣಿಯಂತೆ ಮಲಗಿ ನಟಿ ಪೋಸ್ ಕೊಟ್ಟಿದ್ದಾರೆ.

ದೀಪಿಕಾ ದಾಸ್‌ಗೆ ಗೋವಾದಲ್ಲೇ ಮದುವೆಯಾಗುವ ಕನಸು ಇತ್ತಂತೆ. ಹೀಗಾಗಿ ಕೇವಲ ಕುಟುಂಬಸ್ಥರ ಸಮ್ಮುಖದಲ್ಲಿ ನಟಿ ದೀಪಿಕಾ ದಾಸ್ ಉದ್ಯಮಿ ದೀಪಕ್ ಎಂಬುವವರ ಜೊತೆ ಮಾರ್ಚ್ 1ರಂದು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು.

ಇತ್ತೀಚೆಗೆ ನಡೆದ ಸುದ್ದಿಗೋಷ್ಠಿಯೊಂದರಲ್ಲಿ ದೀಪಕ್ ಅವರ ಮೇಲೆ ನಿಮಗೆ ಲವ್ ಆಗಿದ್ದು ಹೇಗೆ ಎಂಬ ಪ್ರಶ್ನೆಗೆ ನಟಿ ದೀಪಿಕಾ ದಾಸ್



ಮನಬಿಚ್ಚಿ ಮಾತನಾಡಿದ್ದರು. ದೀಪಕ್ ಮತ್ತು ನಾನು ನಾಲ್ಕು ವರ್ಷದ ಸ್ನೇಹಿತರು. 4 ವರ್ಷಗಳ ಕಾರ್ಯಕ್ರಮವೊಂದರಲ್ಲಿ ಭೇಟಿಯಾದೆವು. ಕಳೆದ ಒಂದು ವರ್ಷದಿಂದ ರಿಲೇಷನ್‌ಶಿಪ್‌ನಲ್ಲಿ ಇದ್ವಿ. ಕುಟುಂಬಸ್ಥರು ಕೂಡ ನಮ್ಮ ಪ್ರೀತಿಗೆ ಓಕೆ ಎಂದರು.

ದೀಪಕ್ ಅವರಿಗೆ ಚಿತ್ರರಂಗಕ್ಕೂ ನಂಟಿಲ್ಲ. ಅವರು ಉದ್ಯಮಿ. ಮುಂದಿನ ದಿನಗಳಲ್ಲಿ ಪ್ರೊಡಕ್ಷನ್ ಹೌಸ್ ಮಾಡುವ ಮೂಲಕ ಚಿತ್ರರಂಗಕ್ಕೆ ಕರೆತರುವ ಯೋಜನೆ ಇದೆ. ಅವರು ಜಾಸ್ತಿ ಮಾತಾಡೋದಿಲ್ಲ. ನಾನೇ ಕಮ್ಮಿ ಮಾತಾಡುತ್ತೇನೆ ಅಂದುಕೊಂಡಿದ್ದೆ, ಆದರೆ ನನಗಿಂತ ಕಮ್ಮಿ ಮಾತಾಡುವ ಹುಡುಗ ನನಗೆ ಸಿಕ್ಕಿದ್ದಾರೆ. ನಾನು ಮದುವೆಯಾಗುವ ಹುಡುಗ ಹೀಗೆ ಇರಬೇಕು, ಹಾಗೇ ಇರಬೇಕು ಅಂತಾ ಅಂದುಕೊಂಡಿರಲಿಲ್ಲ. ಆದರೆ ನಾನು ಪ್ರೀತಿ ಅಂತಾ ಹುಡುಕಿಕೊಂಡು ಹೋಗಿಲ್ಲ. ನನ್ನ ಮದುವೆಯಾಗುವ ಹುಡುಗ ಮನಸ್ಸು ಚೆನ್ನಾಗಿರಬೇಕು. ನನ್ನ ಚೆನ್ನಾಗಿ ನೋಡಿಕೊಳ್ಳುವವನಾಗಿರಬೇಕು. ನನಗೆ ಟೈಮ್ ಕೊಡುವವನಾಗಿರಬೇಕು ಜೊತೆಗೆ ದೇಶ ಸುತ್ತುವವನಾಗಿರಬೇಕು ಅಂತಾ ಈ ಹಿಂದೆ ಹೇಳಿದ್ದೆ. ಅದೇ ರೀತಿ ನಾನು ಅಂದುಕೊಂಡ ಹಾಗೇ ನನಗೆ ನನ್ನ ಸಂಗಾತಿ ಸಿಕ್ಕಿದ್ದಾರೆ ಅಂತ ಮಾತನಾಡಿದ್ದರು.

ಬಳಿಕ ದೀಪಿಕಾ ದಾಸ್ ಪತಿ ದೀಪಕ್ ಮಾತನಾಡಿ, ನಾನು ದುಬೈ ಮೂಲದವನು ಅಲ್ಲ. ಇದೆ ಬೆಂಗಳೂರಿನ ಆರ್‌ಆರ್ ನಗರದವನು. ರಿಯಲ್ ಎಸ್ಟೇಟ್ ಜೊತೆ ದುಬೈನಲ್ಲಿ ಒಂದು ಐಟಿ ಕಂಪನಿ ಇದೆ. ದೀಪಿಕಾ ನನಗೆ ನಾಲ್ಕು ವರ್ಷಗಳಿಂದ ಗೊತ್ತು. ಕಳೆದ ಒಂದು ವರ್ಷದಿಂದ ಪರಸ್ಪರ ಪ್ರೀತಿಸುತ್ತಿದ್ದೆವು. ಇಷ್ಟು ದಿನ ಹೇಗೆಲ್ಲಾ ದೀಪಿಕಾಗೆ ಬೆಂಬಲಿಸಿದ್ರೋ ಮುಂದಿನ ದಿನಗಳಲ್ಲಿ ಕೂಡ ಅವಳಿಗೆ ಸಪೋರ್ಟ್ ಮಾಡಿ ಎಂದು ದೀಪಕ್ ಮನವಿ ಮಾಡಿದ್ದರು.

# 'ವಿಕ್ಟೋರಿಯಾ ಮಾನ್ಸನ್' ಚಿತ್ರದ ಫಸ್ಟ್ ಲುಕ್ ರಿಲೀಸ್ ಮಾಡಿದ ಶಿವಣ್ಣ

ಹೊಸಬರ ಚಿತ್ರಗಳಿಗೆ ಸದಾ ಪ್ರೋತ್ಸಾಹ ನೀಡುತ್ತಿರುವ ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಈಗ 'ವಿಕ್ಟೋರಿಯಾ ಮಾನ್ಸನ್' ಸಿನಿಮಾದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆ ಮಾಡಿ ತಂಡಕ್ಕೆ ಶುಭ ಹಾರೈಸಿದ್ದಾರೆ. ನಂತರ ಮಾತನಾಡುತ್ತಾ, ಚಿತ್ರರಂಗಕ್ಕೆ ನವ ಪ್ರತಿಭೆಗಳು ಬರಬೇಕು. ಆವಾಗಲೇ ವಿನೂತನ ಕಥೆಗಳು ಬರುತ್ತದೆ. ತುಣುಕುಗಳು ಚೆನ್ನಾಗಿ ಬಂದಿದೆ. ಹೊಸಬರದು ಅನಿಸುವುದಿಲ್ಲ. ನಿಮ್ಮಗಳ ಪ್ರಯತ್ನ ನಿರಂತರವಾಗಿ ಸಾಗಲಿ. ಸಿನಿಮಾ ತೆರೆಕಂಡು ಯಶಸ್ಸು ಗಳಿಸಲಿ ಎಂದರು. ಈ ಸಂದರ್ಭದಲ್ಲಿ ಆರ್.ಚಂದ್ರು ಉಪಸ್ತಿತಿ ಇತ್ತು.

ಸುಮಾರು ನಾಲ್ಕು ನೂರಕ್ಕೂ ಹೆಚ್ಚು ಚಿತ್ರಗಳಿಗೆ ಡಿಜಿಟಲ್ ಪ್ರಚಾರ ಮಾಡಿರುವ ಹಾಗೂ ಸ್ಟಾರ್ ನಿರ್ದೇಶಕ ಮತ್ತು ನಿರ್ಮಾಪಕ ಆರ್.ಚಂದ್ರು ಸಿನಿಮಾಗಳಿಗೂ ಕೆಲಸ ಮಾಡುತ್ತಿರುವ ಕಿರಿ ವಯಸ್ಸಿನ ಉಮೇಶ್.ಕೆ.ಎನ್ ಅವರು ಶ್ರೀ ಪದ್ಮಾವತಿ ಪ್ರೊಡಕ್ಷನ್ ಮೂವೀ ಬ್ಯಾನರ್‌ದಲ್ಲಿ ಬಂಡವಾಳ ಹೂಡುತ್ತಿದ್ದಾರೆ. ರಾಜೇಶ್ ಬಲಿಪ ನಿರ್ದೇಶನ ಜತೆಗೆ ನಿರ್ಮಾಣದಲ್ಲಿ ಕೈ ಜೋಡಿಸಿದ್ದಾರೆ.

ಕಥೆಯ ಕುರಿತು ಹೇಳುವುದಾದರೆ 1900ನೇ ಇಸವಿಯಲ್ಲಿ ಹನುಮಗಿರಿ ಎಂಬ ಪುಟ್ಟ ಗ್ರಾಮದಲ್ಲಿ ಭೀಕರ ಘಟನೆಗಳು



ನಡೆಯುತ್ತಿರುತ್ತವೆ. ಅಲ್ಲಿ ಪಾಲಿಸುತ್ತಿದ್ದ ವಿಚಿತ್ರ ಆಚರಣೆಗಳು ಎಷ್ಟೋ ಶತಮಾನಗಳಿಂದ ಉಳಿದ ನಿಗೂಢ ರಹಸ್ಯಗಳನ್ನು ಆರ್ಕಾಲಜಿ ಇಲಾಖೆಯು ಹೇಗೆ ಭೇದಿಸುತ್ತದೆ ಎಂಬುದನ್ನು ಥ್ರಿಲ್ಲರ್ ಮೂಲಕ ತೋರಿಸಲಾಗುತ್ತಿದೆ.

ರಾಜೇಶ್ ನಾಯಕ. ಕಾಶೀಮ ನಾಯಕಿ. ಇವರೊಂದಿಗೆ ಮಿಮಿಕ್ರಿಗೋಪಿ, ಮಠಕೊಪ್ಪಳ, ಶ್ರೀಧರ್, ಬಲರಾಜವಾಡಿ, ಗುರುದೇವ್ ನಾಗರಾಜ್, ಉಮೇಶ್, ಮದನ್, ಅಂಜಿ, ಹಿತೇಶ್, ಪಲ್ಲಿಗೋವಿಂದ್, ಶೈಲಜ, ಕೀರ್ತನ ಮುಂತಾದವರು ನಟಿಸುತ್ತಿದ್ದಾರೆ. ಸಂಗೀತ ಕಿರಣ್ ರವೀಂದ್ರನಾಥ್, ಛಾಯಾಗ್ರಹಣ ವೀರೇಶ್ ಬುಗುಡೆ, ಸಂಕಲನ ನಾನಿ ಕೃಷ್ಣ, ಸಾಹಸ ಅಶೋಕ್ ಅವರದಾಗಿದೆ. ಬೆಂಗಳೂರು, ಮಂಗಳೂರು, ಮೂಡಬಿದ್ರಿ, ಚಿಕ್ಕಮಗಳೂರು, ಬೇಲೂರು ಸುಂದರ ತಾಣಗಳಲ್ಲಿ ಶೇಕಡ 90ರಷ್ಟು ಚಿತ್ರೀಕರಣ ಮುಗಿಸಿಕೊಂಡು, ಸದ್ಯದಲ್ಲೇ ಕುಂಬಳಕಾಯಿ ಒಡೆಯಲು ತಂಡವು ಯೋಜನೆ ರೂಪಿಸಿಕೊಂಡಿದೆ.

## ಕಳಪೆ ಬೌಲಿಂಗ್, ಬ್ಯಾಟಿಂಗ್‌ನಿಂದ ಚೆನ್ನೈಗೆ ಸೋಲು

# ಸನ್ ರೈಸರ್ಸ್‌ಗೆ 6 ವಿಕೆಟ್ ಜಯ

ಅಗ್ರ ಕ್ರಮಾಂಕದ ಆಟಗಾರರ ಕಳಪೆ ಬ್ಯಾಟಿಂಗ್ ಹಾಗೂ ಕಳಪೆ ಬೌಲಿಂಗ್‌ನಿಂದಾಗಿ ಚೆನ್ನೈ ಸೂಪರ್ ಕಿಂಗ್ಸ್ ಎದುರು ಹೀನಾಯ ಸೋಲು ಅನುಭವಿಸಿದೆ. ಸಂಘಟಿತ ಪ್ರದರ್ಶನ ತೋರಿದ ಸನ್ ರೈಸರ್ಸ್ ಹೈದರಾಬಾದ್ ತವರಿನಲ್ಲಿ 6 ವಿಕೆಟ್‌ಗಳ ಜಯ ಸಾಧಿಸಿದೆ.

ಇಲ್ಲಿನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 165 ರನ್ ಗಳಿಸಿತ್ತು. ಈ ಗುರಿ ಬೆನ್ನತ್ತಿದ್ದ ಸನ್ ರೈಸರ್ಸ್ ಹೈದರಾಬಾದ್ ತಂಡವು 18.1 ಓವರ್‌ಗಳಲ್ಲೇ 4 ವಿಕೆಟ್ ನಷ್ಟಕ್ಕೆ 166 ರನ್ ಗಳಿಸಿ ಗೆಲುವು ಸ್ಥಾಧಿಸಿದೆ. ಇದರೊಂದಿಗೆ ಅಂಕಪಟ್ಟಿಯಲ್ಲಿ 5ನೇ ಸ್ಥಾನಕ್ಕೆ ಜಿಗಿದಿದೆ.

ಚೇಸಿಂಗ್ ಆರಂಭಿಸಿದ ಹೈದರಾಬಾದ್ ತಂಡದ ಬ್ಯಾಟರ್‌ಗಳು ಆರಂಭದಲ್ಲೇ ಚೆನ್ನೈ ಬೌಲರ್‌ಗಳನ್ನು ಬೆಂಡೆತ್ತಲು ಶುರು ಮಾಡಿದರು. ಪವರ್ ಪ್ಲೇ ನಲ್ಲಿ ಅಭಿಷೇಕ್ ಶರ್ಮಾ, ಏಡನ್ ಮಾರ್ಕ್ರಮ್ ಹಾಗೂ ಟ್ರಾವಿಸ್ ಹೆಡ್ ಅವರ ಸ್ಫೋಟಕ ಪ್ರದರ್ಶನ ತಂಡದ ಗೆಲುವಿಗೆ ನೆರವಾಯಿತು. ಮೊದಲ ವಿಕೆಟ್‌ಗೆ ಕೇವಲ 2.4 ಓವರ್‌ಗಳಲ್ಲೇ 46 ರನ್ ಸಿಡಿಸಿದ್ದ ಸನ್ ರೈಸರ್ಸ್, 6 ಓವರ್‌ಗಳಲ್ಲಿ ಬರೋಬ್ಬರಿ 78 ರನ್ ಬಾರಿಸಿತ್ತು. ಪವರ್ ಪ್ಲೇ ಬಳಿಕ ಸ್ಪಿನ್ ಬೌಲರ್‌ಗಳು ಬಿಗಿ ಹಿಡಿತ ಸಾಧಿಸುವಲ್ಲಿ ಯಶಸ್ವಿಯಾದರೂ ಗೆಲುವು ಕೈತಪ್ಪಿತು.

ಸನ್ ರೈಸರ್ಸ್ ಪರ 308.33 ಸ್ಟ್ರೈಕ್‌ರೇಟ್‌ನಲ್ಲಿ ಬ್ಯಾಟ್ ಬೀಸಿದ ಅಭಿಷೇಕ್ ಶರ್ಮಾ 12 ಎಸೆತಗಳಲ್ಲಿ 37 ರನ್ (4 ಸಿಕ್ಸರ್, 3 ಬೌಂಡರಿ) ಸಿಡಿಸಿದರು.





ಏಡನ್ ಮಾರ್ಕ್ರಮ್ 50 ರನ್ (36 ಎಸೆತ, 1 ಸಿಕ್ಸರ್, 4 ಬೌಂಡರಿ), ಟ್ರಾವಿಸ್ ಹೆಡ್ 31 ರನ್, ಶಾಬಾಜ್ ಅಹ್ಮದ್ 18 ರನ್, ಹೆನ್ರಿಕ್ ಕ್ಲಾಸೆನ್ 10 ರನ್, ನಿತಿಶ್ ಕುಮಾರ್ ರೆಡ್ಡಿ 14 ರನ್ ಗಳಿಸಿದರು. ಸಿಎಸ್‌ಕೆ ಪರ ಮೊಯಿನ್ ಅಲಿ 2 ವಿಕೆಟ್ ಕಿತ್ತರೆ, ದೀಪಕ್ ಚಹಾರ್ ಮತ್ತು ಮಹೀಶ್ ತೀಕ್ಷಣ ತಲಾ ಒಂದೊಂದು ವಿಕೆಟ್ ಪಡೆದರು.

ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ತಂಡದಲ್ಲಿ ಅಗ್ರ ಕ್ರಮಾಂಕದ ಬ್ಯಾಟರ್‌ಗಳು ವೈಫಲ್ಯ ಅನುಭವಿಸಿದರು. ರಚಿನ್ ರವೀಂದ್ರ 12 ರನ್‌ಗಳಿಗೆ ಔಟಾಗುತ್ತಿದ್ದಂತೆ, ನಾಯಕ ರುತುರಾಜ್ ಗಾಯಕ್ವಾಡ್ ಸಹ ಶೀಘ್ರವೇ ಪೆವಿಲಿಯನ್‌ಗೆ ಮರಳಿದರು. ಮಧ್ಯಮ ಕ್ರಮಾಂಕದಲ್ಲಿ ಅಜಿಂಕ್ಯಾ ರಹಾನೆ ಹಾಗೂ ಶಿವಂ ದುಬೆ ತಂಡಕ್ಕೆ ಅಗತ್ಯ ರನ್ ಕಲೆಹಾಕುವಲ್ಲಿ ಯಶಸ್ವಿಯಾದರು. ಆದ್ರೆ ಡೆತ್ ಓವರ್‌ನಲ್ಲಿ ಕಳಪೆ ಬ್ಯಾಟಿಂಗ್ ಪ್ರಸರ್ಶನದಿಂದಾಗಿ ಸಿಎಸ್‌ಕೆ 170 ರನ್‌ಗಳ ಗಡಿ ದಾಟುವಲ್ಲಿಯೂ ವಿಫಲವಾಯಿತು. ಸಿಎಸ್‌ಕೆ ಪರ ಶಿವಂ ದುಬೆ 45 ರನ್, ರಹಾನೆ 35 ರನ್, ಜಡೇಜಾ 31 ರನ್, ರುತುರಾಜ್ 26 ರನ್, ರಚಿನ್ 12 ರನ್, ಡೇರಿಲ್ ಮಿಚೆಲ್ 13 ರನ್, ಎಂ.ಎಸ್ ಧೋನಿ 1 ರನ್ ಗಳಿಸಿದರು. ಹೈದರಾಬಾದ್ ಪರ ಅಭಿಷೇಕ್ ಶರ್ಮಾ, ಭುನೇಶ್ವರ್ ಕುಮಾರ್, ಟಿ ನಟರಾಜನ್, ಪ್ಯಾಟ್ ಕಮ್ಮಿನ್ಸ್, ಶಹಬಾಜ್ ಅಹ್ಮದ್ ಹಾಗೂ ಜಯದೇವ್ ಉನದ್ಕಟ್ ತಲಾ ಒಂದೊಂದು ವಿಕೆಟ್ ಪಡೆದು ಮಿಂಚಿದರು.

# ಶಿವಲಿಂಗಕ್ಕೆ ಹಾಲಿನ ಅಭಿಷೇಕ ನೆರವೇರಿಸಿದ ಪಾಂಡ್ಯ

ಮುಂಬೈ ಇಂಡಿಯನ್ಸ್ ತಂಡದ ನಾಯಕ ಹಾರ್ದಿಕ್ ಪಾಂಡ್ಯ ನಿನ್ನೆ ಸೋಮನಾಥ ದೇವಸ್ಥಾನಕ್ಕೆ ಭೇಟಿ ನೀಡಿ ಶಿವಲಿಂಗಕ್ಕೆ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಶಿವಲಿಂಗಕ್ಕೆ ಹಾಲಿನ ಅಭಿಷೇಕ ನೆರವೇರಿಸಿ, ಕೈಮುಗಿದು ಪ್ರಾರ್ಥನೆ ಸಲ್ಲಿಸಿದ್ದಾರೆ. ಜೊತೆಗೆ ಭಕ್ತಿಯಿಂದ ಶಿವನ ಶ್ಲೋಕ ಪಠಿಸಿದ್ದಾರೆ.

ಹಾರ್ದಿಕ್ ಪಾಂಡ್ಯ ಅವರ ಈ ವಿಶಿಷ್ಟ ಕ್ಷಣದ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದ್ದಂತೆ ಮುಂಬೈ ತಂಡದ ಅಭಿಮಾನಿಗಳು ಪಾಂಡ್ಯರನ್ನ ಟ್ರೋಲಿಗೆಳೆದಿದ್ದಾರೆ.



ಹಾರ್ದಿಕ್ ಪಾಂಡ್ಯ ನಾಯಕತ್ವದ ಮುಂಬೈ ಇಂಡಿಯನ್ಸ್ ತಂಡ 2024ರ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯಲ್ಲಿ ಹ್ಯಾಟ್ರಿಕ್ ಸೋಲು ಅನುಭವಿಸಿದೆ. ಗುಜರಾತ್ ಟೈಟಾನ್ಸ್ ಎದುರು ತನ್ನ ಮೊದಲ ಪಂದ್ಯದಲ್ಲಿ ಸೋತಿದ್ದ ಮುಂಬೈ ಇಂಡಿಯನ್ಸ್, ನಂತರ ಸನ್‌ರೈಸರ್ಸ್ ಹೈದರಾಬಾದ್ ಹಾಗೂ ರಾಜಸ್ಥಾನ್ ರಾಯಲ್ಸ್ ವಿರುದ್ಧವೂ ಸೋಲು ಅನುಭವಿಸಿತ್ತು. ಆರಂಭಿಕ ಮೂರು ಪಂದಗಳಲ್ಲೂ ಸೋತ ಕಾರಣ ಮುಂಬೈ ಇಂಡಿಯನ್ಸ್ ತಂಡ ಟೂರ್ನಿಯ ಅಂಕಪಟ್ಟಿಯಲ್ಲಿ ಗೆಲುವಿನ ಖಾತೆ ತೆರೆಯದೇ ಕೊನೇ ಸ್ಥಾನಕ್ಕೆ ಕುಸಿದಿದೆ.

ಇದರಿಂದಾಗಿ ಪಾಂಡ್ಯ ಅವರನ್ನ ಟ್ರೋಲಿಗೆಳೆದಿರುವ ಕ್ರಿಕೆಟ್ ಅಭಿಮಾನಿಗಳು, ಇನ್ನಾದರೂ ಮುಂಬೈ ತಂಡ ಗೆಲ್ಲಲಿ, ನನ್ನನ್ನ ಸಕ್ಸಸ್‌ಫುಲ್ ಕ್ಯಾಪ್ಟನ್ ಅಂತಾ ಒಪ್ಪಿಕೊಳ್ಳಲಿ ಎಂದು ಪಾಂಡ್ಯ ಪ್ರಾರ್ಥನೆ ಮಾಡಿರಬೇಕು. ಪಾಪ ಗೆಲ್ಲಿಸಿಬಿಡಪ್ಪ ದೇವರೆ ಅಂತಾ ಕಿಚಾಯಿಸಿದ್ದಾರೆ.

ಇನ್ನೂ ಪಾಂಡ್ಯ ನಾಯಕತ್ವದ ಬಗ್ಗೆ ಪ್ರತಿಕ್ರಿಯೆ ನೀಡಿರುವ ಟೀಂ ಇಂಡಿಯಾದ ಮಾಜಿ ಕೋಚ್ ರವಿಶಾಸ್ತ್ರಿ, ಮೂರು ಪಂದ್ಯಗಳಲ್ಲೂ ಸೋತಿರುವುದು ಹಾರ್ದಿಕ್ ಪಾಂಡ್ಯ ಅವರ ನಾಯಕತ್ವವನ್ನು ಇನ್ನಷ್ಟು ಹದಗೆಡಿಸಿದೆ. ಅವರ ವೃತ್ತಿಜೀವನದಲ್ಲೂ ಇದು ಕಠಿಣ ಹಂತ. ಪಾಂಡ್ಯ ಅವರು ಈಗ ಆಡುತ್ತಿರೋದು ಭಾರತ ಕ್ರಿಕೆಟ್ ತಂಡವಲ್ಲ. ಇದು ಫ್ರಾಂಚೈಸಿ ಕ್ರಿಕೆಟ್. ಅಧಿಕ ಹಣ ಪಾವತಿಸಿರುತ್ತಾರೆ. ಫ್ರಾಂಚೈಸಿಯ ಮುಖ್ಯಸ್ಥರು ಯಾರನ್ನ ನಾಯಕರನ್ನಾಗಿ ಮಾಡಲು ಬಯಸುತ್ತಾರೋ, ಅವರೇ ನಾಯಕರಾಗುತ್ತಾರೆ. ಪಾಂಡ್ಯ ಉತ್ತಮವಾಗಿ ತಂಡವನ್ನು ನಿರ್ವಹಿಸಬಹುದು ಎಂದು ನಾನು ಭಾವಿಸುತ್ತೇನೆ ಎಂದಿದ್ದಾರೆ.

# ರಾಜಕಾರಣದಲ್ಲಿ ನಾನು ಎಷ್ಟು ದಿನ ಇರುತ್ತೇನೋ ಗೊತ್ತಿಲ್ಲ

**ಬೆಂಗಳೂರು:** ನಾನು ಮುಖ್ಯಮಂತ್ರಿಯಾಗಿ ಉಳಿಯಬೇಕು ಎಂದರೆ ವರುಣಾ ಕ್ಷೇತ್ರದಲ್ಲಿ 60 ಸಾವಿರ ಮತಗಳ ಲೀಡ್ ಕೊಡಬೇಕು ಎಂದು ಖುದ್ದು ಸಿಎಂ ಸಿದ್ದರಾಮಯ್ಯ ಮೊನ್ನೆ ಕಾಂಗ್ರೆಸ್ ಪ್ರಚಾರ ಸಭೆಯಲ್ಲಿ ಹೇಳಿದ್ದರು. ಇದು ಕಾಂಗ್ರೆಸ್‌ನಲ್ಲಿ ಮಾತ್ರವಲ್ಲದೇ ರಾಜ್ಯ ರಾಜಕಾರಣದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಇದರ ಬೆನ್ನಲ್ಲೇ ಇದೀಗ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಸಹ, ನಾನು ರಾಜಕೀಯದಲ್ಲಿ ಎಷ್ಟು ದಿನ ಇರುತ್ತೇನೋ, ಬಿಡುತ್ತೇನೋ ಗೊತ್ತಿಲ್ಲ ಎಂದು ಅಚ್ಚರಿ ಮಾತುಗಳನ್ನಾಡಿದ್ದಾರೆ. ಇದು ಕೂಡ ಈಗ ರಾಜ್ಯ ರಾಜಕಾರಣದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿಂದು ನೂತನ ಕಾರ್ಯಾಧ್ಯಕ್ಷರ ಅಧಿಕಾರ ಸ್ವೀಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ಕಾರ್ಯಾಧ್ಯಕ್ಷರು, ಪದಾಧಿಕಾರಿಗಳು ಕೆಲಸ ಮಾಡಬೇಕು. ವಿಸಿಟಿಂಗ್ ಕಾರ್ಡ್ ಇಟ್ಟುಕೊಂಡು ಓಡಾಡಿದರೆ ಆಗಲ್ಲ. ಕೆಲಸ ಮಾಡಿಲ್ಲ ಎಂದರೆ ಚುನಾವಣೆ ಬಳಿಕ ಮಾಜಿಗಳು ಆಗುತ್ತೀರಿ. ನಾನು ರಾಜಕಾರಣದಲ್ಲಿ ಎಷ್ಟು ದಿನ ಇರುತ್ತೇನೋ ಗೊತ್ತಿಲ್ಲ. ನೀವೆಲ್ಲಾ ಕೆಲಸ ಮಾಡಬೇಕು, ನಿಮಗೆ ಕಾರು, ರೂಂ ಕೊಡಲ್ಲ. ನಿಮ್ಮದೇ ಕಾರು ಬಳಸಿಕೊಂಡು ಸುತ್ತಬೇಕು ಎಂದು ಹೇಳಿದರು. ಇದರಲ್ಲಿ ಡಿಕೆ ಶಿವಕುಮಾರ್



ಅವರು, ತಾವು ರಾಜಕಾರಣದಲ್ಲಿ ಎಷ್ಟು ದಿನ ಇರುತ್ತೇನೋ ಗೊತ್ತಿಲ್ಲ ಎನ್ನುವ ಆಡಿದ ಮಾತುಗಳು ಸಂಚಲನ ಮೂಡಿಸಿದೆ.

ನಾವೆಲ್ಲಾ ವಿದ್ಯಾರ್ಥಿ ಘಟಕದಿಂದ ಬಂದಿದ್ದೇವೆ. ಈಶ್ವರ್ ಖಂಡ್ರೆ, ಸತೀಶ್ ಜಾರಕಿಹೊಳಿ, ರಾಮಲಿಂಗಾರೆಡ್ಡಿ, ಸಲೀಂ ಅಹ್ಮದ್, ಧ್ರುವನಾರಾಯಣರನ್ನು ನೆನಪಿಸಿಕೊಳ್ಳಬೇಕು. ಪಕ್ಷಕ್ಕೆ ಎಲ್ಲರೂ ಅವರದ್ದೇ ಆದ ಕೊಡುಗೆ ನೀಡಿದ್ದಾರೆ. ನಾವು ಓಬಿಗಬು ಘಟಕದಿಂದ ಬೆಳೆದು ಬಂದವರು. ಓಬಿಗಬುನಲ್ಲಿ ನನಗೆ ಟಿಕೆಟ್ ಕೊಟ್ಟಿರಲಿಲ್ಲ, ಯಾರು ಎಂದು ಹೇಳಲ್ಲ. ನಾವು ಹಂಗೋ ಹಿಂಗೋ ಬೆಳೆದುಕೊಂಡು ಬಂದಿದ್ದೇವೆ ಎಂದು ನೂತನ ಪದಾಧಿಕಾರಿಗಳಿಗೆ ಪಾಠ ಮಾಡಿದರು.

ಚರ್ಚೆಗೆ ಗ್ರಾಸವಾದ ಸಿಎಂ–ಡಿಸಿಎಂ ಮಾತು

ಮೊನ್ನೆ ಲೋಕಸಭಾ ಚುನಾವಣೆ ಪ್ರಚಾರದ ಸಭೆಯಲ್ಲಿ ಮಾತನಾಡುವ ವೇಳೆ ಸಿಎಂ ಸಿದ್ದರಾಮ್ಯಯ ಅವರು, ನಾನು ಮುಖ್ಯಮಂತ್ರಿಯಾಗಿ ಉಳಿಯಬೇಕು ಎಂದರೆ ವರುಣಾ ಕ್ಷೇತ್ರದಲ್ಲಿ 60 ಸಾವಿರ ಮತಗಳ ಲೀಡ್ ಕೊಡಬೇಕು ಎಂದು ಹೇಳಿದ್ದರು. ಇದು ಕಾಂಗ್ರೆಸ್‌ನಲ್ಲಿ ಮಾತ್ರವಲ್ಲ ರಾಜ್ಯ ರಾಜಕಾರಣದಲ್ಲಿ ಚರ್ಚೆಗೆ ಗ್ರಾಸವಾಗಿತ್ತು. ಇದೇನಿದು ಚುನಾವಣೆ ಸಂದರ್ಭದಲ್ಲಿ ಸಿಎಂ ಬಾಯಿಂದಲೇ ಇಂತಹ ಮಾತು ಏಕೆ ಬಂತು ಎಂದು ಅವರ ಬೆಂಬಲಿಗರು, ಮುಖಂಡರುಗಳಲ್ಲಿ ಭಾರೀ ಚರ್ಚೆಯಾಗಿದೆ. ಸಿಎಂ ಬೆನ್ನಲ್ಲೇ ಡಿಸಿಎಂ ಡಿಕೆ ಶಿವಕುಮಾರ್ ಸಹ ನಾನು ಎಷ್ಟು ದಿನ ರಾಜಕಾರಣದಲ್ಲಿ ಇರುತ್ತೇನೆ ಗೊತ್ತಿಲ್ಲ ಎಂದು ಅಚ್ಚರಿ ಹೇಳಿಕೆ ನೀಡಿದ್ದು, ಅಚ್ಚರಿಗೆ ಕಾರಣವಾಗಿದೆ.

# ಎಸ್‌ಟಿ ಸೋಮಶೇಖರ್ ಬಿಜೆಪಿಯಲ್ಲಿಲ್ಲ: ಆರ್ ಅಶೋಕ್

**ಬೆಂಗಳೂರು:** ಯಶವಂತಪುರ ಶಾಸಕ ಎಸ್‌ಟಿ ಸೋಮಶೇಖರ್ ಬಿಜೆಪಿಯಲ್ಲಿ ಇಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸೋಮಶೇಖರ್ ಕಾಲು ಹೊರಗಡೆ ಹಾಕಿದ್ದಾರೆ. ಅವರು ಕಾಂಗ್ರೆಸ್‌ನವರ ಸಂಪರ್ಕದಲ್ಲಿ ಇದ್ದಾರೆ. ಅವರ ವಿರುದ್ಧ ಬಿಜೆಪಿ ವರಿಷ್ಠರು ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದಿದ್ದಾರೆ.

ರಾಜ್ಯಸಭೆ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ವಿರುದ್ಧ ಸೋಮಶೇಖರ್ ಮತ ಹಾಕಿದ್ದಾರೆ. ಅವರು ಆಗಲೇ ಬಿಜೆಪಿಯಿಂದ ಕಾಲು ಹೊರಗಿಟ್ಟಿದ್ದರು ಎಂದು ಅಶೋಕ್ ಹೇಳಿದ್ದಾರೆ.

ಸಂಸದೆ ಸುಮಲತಾ ಪ್ರಭಾವ ಬಳಸಿಕೊಂಡು ಮಂಡ್ಯ, ಮೈಸೂರು ಗೆಲ್ಲುತ್ತೇವೆ ಎಂದು ಅಶೋಕ್ ಭರವಸೆ ವ್ಯಕ್ತಪಡಿಸಿದರು. ಕಳೆದ ಲೋಕಸಭಾ ಚುನಾವಣೆಯಲ್ಲಿ ಸುಮಲತಾಗೆ ಬೆಂಬಲ ನೀಡಿದ್ದೆವು. ಈ ಬಾರಿ ಚುನಾವಣಾ ಪ್ರಚಾರಕ್ಕೆ ಸಂಸದೆ ಸುಮಲತಾರನ್ನು ಬಳಸಿಕೊಳ್ಳುತ್ತೇವೆ. ಈಗಾಗಲೇ ಕೇಂದ್ರ ನಾಯಕರ ಜೊತೆ ಸುಮಲತಾ ಮಾತನಾಡಿದ್ದಾರೆ ಎಂದು ಅವರು ತಿಳಿಸಿದರು.



ಜೆಡಿಎಸ್ ಹಾಗೂ ಬಿಜೆಪಿ ತಳಮಟ್ಟದಿಂದಲೇ ಹೊಂದಾಣಿಕೆ ಆಗಬೇಕು. ಈ ಬಗ್ಗೆ ಮೊನ್ನೆ ಬೆಂಗಳೂರಿಗೆ ಬಂದಾಗ ಕೇಂದ್ರ ಸಚಿವ ಅಮಿತ್ ಶಾ ಕೂಡ ತಿಳಿಹೇಳಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಬೀದರ್‌ನಲ್ಲಿ ಅಸಮಾಧಾನ ಶಮನವಾಗಿದೆ, ಎಲ್ಲರೂ ಒಗ್ಗಟ್ಟಾಗಿದ್ದೇವೆ. ರಾಜ್ಯದ ಎಲ್ಲಾ ಕಡೆ ಸಮನ್ವಯ ಸಮಿತಿ ಸಭೆ ಮಾಡುತ್ತಿದ್ದೇವೆ. ಜೆಡಿಎಸ್ ಹಾಗೂ ಬಿಜೆಪಿ ಹಾಲು ಜೇನಿನಂತೆ ಒಗ್ಗೂಡುತ್ತಿದ್ದೇವೆ ಎಂದು ಅವರು ಹೇಳಿದ್ದಾರೆ.

ಈ ಮಧ್ಯೆ, ಸಂಸದೆ ಸುಮಲತಾ ಅಧಿಕೃತವಾಗಿ ಇಂದು ಬಿಜೆಪಿ ಸೇರ್ಪಡೆಯಾಗಿದ್ದಾರೆ. ಜೊತೆಗೆ ಕ್ರಿಕೆಟಿಗ ದೊಡ್ಡ ಗಣೇಶ್ ಮತ್ತು ಕೊಪ್ಪಳ ಮಾಜಿ ಸಂಸದ ಶಿವರಾಮಗೌಡ ಕೂಡ ಬಿಜೆಪಿ ಸೇರಿದ್ದಾರೆ. ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಪಕ್ಷದ ಕಚೇರಿಯಲ್ಲಿ ಬಿಜೆಪಿ ಹಿರಿಯ ನಾಯಕ, ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಪಕ್ಷದ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸಮ್ಮುಖದಲ್ಲಿ ಈ ನಾಯಕರು ಬಿಜೆಪಿ ಸೇರಿದ್ದಾರೆ.

ಕಳೆದ ಬಾರಿಯ ಲೋಕಸಭೆ ಚುನಾವಣೆ ವೇಳೆ ಮಂಡ್ಯದಿಂದ ಪಕ್ಷೇತರರಾಗಿ ಸ್ಪರ್ಧಿಸಿ ಸುಮಲತಾ ಜೆಡಿಎಸ್‌ನ ನಿಖಿಲ್ ಕುಮಾರಸ್ವಾಮಿ ವಿರುದ್ಧ ಭರ್ಜರಿ ಗೆಲುವು ಸಾಧಿಸಿದ್ದರು. ಬಿಜೆಪಿ ಅಭ್ಯರ್ಥಿ ಹಾಕದೇ ಬೆಂಬಲ ನೀಡಿತ್ತು. ಇದೀಗ ಈ ಬಾರಿ ಬಿಜೆಪಿ ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದು, ಮಂಡ್ಯ ಅಭ್ಯರ್ಥಿಯಾಗಿ ಕುಮಾರಸ್ವಾಮಿ ಕಣದಲ್ಲಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com